22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 290 | ನವದೆಹಲಿ | ಬೆಲೆ ₹ 10 | ಏಪ್ರಿಲ್ 26 2025, ಶನಿವಾರ

## ಒಳಪುಟಗಳಲ್ಲಿ

ಮಾನನಷ್ಟ ಮೊಕದ್ದಮೆ: ಹೋರಾಟಗಾರ್ತಿ ಮೇಧಾ ಪಾಟ್ಕರ್ ಬಂಧನ – ಪು.4

ನರೇಗಾ ಯೋಜನೆಯಡಿ 100 ದಿನಗಳ ಕೆಲಸಕ್ಕಾಗಿ ಒತ್ತಾಯ – ಪು.5



ಪೋಪ್ ಫ್ರಾನ್ಸಿಸ್ ಅವರ ಸರ್ಕಾರಿ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ರಾಷ್ಟ್ರಪತಿ ದ್ರೌಪದಿ ಮುರ್ಮು ದ್ರೌಪದಿ ವ್ಯಾಟಿಕನ್ ನಗರಕ್ಕೆ ತೆರಳಿದ್ದಾರೆ.

## ಪಹಲ್ಗಾಮ್ ಪ್ರಕರಣ: ಎಲ್ಲಾ ಮುಖ್ಯಮಂತ್ರಿಗಳೊಂದಿಗೆ ಅಮಿತ್ ಶಾ ಮಹತ್ವದ ಸಭೆ

# ಪಾಕಿಸ್ತಾನಿ ಪ್ರಜೆಗಳನ್ನು ಗುರುತಿಸಿ ದೇಶದಿಂದ ಹೊರಹಾಕಿ: ಗೃಹ ಸಚಿವರ ಆದೇಶ

**ನವದೆಹಲಿ, ಏ.25: ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಕ್ರವಾರ ಎಲ್ಲಾ ಮುಖ್ಯಮಂತ್ರಿಗಳನ್ನು ತಮ್ಮ ರಾಜ್ಯಗಳಲ್ಲಿ ವಾಸಿಸುವ ಪಾಕಿಸ್ತಾನಿ ಪ್ರಜೆಗಳನ್ನು ತಕ್ಷಣವೇ ಗುರುತಿಸುವಂತೆ ಕೇಳಿಕೊಂಡರು**



ಇದರಿಂದ ಅವರನ್ನು ವಾಪಸ್ ಕಳುಹಿಸಬಹುದು. ವೀಸಾಗಳನ್ನು ರದ್ದುಗೊಳಿಸಲು ಮತ್ತು ಗಡೀಪಾರು ಮಾಡುವ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಕೇಂದ್ರ ಸರ್ಕಾರಕ್ಕೆ ವಿವರಗಳನ್ನು ವರದಿ ಮಾಡುವಂತೆ ಅವರು ರಾಜ್ಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾಶ್ಮೀರದ ಪಹಲ್ಗಾಮ್ ಭಯೋತ್ಪಾದಕ ದಾಳಿಬಳಿಕ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸುವ ನಿಟ್ಟಿನಲ್ಲಿ ಈಗಾಗಲೇ ಪಾಕಿಸ್ತಾನಿ ಪ್ರಜೆಗಳಿಗೆ ನೀಡಲಾದ ಎಲ್ಲಾ ವೀಸಾಗಳನ್ನು ರದ್ದುಗೊಸಲಾಗಿದೆ.

ಇದರ ಬೆನ್ನಲ್ಲೇ ಇತ್ತ ಕರ್ನಾಟಕದಲ್ಲಿ ಅಲರ್ಟ್ ಆದ ಜಿಲ್ಲಾಡಳಿಯ ಮತ್ತು ಪೊಲೀಸ್ ಇಲಾಖೆ, ಪಾಕಿಸ್ತಾನಿಗಳಿಗಾಗಿ ಶೋಧ ನಡೆಸಿದ್ದು, ತುಮಕೂರು, ಮೈಸೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಪಾಕ್ ಪ್ರಜೆಗಳು ಪತ್ತೆ ಆಗಿದ್ದಾರೆ. ಸದ್ಯ ಮದುವೆಯಾಗಿ ಇಲ್ಲೇ ನೆಲೆಸಿರುವ ಪಾಕ್ ಪ್ರಜೆಗಳಿಗೆ ಇದೀಗ ಆತಂಕ ಶುರುವಾಗಿದೆ. ತುಮಕೂರು ಜಿಲ್ಲೆಯಲ್ಲಿ ಇಬ್ಬರು ಯುವತಿಯರು ಸೇರಿದಂತೆ ಓರ್ವ ವೃದ್ದೆ ವಾಸವಾಗಿರುವುದು ಪತ್ತೆ ಆಗಿದೆ. ಮದುವೆಯಾಗಿ ಗಂಡ, ಮಕ್ಕಳು, ಸಂಸಾರ ಅಂತ ಪಾಕಿಸ್ತಾನಿ ಮಹಿಳೆಯರು ಇಲ್ಲೇ ನೆಲೆಸಿದ್ದಾರೆ. ಮೂವರ ಗಂಡಂದಿರೂ ಕೂಡ ತುಮಕೂರು ಜಿಲ್ಲೆಯವರಾಗಿದ್ದು, ಪಾಕಿಸ್ತಾನಿ ಮೂಲದ ಮಹಿಳೆಯರನ್ನ ಮದುವೆಯಾಗಿ ಅವರನ್ನ ತುಮಕೂರಿಗೆ ಕರೆ ತಂದು ಇಲ್ಲಿಯೇ ಸಂಸಾರ ನಡೆಸಿದ್ದರು.ಒಬ್ಬ ಮಹಿಳೆ 20 ವರ್ಷಗಳಿಂದ, ಇನ್ನುಳಿದ ಇಬ್ಬರು ಹತ್ತು ಹಾಗೂ 15 ವರ್ಷಗಳಿಂದ ತುಮಕೂರಲ್ಲೇ ವಾಸವಾಗಿದ್ದಾರೆ. ಳೆದ ಐದಾರು ವರ್ಷಗಳ ಹಿಂದೆಯೇ ಭಾರತೀಯ ಪೌರತ್ವಕ್ಕಾಗಿ ಮಹಿಳೆಯರು ಅರ್ಜಿ ಸಲ್ಲಿಸಿದ್ದಾರೆ. ಮೂವರ ಟ್ರಾಕ್ ರೆಕಾರ್ಟ್ನಲ್ಲಿ ಯಾವುದೇ ತೊಂದರೆಯಿಲ್ಲ ಎಂದು ಪೊಲೀಸ್ ಇಲಾಖೆ ತಿಳಿಸಿದೆ. ಮೂವರ ಡೇಟಾವನ್ನ ತುಮಕೂರು ಜಿಲ್ಲಾಡಳಿತ ಸಂಗ್ರಹಿಸಿಟ್ಟುಕೊಂಡಿದೆ. ಸದ್ಯ 48 ಗಂಟೆಯೊಳಗೆ ಮಹಿಳೆಯರು ದೇಶ ಬಿಡದೇ ಇದ್ದರೆ ಸಮಸ್ಯೆಗೆ ಸಿಕ್ಕಿಕೊಳ್ಳುವ ಸಾಧ್ಯತೆ ಇದೆ.ಮೈಸೂರಲ್ಲಿ ಮೂವರು ಮಕ್ಕಳು ಸೇರಿದಂತೆ 8 ಜನ ಪಾಕ್ ಪ್ರಜೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿದ ಜಿಲ್ಲಾಡಳಿತಇತ್ತ ಮೈಸೂರಲ್ಲಿ ಮೂವರು ಮಕ್ಕಳು ಸೇರಿದಂತೆ 8 ಜನ ಪಾಕ್ ಪ್ರಜೆಗಳ ಬಗ್ಗೆ ಪೊಲೀಸರು ಮತ್ತು ಜಿಲ್ಲಾಡಳಿತ ಮಾಹಿತಿ ಕಲೆಹಾಕಿದ್ದಾರೆ. ಮೈಸೂರಿನಲ್ಲಿ ಇನ್ಯಾರಾದರೂ ಇದ್ದಾರಾ ಎಂಬ ಬಗ್ಗೆ ಮಾಹಿತಿ ಸಂಗ್ರಹ ಮಾಡಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಭಟ್ಕಳದಲ್ಲಿ 13 ಜನ ಪಾಕಿಸ್ತಾನಿ ಪ್ರಜೆಗಳನ್ನು ಪತ್ತೆ ಮಾಡಲಾಗಿದೆ. ಶಾಶ್ವತವಾಗಿ ವಿಸಾ ಪಡೆದಿರುವ ಹಿನ್ನೆಲೆ ಭಟ್ಕಳದ ಪಾಕಿಸ್ತಾನಿಗಳಿಗೆ ಗಡಿಪಾರು ಭಯವಿಲ್ಲ. ಭಟ್ಕಳ ಮತ್ತು ಪಾಕಿಸ್ತಾನಕ್ಕೆ ಹತ್ತಾರು ಜನರ ವೈವಾಹಿಕ ಸಂಬಂಧವಿದೆ. ಪುರುಷ ಹಾಗೂ ಮಹಿಳೆಯರು ಪಾಕಿಸ್ತಾನಿಗಳನ್ನ ಮದುವೆ ಆಗಿ ಸಂಸಾರ ನಡೆಸುತ್ತಿದ್ದಾರೆ. ಭಟ್ಕಳ ಮೂಲದ ವ್ಯಕ್ತಿಗಳನ್ನು ವಿವಾಹವಾಗಿ ಭಟ್ಕಳದಲ್ಲೇ 10 ಮಂದಿ ಪಾಕಿಸ್ತಾನಿ ಮಹಿಳೆಯರು ಹಾಗೂ ಅವರ ಮಕ್ಕಳು ನೆಲಸಿದ್ದಾರೆ.ದೀರ್ಘಾವಧಿ ವೀಸಾ ಪಡೆದಿರುವ ಪಾಕಿಸ್ತಾನಿ ಮಹಿಳೆಯರು ಎರಡು ವರ್ಷಕ್ಕೊಮ್ಮೆ ನವೀಕರಿಸಿಕೊಳ್ಳುತ್ತಿದ್ದಾರೆ. ಜೊತೆಗೆ ಭಾರತದ ಪೌರತ್ವಕ್ಕಾಗಿ ಅರ್ಜಿ ಸಲ್ಲಿಸಿದ್ದರು ಕೂಡ ಕೇಂದ್ರ ಸರ್ಕಾರ ಮಾತ್ರ ಈವರೆಗೂ ಭಾರತ ಪೌರತ್ವ ನೀಡಿಲ್ಲ. ದೀರ್ಘಾವಧಿ ವೀಸಾ ಇರುವುದರಿಂದ ಸದ್ಯ ಪಾಕಿಸ್ತಾನಿ ಮಹಿಳೆಯರು ಭಟ್ಕಳದಲ್ಲೇ ನೆಲಸಿದ್ದಾರೆ. ಸರ್ಕಾರದ ಯಾವುದೇ ಸೂಚನೆ ಬಾರದ ಹಿನ್ನಲೆಯಲ್ಲಿ ಭಟ್ಕಳದಲ್ಲೇ ಇರಲು ಪಾಕಿಸ್ತಾನಿ ಮಹಿಳೆಯರು ತೀರ್ಮಾನಿಸಿದ್ದಾರೆ. ಜೊತೆಗೆ ಜಿಲ್ಲಾ ಪೊಲೀಸರ ಸಂಪರ್ಕದಲ್ಲಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ 6 ಪಾಕಿಸ್ತಾನಿ ಪ್ರಜೆಗಳು ನೆಲೆಸಿದ್ದಾರೆ ಎಂದು ಬೆಳಗಾವಿ ಗ್ರಾಮಾಂತರ ಎಸ್ಪಿ ಗುಳೇದ್ ಮಾಹಿತಿ ನೀಡಿದ್ದಾರೆ. ಎಲ್‌ಟಿವಿ ವೀಸಾ ಮೇಲೆ 6 ಪಾಕ್ ಪ್ರಜೆಗಳು ಬಹಳ ವರ್ಷಗಳ ಹಿಂದೆ ಬಂದು ನೆಲೆಸಿದ್ದಾರೆ. ಸದ್ಯ 6 ಪಾಕ್‌ಪ್ರಜೆಗಳು ಪೊಲೀಸರ ನಿಗಾದಲ್ಲಿದ್ದಾರೆ. ಎಲ್‌ಟಿವಿ ವೀಸಾ ಮೇಲೆ ಬಂದವರ ಬಗ್ಗೆ ಸರ್ಕಾರ ಇನ್ನೂ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ.

## ಕರ್ನಾಟಕದಲ್ಲಿರುವ ಪಾಕ್ ಪ್ರಜೆಗಳ ಬಗ್ಗೆ ಪರಿಶೀಲನೆ: ಪರಮೇಶ್ವರ್ ಸ್ಪಷ್ಟನೆ



ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಪಾಕಿಸ್ತಾನಿ ಪ್ರಜೆಗಳು ನೆಲೆಸಿದ್ದಾರೆಯೇ ಎನ್ನುವ ಬಗ್ಗೆ ಪರಿಶೀಲನೆ ಮಾಡುತ್ತಿದ್ದೇವೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಶುಕ್ರವಾರ ಇಲ್ಲಿನ ಸದಾಶಿವನಗರ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾಕಿಸ್ತಾನದಿಂದ ಇಲ್ಲಿಗೆ ಬಂದು ಅಧಿಕೃತ ಹಾಗೂ ಅನಧಿಕೃತವಾಗಿ ಇರುವವರ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ. ಈ ಹಿಂದೆ ವಿದೇಶಿಗರು ನೆಲೆಸಿರುವ ಕುರಿತು ಅಧಿವೇಶನದಲ್ಲಿ ಪ್ರಶ್ನೆ ಕೇಳಿದಾಗ ಉತ್ತರ ನೀಡಿದ್ದೇವೆ. ಅದರಲ್ಲಿ ಪಾಕಿಸ್ತಾನಿ ಪ್ರಜೆಗಳು ಯಾರಿದ್ದಾರೆ, ಅಧಿಕೃತವಾಗಿ ಯಾರಿದ್ದಾರೆ ಎಂದು ತಿಳಿದು ಅವರನ್ನೆಲ್ಲ ವಾಪಸ್ ಕಳುಹಿಸಲೇಬೇಕಾಗುತ್ತದೆ ಎಂದರು.ಕೇಂದ್ರ ಸರಕಾರ ವಾಪಸ್ ಕಳಿಸುವ ತೀರ್ಮಾನ ತೆಗೆದುಕೊಂಡಿದೆ. ಅನಧಿಕೃತವಾಗಿ ಇರುವುದರ ಬಗ್ಗೆ ಪರಿಶೀಲಿಸಬೇಕು. ಅಧಿಕೃತವಾಗಿ ಇರುವವರನ್ನು ಕಳಿಸುವುದಕ್ಕೆ ತಕರಾರಿಲ್ಲ. ಈಗಾಗಲೇ ವೀಸಾ ರದ್ದು ಮಾಡಲಾಗಿದೆ, ವಾಪಸ್ ಹೋಗಿ ಎಂದೂ ಹೇಳಿ ಕೇಂದ್ರ ಸರಕಾರ ಸೂಚನೆ ನೀಡಿದೆ. ಆದರೆ, ಅನಧಿಕೃತವಾಗಿ ಇಲ್ಲಿ ಇರುವವರನ್ನು, ಪೊಲೀಸರು ಹುಡುಕ್ತಿದ್ದಾರೆ ಎಂದು ಹೇಳಿದರು.ಕೇಂದ್ರ ಸರಕಾರ ರಾಷ್ಟ್ರದ ಭದ್ರತೆಯಲ್ಲಿ ಈಗಾಗಲೇ ಅವರು ಕೆಲವು ನಿರ್ಧಾರಗಳನ್ನು ರಾಜತಾಂತ್ರಿಕವಾಗಿ ತೆಗೆದುಕೊಂಡಿದ್ದಾರೆ. ಇನ್ನೂ ಹೆಚ್ಚು ಕಠಿಣ ನಿರ್ಧಾರಗಳನ್ನು ಮಾಡಬೇಕು. ಇಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಬೇಕು. ಉಗ್ರ ಸಂಘಟನೆಗಳನ್ನು ಹತ್ತಿಕ್ಕುವ ನಿಟ್ಟಿನಲ್ಲಿ ಇನ್ನಷ್ಟು ಕಠಿಣ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ತಿಳಿಸಿದರು.

## ಭಯೋತ್ಪಾದಕ ಗುಂಪುಗಳು ಅಮೆರಿಕದ ಕೊಳಕು ಕೆಲಸಕ್ಕೆ ಬಳಕೆ: ಪಾಕ್ ರಕ್ಷಣಾ ಸಚಿವ ಆಸಿಫ್ ಸ್ಪಷ್ಟನೆ



ಇಸ್ಲಾಮಾಬಾದ್, ಏ.25: ಭಯೋತ್ಪಾದನೆಯ ಬಗ್ಗೆ ತನ್ನದೇ ಆದ ನಿಲುವಿಗೆ ನೇರ ವಿರುದ್ಧವಾಗಿ, ಪಾಕಿಸ್ತಾನದ ರಕ್ಷಣಾ ಸಚಿವ ಕವಾಜಾ ಆಸಿಫ್ ಅವರು ಭಯೋತ್ಪಾದಕ ಸಂಘಟನೆಗಳೊಂದಿಗೆ ನಿಕಟ ಸಂಪರ್ಕದ ಮೂಲಕ "ಮೂರು ದಶಕಗಳಿಂದ ಅಮೆರಿಕದ ಕೊಳಕು ಕೆಲಸ" ಮಾಡುವುದರಲ್ಲಿ ಇಸ್ಲಾಮಾಬಾದ್ ಪಾತ್ರವನ್ನು ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ.

26 ಪ್ರವಾಸಿಗರನ್ನು ಬಲಿತೆಗೆದುಕೊಂಡ ಘೋರ ಪಹಲ್ಗಾಮ್ ದಾಳಿಯಲ್ಲಿ ಪಾಕಿಸ್ತಾನ ತನ್ನ ತಪ್ಪನ್ನು ನಿರಾಕರಿಸುತ್ತಿದೆ, ಆದರೆ ಆಸಿಫ್ ಅವರ ಹೇಳಿಕೆಯು ಇಸ್ಲಾಮಾಬಾದ್ ಮನವಿಯನ್ನು ಮತ್ತಷ್ಟು ದುರ್ಬಲಗೊಳಿಸಲು ಮತ್ತು ಭಯೋತ್ಪಾದಕ ಸಂಸ್ಥೆಗಳನ್ನು ಬೆಂಬಲಿಸುವಲ್ಲಿ ಅದರ ಪಾತ್ರದ ಬಗ್ಗೆ ಅಂತರರಾಷ್ಟ್ರೀಯ ವಲಯಗಳಲ್ಲಿ ದೇಶದ ಕಳಪೆ ಖ್ಯಾತಿಯನ್ನು ರದ್ದುಗೊಳಿಸಲು ಸಹಾಯ ಮಾಡಿದೆ.

ಪಾಕಿಸ್ತಾನ ಈ ಭಯೋತ್ಪಾದಕ ಸಂಘಟನೆಗಳನ್ನು ಬೆಂಬಲಿಸುವ ಮತ್ತು ತರಬೇತಿ ನೀಡುವ ಮತ್ತು ಹಣಕಾಸು ಒದಗಿಸುವ ದೀರ್ಘ ಇತಿಹಾಸವನ್ನು ಹೊಂದಿದೆ ಎಂದು ನೀವು ಒಪ್ಪಿಕೊಳ್ಳುತ್ತೀರಾ ಎಂಬ ಮಾಧ್ಯಮಗಳ ಪ್ರಶ್ನೆಗೆ, ಆಸಿಫ್ ಖವಾಜಾ ಇಸ್ಲಾಮಾಬಾದ್‌ನ ಭಯೋತ್ಪಾದನೆಗೆ ಸಂಪೂರ್ಣ ಬೆಂಬಲವನ್ನು ಒಪ್ಪಿಕೊಂಡಿದ್ದಾರೆ, ನಾವು ಸುಮಾರು ಮೂರು ದಶಕಗಳಿಂದ ಅಮೆರಿಕ ಮತ್ತು ಬ್ರಿಟನ್ ಸೇರಿದಂತೆ ಪಶ್ಚಿಮಕ್ಕೆ ಈ ಕೊಳಕು ಕೆಲಸವನ್ನು ಮಾಡುತ್ತಿದ್ದೇವೆ ಎಂದರು.

ಮುಕ್ತ ಪುರಾವೆಗಳ ಹೊರತಾಗಿಯೂ, ಪಾಕಿಸ್ತಾನವು ಭಯೋತ್ಪಾದನೆಯನ್ನು ಬೆಂಬಲಿಸುವಲ್ಲಿನ ಎಲ್ಲಾ ಪಾತ್ರವನ್ನು ನಿರಾಕರಿಸಿದೆ, ಬದಲಿಗೆ ತನ್ನನ್ನು ತಾನು "ಬಲಿಪಶು" ಎಂದು ಕರೆದುಕೊಳ್ಳುತ್ತಿದೆ, ಇದು ಬೂಟಾಟಿಕೆಯನ್ನು ತೋರಿಸುತ್ತದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನದ ಸಂಪರ್ಕವನ್ನು ಸ್ಪಷ್ಟವಾಗಿ ನೋಡಲಾಗಿದೆ, ಇದನ್ನು ಭಾರತದ "ಸುಳ್ಳು ಧ್ವಜ ಕಾರ್ಯಾಚರಣೆ" ಎಂದು ದೇಶದ ಅಧಿಕಾರಿಗಳು ಕರೆದಿದ್ದಾರೆ, ಈ ಘಟನೆಯನ್ನು ಪಾಕಿಸ್ತಾನದ ಮೇಲೆ ದಾಳಿ ಮಾಡಲು ನೆಪವಾಗಿ ಬಳಸಿಕೊಳ್ಳಲು.



ಗಾಜಾ ನಗರದ ಆಹಾರ ವಿತರಣಾ ಕೇಂದ್ರದಿಂದ ಉಚಿತ ಆಹಾರ ಪಡೆಯಲು ಪರದಾಡಿದ ಪ್ಯಾಲೆಸ್ತೀನಿಯನ್ ಪ್ರಜೆಗಳು. ಗಾಜಾ ಪಟ್ಟಿಯಲ್ಲಿ ಶಾಶ್ವತವಾದ ಕದನ ವಿರಾಮವನ್ನು ತಲುಪಲು ಪ್ರಾದೇಶಿಕ ಮತ್ತು ಅಂತರರಾಷ್ಟ್ರೀಯ ಮಧ್ಯಸ್ಥಿಕೆ ತೀವ್ರಗೊಳ್ಳುತ್ತಿದ್ದಂತೆ, ಪ್ರಸ್ತುತ ರಾಜತಾಂತ್ರಿಕ ಪ್ರಯತ್ನಗಳು ತಮ್ಮ ಯುದ್ಧ–ಪೀಡಿತ ಸಮುದಾಯಗಳಿಗೆ ಸುಸ್ಥಿರ ಶಾಂತಿ ಮತ್ತು ಪರಿಹಾರವನ್ನು ನೀಡುತ್ತದೆ ಎಂಬ ಎಚ್ಚರಿಕೆಯ ಭರವಸೆಯನ್ನು ಅನೇಕ ಪ್ಯಾಲೆಸ್ತೀನಿಯನ್ನರು ವ್ಯಕ್ತಪಡಿಸುತ್ತಿದ್ದಾರೆ.

# ನಾಡಿನ ಬಹುಸಂಸ್ಕೃತಿ ಪ್ರತೀಕ ಕಾವೇರಿ ಆರತಿಗೆ ವಾರದಲ್ಲಿ ನೀಲನಕ್ಷೆ ಸಿದ್ಧ: ಡಿಸಿಎಂ ಡಿ.ಕೆ.ಶಿವಕುಮಾರ್

**ಸಮಿತಿ ಸದಸ್ಯರನ್ನಾಗಿ ಶಾಸಕರಾದ ಎ.ಬಿ.ರಮೇಶ ಬಂಡಿಸಿದ್ದೇಗೌಡ, ದಿನೇಶ್ ಗೂಳಿಗೌಡ ಸೇರಿ ಹಲವರ ನೇಮಿಸಿ ಸರ್ಕಾರ ಆದೇಶ**



**ಮಂಡ್ಯ, ಏ.22:** ನಾಡಿನ ವಿವಿಧ ಸಂಸ್ಕೃತಿ ಒಳಗೊಂಡಂತೆ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಸಮಿತಿಯು ನೀಲನಕ್ಷೆ ರೂಪಿಸುತ್ತಿದ್ದು, ವಾರದಲ್ಲಿ ಸಿದ್ಧವಾಗಲಿದೆ. ದಸರಾಗೆ ಕಾರ್ಯಕ್ರಮ ನಡೆಸುವ ಉದ್ದೇಶವಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಮಂಡ್ಯ ಜಿಲ್ಲೆ ಕೆಆರ್ ಎಸ್ ನಲ್ಲಿ "ಕಾವೇರಿ ಆರತಿ" ನಡೆಸುವ ಸಂಬಂಧ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಶುಕ್ರವಾರ, ಜನ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಜತೆ ಸಭೆ ನಡೆಸಿದ ನಂತರ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು. ನಮ್ಮ ಸಂಸ್ಕೃತಿ, ಧಾರ್ಮಿಕ ಆಚರಣೆ ಸೇರಿಸಿ ಕಾರ್ಯಕ್ರಮ ರೂಪಿಸಲು ಸಚಿವ ಚಲುವರಾಯಸ್ವಾಮಿ ಅವರ ನೇತೃತ್ವದ ಸಮಿತಿಗೆ ಸಲಹೆ ನೀಡಿದ್ದೇನೆ. ಈ ಸಮಿತಿ ಮುಂದಿನ 8–10 ದಿನಗಳಲ್ಲಿ ಕಾರ್ಯಕ್ರಮದ ನೀಲನಕ್ಷೆ ಸಿದ್ಧಪಡಿಸಲಿದೆ ಎಂದು ತಿಳಿಸಿದರು.

ಕೊಡಗಿನಿಂದ ಹಿಡಿದು, ದಕ್ಷಿಣ ಕನ್ನಡ, ಕರಾವಳಿ, ಮಲೆನಾಡು, ಬೆಂಗಳೂರು, ಮೈಸೂರು, ಚಾಮರಾಜನಗರ ಭಾಗದ ಜನರು ಈ ತಾಯಿಗೆ ನಮಿಸಲು ಅವಕಾಶ ಮಾಡಿಕೊಡಲಾಗುತ್ತಿದೆ. ಕಾವೇರಿ ನೀರು ಬಳಸುವ ತಮಿಳುನಾಡಿನ ಜನರೂ ಕೂಡ ಬಂದು ಕಾವೇರಿ ತಾಯಿಗೆ ಪೂಜಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಡಲಾಗುವುದು. ಈ ಕಾವೇರಿ ಆರತಿ ಕಾರ್ಯಕ್ರಮ ವಿನ್ಯಾಸ, ಸ್ವರೂಪ ಸೇರಿದಂತೆ ಇತರೆ ರೂಪುರೇಷೆಗಳ ಅಧಿಕಾರಿಗಳು ಹಾಗೂ ನಮ್ಮ ನಾಯಕರ ಜತೆ ಚರ್ಚೆ ಮಾಡಿದ್ದೇನೆ? ಎಂದು ತಿಳಿಸಿದರು.

ಚೆಸ್ಕಾಂ ಸಂಸ್ಥೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರು, ಪ್ರವಾಸೋದ್ಯಮ, ಧಾರ್ಮಿಕ ದತ್ತಿ ಇಲಾಖೆ, ಇಬ್ಬರು ಜಿಲ್ಲಾಧಿಕಾರಿಗಳು, 2 ಸ್ಥಳೀಯ ಶಾಸಕರು ಹಾಗೂ ಪರಿಷತ್ ಸದಸ್ಯರು, ಸಿಇಓಗಳು, ಬಿಡ್ಬ್ಲ್ಯೂಎಸ್ಎಸ್ ಬಿ ಮುಖ್ಯಸ್ಥರು ಸೇರಿ ಸಮಿತಿ ರಚಿಸಲಾಗಿದೆ. ನೀರಾವರಿ ಇಲಾಖೆ ಅಧಿಕಾರಿಗಳು ಮೂಲಸೌಕರ್ಯ ಕಲ್ಪಿಸುವ ಕೆಲಸ ಮಾಡಲಿದ್ದಾರೆ. ಚೆಸ್ಕಾಂ ಸಂಸ್ಥೆ ದೀಪಾಲಂಕಾರ ವ್ಯವಸ್ಥೆ ಮಾಡಲಿದ್ದಾರೆ? ಎಂದು ಮಾಹಿತಿ ನೀಡಿದರು.

ಈ ಕಾವೇರಿ ಆರತಿಗೆ ಸರ್ಕಾರ 92 ಕೋಟಿ ನೀಡಲು ತೀರ್ಮಾನಿಸಿದ್ದು, ಇದರ ಜತೆಗೆ ಬೇರೆ ಇಲಾಖೆಗಳು ಅಗತ್ಯ ಸಹಕಾರ ನೀಡಲಿವೆ. ಕನಿಷ್ಠ ಸುಮಾರು 10 ಸಾವಿರ ಜನರು ಕೂತು ಈ ಕಾರ್ಯಕ್ರಮ ವೀಕ್ಷಿಸಲು ಅವಕಾಶ ಕಲ್ಪಿಸಬೇಕು. ಎಷ್ಟು ದಿನ ಕಾರ್ಯಕ್ರಮ ಮಾಡಬೇಕು ಎಂಬುದನ್ನು ಸಮಿತಿ ತೀರ್ಮಾನ ಮಾಡಲಿದೆ. ಪಿಡಬ್ಲ್ಯೂಡಿ ಇಲಾಖೆ ಅಧಿಕಾರಿಗಳ ಜತೆ ಚರ್ಚೆ ಮಾಡಿ ಇಲ್ಲಿನ ರಸ್ತೆಗಳ ಅಭಿವೃದ್ಧಿ ಬಗ್ಗೆ ಚರ್ಚಿಸುತ್ತೇನೆ. ಧಾರ್ಮಿಕ ದತ್ತಿ ಇಲಾಖೆಯವರು ಕಾರ್ಯಕ್ರಮದಲ್ಲಿ ಯಾವ ರೀತಿ ಪೂಜೆ, ವೇದಗೋಷ್ಠಿ ಮಾಡಬೇಕು ಎಂದು ವರದಿ ನೀಡಿದ್ದು, ಎಲ್ಲವನ್ನು ಕ್ರೂಢೀಕರಿಸಿ ಅಂತಿಮ ರೂಪುರೇಷೆ ನೀಡಲಾಗುವುದು. ಈ ವಿಚಾರವಾಗಿ ಯಾವುದಾದರೂ ಸಂಘಟನೆಗಳು ನಮ್ಮ ಜತೆ ಚರ್ಚೆ ಮಾಡಲು ಇಚ್ಛಿಸಿದರೆ ಕರೆದು ಮಾತನಾಡುತ್ತೇವೆ. ಬೇರೆಯವರ ಸಲಹೆಗಳನ್ನು ಸ್ವೀಕರಿಸಲು ಸರ್ಕಾರ ಸಿದ್ಧವಿದೆ? ಎಂದು ಹೇಳಿದರು.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧ್ಯಕ್ಷರ ನೇತೃತ್ವದಲ್ಲಿ 8 ಮಂದಿ ಸದಸ್ಯರ ಸಮಿತಿ :

ರಾಜ್ಯದ ಜೀವನದಿ ಕಾವೇರಿ ಮಾತೆಗೆ ನಮನ ಹಾಗೂ ಪೂಜೆ ಸಲ್ಲಿಸಲು ಉತ್ತರ ಭಾರತದ ವಾರಣಾಸಿ ಹಾಗೂ ವಿವಿಧ ಧಾರ್ಮಿಕ ಸ್ಥಳಗಳಲ್ಲಿ ಗಂಗಾ ನದಿಗೆ ನಡೆಸುವ ಗಂಗಾರತಿಯ ಮಾದರಿಯಲ್ಲಿ ಕೃಷ್ಣರಾಜಸಾಗರದಲ್ಲಿ ಕಾವೇರಿ ಆರತಿ ನಡೆಸಲು ಅಧ್ಯಯನ ನಡೆಸಿ ವರದಿಯನ್ನು ಸಲ್ಲಿಸಲು ರಚಿಸಿರುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನಕ್ಕಾಗಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧ್ಯಕ್ಷರ ನೇತೃತ್ವದಲ್ಲಿ 8 ಮಂದಿ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಿ ರಾಜ್ಯ ಸರ್ಕಾರ ಆದೇಶಿಸಿದೆ. ಶಾಸಕರಾದ ಎ.ಬಿ.ರಮೇಶ ಬಂಡಿಸಿದ್ದೇಗೌಡ ಅವರು, ದಿನೇಶ್ ಗೂಳಿಗೌಡ ಅವರು, ಮಂಡ್ಯ ಜಿಲ್ಲಾಧಿಕಾರಿಗಳು, ಕಾವೇರಿ ನೀರಾವರಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು, ಕಾರ್ಮಿಕ ಇಲಾಖೆಯ ಉಪ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರು, ಮೈಸೂರಿನ ನೀರಾವರಿ ದಕ್ಷಿಣ ವಲಯದ ಮುಖ್ಯ ಎಂಜಿನಿಯರ್ ಅವರನ್ನು ಸದಸ್ಯರನ್ನಾಗಿ ಮಾಡಿ ಆದೇಶ ಹೊರಡಿಸಲಾಗಿದೆ.

### ಬೃಂದಾವನ ಉನ್ನತೀಕರಣಕ್ಕಾಗಿ ಯೋಜನಾ ಪ್ರಾಧಿಕಾರ

ಇನ್ನು ಬೃಂದಾವನ ಉದ್ಯಾನವನ ಉನ್ನತೀಕರಣಕ್ಕಾಗಿ ನಾನು ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಅಲ್ಲಿ ಯೋಜನಾ ಪ್ರಾಧಿಕಾರ ಮಾಡಲು ತೀರ್ಮಾನಿಸಿದ್ದು, ನಾಲ್ಕು ಪಂಚಾಯ್ತಿ ಸೇರಿಸಲಾಗುತ್ತಿದೆ. ಪಂಚಾಯ್ತಿಗಳ ಅಸ್ತಿತ್ವಕ್ಕೆ ತೊಂದರೆ ಆಗುವುದಿಲ್ಲ. ಅವುಗಳು ತಮ್ಮ ಕಾರ್ಯ ಮುಂದುವರಿಸಲಿವೆ. ಅವರ ಅಧಿಕಾರ ಮೊಟಕುಗೊಳಿಸುವುದಿಲ್ಲ. ರಸ್ತೆ, ಪಾರ್ಕ್ ಸೇರಿದಂತೆ ಅಭಿವೃದ್ಧಿ ಕಾರ್ಯಗಳಿಗೆ ಕಾನೂನು ಪ್ರಕಾರ ಜಾಗ ನೀಡುವ ಕೆಲಸವನ್ನು ಯೋಜನಾ ಪ್ರಾಧಿಕಾರ ಮಾಡಲಿದೆ. ಇದು ಅಭಿವೃದ್ಧಿ ಪ್ರಾಧಿಕಾರವಲ್ಲ, ಯೋಜನಾ ಪ್ರಾಧಿಕಾರ ಮಾತ್ರ. ಚಾಮುಂಡಿ ಬೆಟ್ಟ, ಮಲೆ ಮಹದೇಶ್ವರ ದೇವಾಲಯಕ್ಕೆ ಸಂಬಂಧಿಸಿದಂತೆ ಮಾಡಲಾಗಿರುವ ಯೋಜನಾ ಪ್ರಾಧಿಕಾರದಂತೆ ಇದು ಇರಲಿದೆ. ಇಲ್ಲಿಂದ ಬಂದ ಹಣವನ್ನು ಇಲ್ಲಿನ ಅಭಿವೃದ್ಧಿಗೆ ವಿನಿಯೋಗಿಸಲು ಈ ಪ್ರಾಧಿಕಾರ ಯೋಜನೆ ರೂಪಿಸಲಿದೆ ಎಂದು ತಿಳಿಸಿದರು. ಬೃಂದಾವನ ಉದ್ಯಾನವನ ಉನ್ನತೀಕರಣಕ್ಕೆ 7 ಸಂಸ್ಥೆಗಳು ಮುಂದಾಗಿದ್ದು, ಈ ಬಗ್ಗೆ ಚರ್ಚೆ ನಡೆಯುತ್ತಿದೆ. ಸಧ್ಯದಲ್ಲೇ ಇದರ ರೂಪುರೇಷೆ ಸಿದ್ಧಪಡಿಸಲಾಗುವುದು. ಈ ಭಾಗದಲ್ಲಿ ಏನೇ ಉದ್ಯೋಗ ಸೃಷ್ಟಿಯಾದರೂ ಈ ಭಾಗದ ಪಂಚಾಯ್ತಿ ವ್ಯಾಪ್ತಿಯ ಜನರಿಗೆ ಮೊದಲು ಆದ್ಯತೆ ನೀಡಲು ಷರತ್ತು ಹಾಕಲಾಗಿದೆ. ಸ್ಥಳೀಯ ಯುವಕರಿಗೆ ಈ ಸಂಸ್ಥೆಗಳು ತರಬೇತಿ ನೀಡಿ ಉದ್ಯೋಗ ನೀಡಬೇಕು ಎಂದು ಸೂಚಿಸಲಾಗಿದೆ ಎಂದರು.

# ಗ್ರೇಟರ್ ಮೈಸೂರು ಯೋಜನೆಗೆ ವಿಶ್ವಬ್ಯಾಂಕ್ ಉತ್ಸುಕ



**ಬೆಂಗಳೂರು, ಏ.25:** ವಿಶ್ವ ಬ್ಯಾಂಕು ಗ್ರೇಟರ್ ಮೈಸೂರು ಅಭಿವೃದ್ಧಿಪಡಿಸಲು ಆಸಕ್ತಿ ವಹಿಸಿರುವ ಹಿನ್ನೆಲೆಯಲ್ಲಿ ವಿಶ್ವ ಬ್ಯಾಂಕಿನ ಅಧಿಕಾರಿಗಳು ಇಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನಿಶ್ ಅವರನ್ನು ಭೇಟಿ ಮಾಡಿದರು. ಮೈಸೂರು ಮತ್ತು ಬೆಂಗಳೂರಿನಲ್ಲಿ ಒಂದು ವಾರಗಳಿಂದ ವಿವಿಧ ಇಲಾಖೆ ಮತ್ತು ಅಧಿಕಾರಿಗಳೊಂದಿಗೆ ಮೈಸೂರನ್ನು ಅಭಿವೃದ್ಧಿ ಪಡಿಸಲು ಅಧ್ಯಯನ ನಡೆಸಲಾಗಿದೆ. ಮೈಸೂರಿನ ಸ್ಥಳೀಯ ಪರಂಪರೆ ಜೊತೆಗೆ ಪ್ರವಾಸೋದ್ಯಮದ ಅಭಿವೃದ್ಧಿ, ಸ್ಥಳೀಯವಾಗಿ ಲಭ್ಯವಿರುವ ಮೈಸೂರು ರೇಷ್ಮೆ – ಮೈಸೂರ್ ಸ್ಯಾಂಡಲ್ ಸೋಪ್ ಆಧರಿಸಿ ಆರ್ಥಿಕ ಅಭಿವೃದ್ಧಿ ಹಾಗೂ ಅಂತಾರಾಷ್ಟ್ರೀಯ ವಿಮಾನನಿಲ್ದಾಣ, ಫಿಲ್ಮ್ ಸಿಟಿ, ಜಾಗತಿಕ ವ್ಯಾಪಾರದ ಆಧಾರದ ಮೇಲೆ ಕೈಗಾರಿಕೆಗಳ ಅಭಿವೃದ್ಧಿ ಮಾಡಲು ಉತ್ತಮ ಅವಕಾಶವಿದೆ ಎಂಬ ವರದಿ ಸಲ್ಲಿಸಿದ್ದರು. ಯುರೋಪಿಯನ್ ಮತ್ತು ಲ್ಯಾಟಿನ್ ದೇಶಗಳ ಮಾದರಿಯಲ್ಲಿ ಮೈಸೂರು ನಗರವನ್ನು ಅಭಿವೃದ್ಧಿಗೊಳಿಸಲು ಪ್ರಸ್ತಾಪಿಸಿದರು. ಸಭೆಯಲ್ಲಿ ವಿಶ್ವ ಬ್ಯಾಂಕಿನ ವಲಯ ಸಮನ್ವಯ ಅಧಿಕಾರಿ ಝಿಯಾ ಜೆರ್ರಿ ಚಾನ್, ವಿಶ್ವ ಬ್ಯಾಂಕಿನ ಅರ್ಬನ್ ಸ್ಪೆಷಲಿಸ್ಟ್ ಜ್ಯೋತಿ ವಿಜಯನ್ ನೈಯರ್, ವಿಶ್ವ ಬ್ಯಾಂಕಿನ ಅರ್ಬನ್ ಕನ್ಸಲ್ಟೆಂಟ್ ಗಣಪತಿ ಪಿ.ಜಿ ಹಾಗೂ ಅಂಜಲಿ ಮೋಹನ್ ಉಪಸ್ಥಿತರಿದ್ದರು.

# ರಾಮನಗರ ಹೆಸರನ್ನು ಬದಲಾಯಿಸಿಯೇ ತೀರುತ್ತೇನೆ: ಡಿಸಿಎಂ ಡಿಕೆಶಿ ಶಪಥ



ಬೆಂಗಳೂರು, ಏ.25: ಬೆಂಗಳೂರು– ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆಯಾಗಿ ಹೆಸರು ಬದಲಿಸುವುದು ಹೇಗೆ ಎಂಬುದು ನನಗೆ ಗೊತ್ತಿದೆ. ನಾನು ಅದನ್ನು ಮಾಡಿಯೇ ಮಾಡುತ್ತೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಶುಕ್ರವಾರ ಖಾಸಗಿ ಸಮಾರಂಭದಲ್ಲಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಆಗಿ ರೂಪಿಸುವ ವಿಧೇಯಕಕ್ಕೆ ಅಂಗೀಕಾರ ದೊರೆತಿದೆ. ರಾಮನಗರ ಹೆಸರು ಬದಲಾವಣೆ ಮಾಡಿಯೇ ಮಾಡುತ್ತೇನೆ. ಯಾರು ಏನೇ ಮಾಡಿದರೂ ನಾನು ಬಿಡುವುದಿಲ್ಲ ಎಂದರು. ಇದು ನನ್ನೂರು. ನಾನು ಹುಟ್ಟಿ ಬೆಳೆದ ಊರು. ಯಾರಾದರೂ ಅವರ ಅಪ್ಪ–ಅಮ್ಮನ ಹೆಸರು ಬದಲಿಸಿಕೊಳ್ತಾರಾ? ಬದಲಿಸಿಕೊಳ್ಳಲು ಆಗುತ್ತಾ? ಆಧಾರ್ ಕಾರ್ಡ್ ನಲ್ಲಿ ಮಾಡಿಕೊಳ್ಳಬಹುದು ಅಷ್ಟೆ ಎಂದು ಅವರು ಮಾರ್ಮಿಕವಾಗಿ ನುಡಿದರು.ನಾನು ಎಲ್ಲಿಂದಲೋ ಬಂದವನು ಅಲ್ಲ. ಎಲ್ಲಿಂದಲೋ ಬಂದವರು ಹೆಸರು ಬದಲಿಸಿದ್ದಾರೆ. ನಾವು ಇಲ್ಲಿಯವರೆಗೆ ನಮ್ಮ ಹೆಸರು ಇಟ್ಕೊಬೇಕು ಅಲ್ಲವೇ? ಮಾಜಿ ಪ್ರಧಾನಿಗಳು ಹೋರಾಟ ಮಾಡ್ತೀವಿ ಅಂತ ಹೇಳಿದ್ದಾರೆ. ಆದರೆ ಅವರ ಮಗ ಮಾಡಿದ್ದನ್ನು ನಾವು ಇಲ್ಲಿ ಸರಿಮಾಡುತ್ತಿದ್ದೇವೆ. ಅವರು ಅರ್ಥ ಮಾಡಿಕೊಂಡು ಸರಿಪಡಿಸಬೇಕು ಎಂದು ಡಿಕೆ ಶಿವಕುಮಾರ್ ನುಡಿದರು.

## ನಿತ್ಯ ಪಂಚಾಂಗ 26.04.2025 ಶನಿವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ಚೈತ್ರ ಬಹುಳ

ತ್ರಯೋದಶಿ, ರೇವತಿ ನಕ್ಷತ್ರ, ಚತುರ್ದಶಿ, ಶಿವರಾತ್ರಿ, ಅನಧ್ಯಯನತ್ರಯ, ವರಾಹ ಜಯಂತಿ, ಮುಡುಕುತೊರೆ ಪರಿಷೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಇಸ್ರೋ ಮಾಜಿ ಅಧ್ಯಕ್ಷ ಕಸ್ತೂರಿ ರಂಗನ್ ನಿಧನ




**ಬೆಂಗಳೂರು, ಏ.25:** ಇಸ್ರೊ ಮಾಜಿ ಅಧ್ಯಕ್ಷ ಮತ್ತು ನೂತನ ರಾಷ್ಟ್ರೀಯ ಶಿಕ್ಷಣ ನೀತಿಯ(ಎನ್ಇಪಿ) ಕರಡು ಸಮಿತಿಯ ಅಧ್ಯಕ್ಷರಾಗಿದ್ದ ಕೆ. ಕಸ್ತೂರಿ ರಂಗನ್ ಶುಕ್ರವಾರ ಬೆಂಗಳೂರಿನಲ್ಲಿ ನಿಧನರಾದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅವರಿಗೆ 84 ವರ್ಷ ವಯಸ್ಸಾಗಿತ್ತು. ಕೆ. ಕಸ್ತೂರಿರಂಗನ್ ಅವರು ಇಂದು ಬೆಳಿಗ್ಗೆ ಬೆಂಗಳೂರಿನಲ್ಲಿರುವ ತಮ್ಮ ನಿವಾಸದಲ್ಲಿ ವಿಧಿವಶರಾದರು. ಏಪ್ರಿಲ್ 27ರಂದು ರಾಮನ್ ಸಂಶೋಧನಾ ಸಂಸ್ಥೆಯಲ್ಲಿ (ಆರ್ಆರ್ಐ) ಅವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಎನ್ಇಪಿಯಲ್ಲಿನ ಶಿಕ್ಷಣ ಸುಧಾರಣೆಗಳ ಹಿಂದಿನ ವ್ಯಕ್ತಿ ಎಂದು ಕರೆಯಲ್ಪಡುವ ಕಸ್ತೂರಿರಂಗನ್, ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದ ಕುಲಪತಿ ಮತ್ತು ಕರ್ನಾಟಕ ಜ್ಞಾನ ಆಯೋಗದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು.ರಾಜ್ಯಸಭೆಯ ಸದಸ್ಯರಾಗಿ(2003–09), ಯೋಜನಾ ಆಯೋಗದ ಸದಸ್ಯರಾಗಿಯೂ ಕೆಲಸ ಮಾಡಿದ್ದರು.2004ರ ಏಪ್ರಿಲ್‌ನಿಂದ 2009ರವರೆಗೆ ಬೆಂಗಳೂರಿನ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಸ್ಟಡೀಸ್ ಸಂಸ್ಥೆಯ ನಿರ್ದೇಶಕರಾಗಿದ್ದರು.

ದೇಶದ ಶ್ರೇಷ್ಠ ವಿಜ್ಞಾನಿ, ಪದ್ಮವಿಭೂಷಣ ಪುರಸ್ಕೃತರು ಹಾಗೂ ಇಸ್ರೋದ ಮಾಜಿ ಅಧ್ಯಕ್ಷರಾಗಿ ಅಪ್ರತಿಮ ಸೇವೆ ಸಲ್ಲಿಸಿರುವ ಡಾ. ಕೃಷ್ಣಸ್ವಾಮಿ ಕಸ್ತೂರಿ ರಂಗನ್ ಅವರು ಇನ್ನಿಲ್ಲ ಎಂಬ ಸುದ್ದಿ ತಿಳಿದು ಮನಸ್ಸು ಭಾರವಾಗಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ತಮ್ಮ ಶೋಕ ವ್ಯಕ್ತಪಡಿಸಿದ್ದಾರೆ. ಅನೇಕ ರಾಕೆಟ್ ಗಳ ಉಡಾವಣೆ, ಭಾರತದಲ್ಲಿ ವಿಜ್ಞಾನ–ತಂತ್ರಜ್ಞಾನದ ಅಭಿವೃದ್ಧಿ ಹಾಗೂ ಇಸ್ರೋದ ಬೆಳವಣಿಗೆಯಲ್ಲಿ ಇವರ ಕೊಡುಗೆ ಅತ್ಯಮೂಲ್ಯವಾದುದು. ಪಶ್ಚಿಮ ಘಟ್ಟಗಳ ಸಂರಕ್ಷಣೆಗಾಗಿ ಇವರು ನೀಡಿದ್ದ ವರದಿ ಇಂದಿಗೂ ಪ್ರಸ್ತುತ.

ಶ್ರೀಯುತರ ಆತ್ಮಕ್ಕೆ ಸದ್ಗತಿ ದೊರಕಲಿ, ಕುಟುಂಬಸ್ಥರು, ಆಪ್ತರು ಹಾಗೂ ಅಪಾರ ಅಭಿಮಾನಿಗಳು, ಶಿಷ್ಯವರ್ಗಕ್ಕೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ

## ಚಾಮರಾಜನಗರ ಕನಕ ಸಮುದಾಯ ಭವನಕ್ಕೆ ಶಂಕುಸ್ಥಾಪನೆ

# ಎಲ್ಲ ವರ್ಗದವರಿಗೆ ನೆರವಾಗಲು ಹಾಸ್ಟೆಲ್ ಶಿಕ್ಷಣ ಸಂಸ್ಥೆಗಳನ್ನು ನಿರ್ಮಿಸಿ: ಸಿಎಂ ಕರೆ



**ಚಾಮರಾಜನಗರ, ಏ.25:** ಎಲ್ಲಾ ಜಾತಿ ಮತ್ತು ಎಲ್ಲಾ ಧರ್ಮದ ಬಡವರಿಗೆ ನೆರವಾಗುವ ರೀತಿಯಲ್ಲಿ ಹಾಸ್ಟೆಲ್ ಮತ್ತು ಶಿಕ್ಷಣ ಸಂಸ್ಥೆಗಳನ್ನು ನಿರ್ಮಿಸಿ. ಇದರಿಂದ ಅಂಬೇಡ್ಕರ್ ಅವರ ಸಮಾನತೆಯ ಅವಕಾಶ ಈಡೇರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಜಿಲ್ಲಾ ಕುರುಬರ ಸಂಘ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಕನಕ ಸಮುದಾಯ ಭವನಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.ಈಗಾಗಲೇ 2 ಕೋಟಿ ರೂಪಾಯಿಯಲ್ಲಿ 50 ಲಕ್ಷ ರೂಪಾಯಿ ಬಿಡುಗಡೆ ಆಗಿದೆ. ಹಲವರು ದೇಣಿಗೆ ಕೂಡ ಕೊಟ್ಟಿದ್ದಾರೆ. ಇವರೆಲ್ಲರಿಗೂ ಒಳ್ಳೆಯದಾಗಲಿ ಎಂದರು. ಸಮುದಾಯ ಭವನ ಕಟ್ಟಿ. ಆದರೆ, ಇದಕ್ಕಿಂತ ಹೆಚ್ಚಾಗಿ ಹಾಸ್ಟೆಲ್ ಮತ್ತು ಶಿಕ್ಷಣ ಸಂಸ್ಥೆ ನಿರ್ಮಿಸಿ, ಜಿಲ್ಲೆಯ ಎಲ್ಲಾ ಹಿಂದುಳಿದ ಸಮುದಾಯಗಳ ಬಡಮಕ್ಕಳಿಗೆ ಶೈಕ್ಷಣಿಕ ನೆರವು ದೊರಕುವಂತೆ ಮಾಡಿ ಎಂದು ಕರೆ ನೀಡಿದರು.

ಚಾಮರಾಜನಗರ ಜಿಲ್ಲೆ ಅತ್ಯಂತ ಹಿಂದುಳಿದಿರುವ ಜಿಲ್ಲೆ. ಇಲ್ಲಿ ಶಿಕ್ಷಣ ಹೆಚ್ಚೆಚ್ಚು ಸಿಗಬೇಕಿದೆ. ಶಿಕ್ಷಣ ಕಲಿಯಬೇಕಿದ್ದರೆ ಹಾಸ್ಟೆಲ್‌ಗಳ ಅಗತ್ಯವೂ ಇದೆ. ನಮ್ಮ ಸರ್ಕಾರ ಎಲ್ಲಾ ಜಾತಿಯ ಬಡವರಿಗೂ ಅನುಕೂಲ ಆಗುವ ಯೋಜನೆಗಳನ್ನು ಜಾರಿಗೆ ತಂದಿದೆ. ಶಕ್ತಿ ಯೋಜನೆ ಸೇರಿ ನಮ್ಮ ಐದೂ ಗ್ಯಾರಂಟಿಗಳು ಎಲ್ಲಾ ಜಾತಿ, ಎಲ್ಲಾ ಧರ್ಮದ ಬಡ ಮಹಿಳೆಯರಿಗೂ ಅನುಕೂಲ ಆಗುತ್ತಿದೆ. ಕೆಲಸಕ್ಕೆ ಹೋಗುವ ಬಡ ಮತ್ತು ಮಧ್ಯಮ ವರ್ಗದ ಹೆಣ್ಣು ಮಕ್ಕಳಿಗೆ ಇದರಿಂದ ಹೆಚ್ಚು ಸಮಾಧಾನ ಆಗಿದೆ. ವಿದ್ಯಾರ್ಥಿನಿಯರಿಗೂ ಸಮಾಧಾನ ಆಗಿದೆ. ಹೀಗೆ ಎಲ್ಲಾ ಜಾತಿಯ ಬಡವರು, ಮಧ್ಯಮ ವರ್ಗದವರಿಗೆ ನೆರವಾಗುವ ಕೆಲಸ ಮಾಡಿ ಎಂದು ಸಲಹೆ ನೀಡಿದರು.ಸಂವಿಧಾನ ಬಂದು 75 ವರ್ಷ ಆದರೂ ಸಾಮಾಜಿಕ ನ್ಯಾಯ ಈಡೇರಿಲ್ಲ. ಅವಕಾಶ ವಂಚಿತ ಸಮುದಾಯಗಳ ಆರ್ಥಿಕ, ಸಾಮಾಜಿಕ ಸ್ಥಿತಿಗತಿ ಅರಿಯಲು ಸಮೀಕ್ಷೆ ನಡೆಸಿದ್ದೇವೆ.

2015ರಲ್ಲಿ ನಡೆಸಿದ ಸಮೀಕ್ಷೆಯನ್ನು ಹಿಂದಿನ ಸಿಎಂಗಳು ಸ್ವೀಕರಿಸಿಲ್ಲ. ನಾನು ಸ್ವೀಕರಿಸಿ ಸಂಪುಟದ ಮುಂದೆ ಇಟ್ಟಿದ್ದೀನಿ. ಇದು ಯಾರ ವಿರುದ್ಧವೂ ಇರುವ ಸಮೀಕ್ಷೆ ಅಲ್ಲ. ಎಲ್ಲರ ಸ್ಥಿತಿ ಗತಿ ತಿಳಿಯುವ ಸಮೀಕ್ಷೆ ಮಾತ್ರ ಆಗಿದೆ ಎಂದರು.

ಬಿಜೆಪಿಯ ರಾಮಾ ಜೋಯಿಸ್ ಅವರು ಮೀಸಲಾತಿ ವಿರೋಧಿಸಿ ಕೋರ್ಟ್‌ಗೆ ಹೋಗಿದ್ದರು. ನಿಮಗೆ ಸೈದ್ಧಾಂತಿಕವಾಗಿ ಸ್ಪಷ್ಟ ತಿಳಿವಳಿಕೆ ಇರಬೇಕು.

ನೀವು ನನಗೂ ಚಪ್ಪಾಳೆ ತಟ್ಟೋದು, ಸಾಮಾಜಿಕ ನ್ಯಾಯದ ವಿರೋಧಿ ಆಗಿರುವ ಬಿಜೆಪಿಯವರ ಮಾತಿಗೂ ಚಪ್ಪಾಳೆ ತಟ್ಟೋದನ್ನು ನಿಲ್ಲಿಸಿ. ನಮ್ಮ ಪರವಾಗಿ ಇರುವವರು ಯಾರು ಎಂದು ತಿಳಿದು ಆಶೀರ್ವಾದ ಮಾಡಿ ಎಂದರು.

ನನಗೆ ಚಾಮರಾಜನಗರ ಅತ್ಯಂತ ಇಷ್ಟವಾದ ಜಿಲ್ಲೆ. ಚಾಮರಾಜನಗರಕ್ಕೆ 20 ಸಾರಿ ಬಂದು–ಎರಡು ಬಾರಿ ಮುಖ್ಯಮಂತ್ರಿ ಆಗಿದ್ದೇನೆ ಎಂಬುದಾಗಿ ಸಿಎಂ ಸಿದ್ಧರಾಮಯ್ಯ ತಿಳಿಸಿದರು.

**ಚಾಮರಾಜನಗರದ ಹನೂರಿನಲ್ಲಿ ನೂತನ ಇಂದಿರಾ ಕ್ಯಾಂಟೀನನ್ನು ಲೋಕಾರ್ಪಣೆಗೊಳಿಸಿ ಸಿಎಂ ಸಿದ್ದರಾಮಯ್ಯ ಉಪಹಾರ ಸವಿದರು.ನಂತರ ಮಾತನಾಡಿದ ಸಿಎಂ ಸಿದ್ದರಾಮಯ್ಯ ಬಡವರು, ಕೂಲಿಕಾರ್ಮಿಕರು, ರೋಗಿಗಳು, ಆಟೋ – ಕ್ಯಾಬ್ ಚಾಲಕರು, ಗೀಗ್ ಕಾರ್ಮಿಕರು ಹೀಗೆ ಆರ್ಥಿಕವಾಗಿ ಅಶಕ್ತರಾದ ಜನರಿಗೆ ರಿಯಾಯಿತಿ ದರದಲ್ಲಿ ಸ್ವಾದಿಷ್ಟ ಆಹಾರ ಒದಗಿಸಲು ನಮ್ಮ ಸರ್ಕಾರ ರೂಪಿಸಿ ಜಾರಿಗೆ ಕೊಟ್ಟ ಯೋಜನೆ ಮೊದಲು ಬೆಂಗಳೂರು ನಗರದಲ್ಲಿ ಆರಂಭಗೊಂಡ ಈ ಯೋಜನೆ ಅಪಾರ ಜನಮನ್ನಣೆ ಗಳಿಸಿದ್ದನ್ನು ನೋಡಿ ನಂತರ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಿಗೂ ವಿಸ್ತರಿಸಲಾಯಿತು. ನಮ್ಮ ಈ ಯೋಜನೆ ಇಂದಿಗೂ ಸ್ವಚ್ಛ ಮತ್ತು ಗುಣಮಟ್ಟದ ಆಹಾರಕ್ಕೆ ಹೆಸರುವಾಸಿಯಾಗಿ, ಲಕ್ಷಾಂತರ ಜನರ ಹಸಿವು ನೀಗಿಸುತ್ತಿದೆ ಎನ್ನುವುದು ಸಂತಸದ ವಿಷಯ.**

# ಬಿಡದಿ ಟೌನ್‌ಶಿಪ್ ವಿಚಾರ ಎಚ್‌ಡಿಕೆ ಕಾಲದಲ್ಲೇ ಉಗಮವಾಗಿದ್ದು ಡಿ.ಕೆ.ಶಿವಕುಮಾರ್ ತಿರುಗೇಟು



**ಬೆಂಗಳೂರು, ಏ.25:** ಬಿಡದಿ ಟೌನ್‌ಶಿಪ್‌ಗೆ ರೈತರ ಭೂಮಿ ವಶಕ್ಕೆ ಪಡೆದಿರೋದನ್ನು ಕೈಬಿಡುವಂತೆ ಸಿಎಂ ಸಿದ್ದರಾಮಯ್ಯಗೆ ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡರ ಪತ್ರ ಬರೆದಿದ್ದಾರೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ಮೈಸೂರಿನಲ್ಲಿ ಡಿ.ಕೆ.ಶಿವಕುಮಾರ್ ಮಾತನಾಡಿದ್ದು, ಕುಮಾರಸ್ವಾಮಿ ಕಾಲದಲ್ಲೇ 7 ಟೌನ್‌ಶಿಪ್ ಮಾಡಬೇಕೆಂದುತೀರ್ಮಾನ ಆಗಿದ್ದು, ಅದಕ್ಕಾಗಿ 300 ಕೋಟಿ ರೂ.ಗಳನ್ನೂ ಕೊಟ್ಟಿದ್ದರು ಎಂದು ತಿರುಗೇಟು ನೀಡಿದ್ದಾರೆ.

ಟೌನ್‌ಶಿಪ್ ಯೋಜನೆ ಆಗಿದ್ದು ಕುಮಾರಸ್ವಾಮಿ ಅವರ ಕಾಲದಲ್ಲೇ ಎಂದಿರುವ ಡಿಸಿಎಂ ಡಿ.ಕೆ.ಶಿವಕುಮಾರ್, ನಾನು ಡಿನೋಟಿಫಿಕೇಶ್ ಮಾಡಲು ಹೋಗಲ್ಲ. ಈ ಹಿಂದೆ ನನ್ನ ಮೇಲೆ ಏನೆಲ್ಲಾ ಹೇಳಿದ್ರು, ಅದೆಲ್ಲ ಇತಿಹಾಸ. ಟೌನ್‌ಶಿಪ್ ಪಿತಾಮಹ ದೇವೇಗೌಡ ಹಾಗೂ ಕುಮಾರಸ್ವಾಮಿ ಎಂದು ತಿರುಗೇಟು ನೀಡಿದ್ದಾರೆ.ಇನ್ನು, ಯಾರು ಏನೇ ಹೇಳಿದ್ರು ಗ್ರೇಟರ್ ಬೆಂಗಳೂರು ಮಾಡಿಯೇ ಮಾಡುತ್ತೇವೆ ಎಂದಿರುವ ಡಿ.ಕೆ ಶಿವಕುಮಾರ್, ಬೆಂಗಳೂರಿಗಿಂತ ಚೆನ್ನಾಗಿ ಮಾಡುತ್ತೇವೆ. 10 ಸಾವಿರ ಎಕರೆಯಲ್ಲಿ ಉತ್ತಮ ಸಿಟಿ ನಿರ್ಮಾಣ ಮಾಡುತ್ತೇವೆ ಇದು ಮಾಡೆಲ್ ಸಿಟಿ ಆಗತ್ತದೆ. ರೈತರು ಜಮೀನಿನ ಬದಲಾಗಿ, ದುಡ್ಡು ತೆಗೆದುಕೊಳ್ಳಬಹುದು. ಇಲ್ಲದಿದ್ರೆ ಅಭಿವೃದ್ಧಿ ಪಡಿಸಿದ ಲ್ಯಾಂಡ್ ತೆಗೆದುಕೊಳ್ಳಬಹುದು ಎಂದಿದ್ದಾರೆ. ಎರಡು ಬಾರಿ ಕುಮಾರಸ್ವಾಮಿ ಸಿಎಂ ಆಗಿದ್ರಲ್ಲ ಯಾಕೆ ರೈತರ ಭೂಮಿ ಸ್ವಾಧೀನದಿಂದ ಕೈಬಿಡಲಿಲ್ಲ, ಎಂದು ಪ್ರಶ್ನೆ ಮಾಡಿರುವ ಡಿಸಿಎಂ ಡಿ.ಕೆ.ಶಿವಕುಮಾರ್, ಈ ಬಗ್ಗೆ ದೇವೇಗೌಡರೇ ಮಾತನಾಡಬೇಕು ಎಂದು ಆಗ್ರಹ ಮಾಡಿದ್ದಾರೆ. ಇದರಲ್ಲಿ ರಾಜಕೀಯ ಬೇಡ. ಇದೆಲ್ಲ ನಿಮ್ಮ ಮಗನೇ ಮಾಡಿದ್ದು, ನಿಮ್ಮ ಕಾಲದಲ್ಲೇ ಆಗಿದ್ದು ಅನ್ನೋ ಮೂಲಕ ದೇವೇಗೌಡರಿಗೆ ಡಿ.ಕೆ.ಶಿವಕುಮಾರ್ ಟಾಂಗ್ ಕೊಟ್ಟಿದ್ದಾರೆ.

# ಬಿಬಿಎಂಪಿ ಚುನಾವಣೆ ನಡೆಸುವುದು ಬಿಡುವುದು ಡಿಸಿಎಂ ಡಿ.ಕೆ.ಶಿವಕುಮಾರ್ ನಿರ್ಧಾರ: ಸಚಿವ ಸೋಮಣ್ಣ ವ್ಯಂಗ್ಯ



**ಬೆಂಗಳೂರು, ಏ.25–** ಬೆಂಗಳೂರು ಮಹಾನಗರ ಪಾಲಿಕೆಯನ್ನು ವಿಭಜಿಸಿ ಗ್ರೇಟರ್ ಬೆಂಗಳೂರು ರಚನೆಗೆ ವಿರೋಧ ವ್ಯಕ್ತಪಡಿಸಿರುವ ಕೇಂದ್ರ ಸಚಿವ ವಿ. ಸೋಮಣ್ಣ ಅವರು, ಮುಂದೆ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಗ್ರೇಟರ್ ಬೆಂಗಳೂರು ಕಾಯ್ದೆ ವಾಪಸ್ ಪಡೆಯುವ ಸುಳಿವು ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಕಾಯ್ದೆ ಮೂಲಕ ಬಿಬಿಎಂಪಿ ಚುನಾವಣೆ ಇನ್ನಷ್ಟು ವಿಳಂಬ ಮಾಡಲು ಹೊರಟಿದ್ದಾರೆ. ಇವೆಲ್ಲಾ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಿರ್ಧಾರಗಳು. ಅವರೇ ಈ ಕಾಯ್ದೆ ತರಲು ಹೊರಟಿರುವ ಭಾಸ್ ಎಂದು ಹೇಳಿದರು. ಮುಂದಿನ ಬಾರಿ ಕಾಂಗ್ರೆಸ್‌ನವರು ರಾಜ್ಯದಲ್ಲಿ ಗೆಲ್ಲುವುದಿಲ್ಲ. ಬಿಜೆಪಿ ಅಧಿಕಾರಕ್ಕೆ ಬರುತ್ತದೆ. ನಾವು ಬಂದ ನಂತರ ಈಗಿರುವ ಬೆಂಗಳೂರು ಮಹಾನಗರ ಪಾಲಿಕೆಗೆ ಚುನಾವಣೆ ನಡೆಸುತ್ತೇವೆ ಎಂದು ಹೇಳಿದರು. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಕನಿಷ್ಟ ರಸ್ತೆ ಗುಂಡಿ ಮುಚ್ಚಿಲ್ಲ. ಅಭಿವೃದ್ಧಿಯಂತೂ ಇಲ್ಲವೇ ಇಲ್ಲ. ಇಷ್ಟಾದರೂ ಗ್ರೇಟರ್ ಬೆಂಗಳೂರು ಕಾಯ್ದೆ ಮಾಡಲು ಹೊರಟಿದ್ದಾರೆ. ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಬಿಬಿಎಂಪಿಗೆ ಚುನಾವಣೆ ಮಾಡುತ್ತೇವೆ ಎಂದು ಹೇಳಿದರು. ಹೊಸ ಸಮೀಕ್ಷೆ ಆಗಲಿ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಜಾತಿ ಗಣತಿ ಪಾರದರ್ಶಕವಾಗಿ ನಡೆದಿಲ್ಲ ಎಂಬ ಭಾವನೆ ಇದೆ. ಹಾಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ವರದಿಯನ್ನು ವಾಪಸ್ ಪಡೆದು ವೈಜ್ಞಾನಿಕವಾಗಿ ಹೊಸ ಸಮೀಕ್ಷೆ ನಡೆಸಲಿ ಎಂದು ಹೇಳಿದರು. ಈ ವರದಿ ರಾಜ್ಯದ ಜನರ ಭಾವನೆಗಳಿಗೆ ನೋವು ತಂದಿದೆ. ಈ ವರದಿ ಮೂಲಕ ರಾಜ್ಯದ ಜನರ ಜತೆ ಸರ್ಕಾರ ಆಟವಾಡುವ ಕೆಲಸ ಮಾಡುವುದು ಬೇಡ. ಈ ವರದಿಗೆ ಕಾಂತರಾಜ್ ಅಧ್ಯಕ್ಷರಾಗಿದ್ದಾಗ ಕಾರ್ಯದರ್ಶಿಯವರು ಸಹಿಹಾಕದೆ ಓಡಿ ಹೋಗಿದ್ದರು. ಇದೊಂದು ಮಕ್ಕಿಕಾಮಕ್ಕಿ ವರದಿ ಎಂದು ಸೋಮಣ್ಣ ಟೀಕಿಸಿದರು.

**ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ:**

ನಿಲ್ದಾಣಕ್ಕೆ ರೈಲ್ವೆ ಸಂಪರ್ಕ ಕಲ್ಪಿಸುವ ಬಗ್ಗೆ ಕೇಂದ್ರದ ರೈಲ್ವೆ ಸಚಿವ ಅಶ್ವಿನ್ ವೈಷ್ಣವ್ ಗಮನ ಹರಿಸಿದ್ದಾರೆ. ಈಗಾಗಲೇ ಅವರು ಸಭೆಯನ್ನು ನಡೆಸಿದ್ದಾರೆ. ವಿಮಾನ ನಿಲ್ದಾಣಕ್ಕೆ ಮೆಟ್ರೋ ರೈಲು ಯೋಜನೆ ಬರುತ್ತಿದೆ. ಇದರ ಜತೆ ಪ್ರತ್ಯೇಕ ರೈಲು ಸೇವೆ ಬೇಕಾ, ಬೇಡವಾ ಎಂಬ ಬಗ್ಗೆಯೂ ಚರ್ಚೆ ನಡೆದಿದೆ. ಸೂಕ್ತ ತೀರ್ಮಾನವನ್ನು ಕೇಂದ್ರ ಕೈಗೊಳ್ಳುತ್ತದೆ ಎಂದರು.

## ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳಲ್ಲಿ ಕೆರೆಗಳ ಸಮೀಕ್ಷೆ ಕಾರ್ಯ

# 4618 ಕೆರೆಗಳ ಒತ್ತುವರಿ ತೆರವು, 8697 ಎಕರೆ ಭೂಮಿ ವಶಕ್ಕೆ: ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಏ.25:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರಾಜ್ಯದಾದ್ಯಂತ ಜಿಲ್ಲಾ ಪಂಚಾಯತಿಗಳ ಅಧೀನದಲ್ಲಿನ ಕೆರೆಗಳನ್ನು ಗುರುತಿಸುವ ಹಾಗೂ ಒತ್ತುವರಿ ತೆರವುಗೊಳಿಸುವ ಕಾರ್ಯವನ್ನು ಚುರುಕುಗೊಳಿಸಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಗೆ ಬರುವ ಕೆರೆಗಳ ಸಮೀಕ್ಷೆ ಕಾರ್ಯವನ್ನು ಎಲ್ಲಾ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ. ಒತ್ತುವರಿಯಾಗಿದ್ದ 9,140 ಕೆರೆಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಈ ಪೈಕಿ 4,618 ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಿ ಇಲಾಖೆಯ ವಶಕ್ಕೆ ಪಡೆಯಲಾಗಿದೆ.ರಾಜ್ಯದ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯಲ್ಲಿ ಒಟ್ಟು 32,648 ಕೆರೆಗಳಿದ್ದು, ಇಲಾಖೆ ಕೈಗೊಂಡಿರುವ ಸಮೀಕ್ಷೆಯಲ್ಲಿ 24,497 ಕೆರೆಗಳನ್ನು ಗುರುತಿಸಲಾಗಿದೆ. ಇವುಗಳಲ್ಲಿ 9,140 ಕೆರೆಗಳು ಒತ್ತುವರಿಗೊಂಡಿವೆ. ಒತ್ತುವರಿಗೊಂಡ ಕೆರೆಗಳಲ್ಲಿ 4,618 ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಿ, 8,697 ಎಕರೆ ಭೂಮಿಯನ್ನು ಜಿಲ್ಲಾ ಪಂಚಾಯತಿಗಳ ವಶಕ್ಕೆ ಪಡೆದುಕೊಳ್ಳಲಾಗಿದೆ. ಉಳಿದ 4,522 ಕೆರೆಗಳ ಒತ್ತುವರಿ ತೆರವುಗೊಳಿಸುವ ಕೆಲಸ ಪ್ರಗತಿಯಲ್ಲಿದೆ.ಒಟ್ಟಾರೆ 32,648 ಕೆರೆಗಳಲ್ಲಿ ಬಾಕಿ ಉಳಿದ 8,151 ಕೆರೆಗಳ ಸಮೀಕ್ಷೆಯನ್ನು ಮುಂದಿನ 30 ದಿನಗಳ ಒಳಗೆ ಮುಗಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅವರು ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವ ಮೂಲಕ ಸಮೀಕ್ಷೆ ಕಾರ್ಯವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಲಾಗಿದೆ. ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಗೆ ಬರುವ 32,648 ಕೆರೆಗಳು 3,08,213 ಎಕರೆ ಪ್ರದೇಶವನ್ನು ಹೊಂದಿದೆ. ಇವುಗಳಲ್ಲಿ 24,497 ಕೆರೆಗಳು ವ್ಯಾಪಿಸಿರುವ ಒಟ್ಟು 2,15,594 ಎಕರೆ ಪ್ರದೇಶದ ಸರ್ವೆ ಕಾರ್ಯ ಸಂಪನ್ನಗೊಂಡಿದೆ. ರಾಜ್ಯದಲ್ಲಿ ಹಾಸನ ಜಿಲ್ಲೆ ಅತಿ ಹೆಚ್ಚು 6,367 ಕೆರೆಗಳನ್ನು ಹೊಂದಿದ್ದು, ಬಳ್ಳಾರಿ ಜಿಲ್ಲೆ ಅತಿ ಕಡಿಮೆ (21) ಕೆರೆಗಳನ್ನು ಹೊಂದಿದೆ. ಹೆಚ್ಚು ಕೆರೆಗಳನ್ನು ಹೊಂದಿದ ಜಿಲ್ಲೆಗಳಲ್ಲಿ ಶಿವಮೊಗ್ಗ (4354) ಹಾಗೂ ಮೈಸೂರು (2805) ಎರಡು ಹಾಗೂ ಮೂರನೇ ಸ್ಥಾನಗಳಲ್ಲಿವೆ ಎಂದರು.

# ರಾಜ್ಯದಲ್ಲಿ ಅಕ್ರಮ ಬಡಾವಣೆಗಳ ನಿರ್ಮಾಣಕ್ಕೆ ಕಡಿವಾಣ: ಸಿಎಂ ಖಡಕ್ ಸೂಚನೆ



**ಬೆಂಗಳೂರು, ಏ.25:** ಅನಧಿಕೃತ ಬಡಾವಣೆಗಳು ಇನ್ನುಮುಂದೆ ತಲೆ ಎತ್ತಬಾರದು ಇದು ಸಿಎಂ ಸಿದ್ದರಾಮಯ್ಯನವರ ಕಟ್ಟುನಿಟ್ಟಿನ ಸೂಚನೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ಜಿಲ್ಲಾಧಿಕಾರಿಗಳ ಜೊತೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಮಾತನಾಡಿದ ಸಚಿವರು, ಅನಧಿಕೃತ ಅಕ್ರಮ ಬಡಾವಣೆಗಳಿಗೆ ಕಡಿವಾಣ ಹಾಕಬೇಕು.

ಈ ಸಂಬಂಧ ಸುಪ್ರಿಂ ಕೋರ್ಟ್ ಖಡಕ್ ಸೂಚನೆ ಕೂಡ ಇದೆ. ಹೀಗಾಗಿ ಇಂದು ಎಲ್ಲಾ ಡಿಸಿಗಳಿಗೆ ಸೂಚನೆ ಕೊಟ್ಟಿದ್ದೇನೆ ಇದಕ್ಕೆ ಬಗ್ಗದಿದ್ದರೆ ಎಲ್ಲಾ ಮೀರಿ ಅನಧಿಕೃತ ಲೇಔಟ್ ಮಾಡಿದರೆ ಸರ್ಕಾರ ಮುಟ್ಟುಗೋಲು ಹಾಕಿಕೊಳ್ಳಲಿದೆ ಎಂದು ತಿಳಿಸಿದರು.


ಎಲ್ಲಾ ಡಿಸಿಗಳು, ಸರ್ವೆ ಅಧಿಕಾರಿಗಳ ಜೊತೆ ಸಭೆ ನಡೆದಿದೆ. ಆಗಿರುವ ಕೆಲಸ, ಮುಂದೆ ಆಗಬೇಕಾಗಿರುವ ಕೆಲಸಗಳ ಬಗ್ಗೆ ನಿರಂತರ ಸಭೆ ನಡೆಸಿದ್ದೇನೆ. ರಾಜ್ಯದಲ್ಲಿ ಹಾಡಿ, ತಾಂಡಗಳು, ಜನವಸತಿ ಪ್ರದೇಶಗಳು ಕಂದಾಯ ಗ್ರಾಮಗಳಾಗದೆ ಸೌಲಭ್ಯವಂಚಿತ ವಾಗಿದ್ದವು. ಕಂದಾಯ ಗ್ರಾಮಗಳ ಸ್ಥಾನಮಾನ ಈ ವಸತಿ ಪ್ರದೇಶಗಳಿಗೆ ಕೊಡಲು ಕಾಂಗ್ರೆಸ್ ಸರ್ಕಾರ ನಿರ್ಧರಿಸಿತ್ತು. ಅದರ ಜೊತೆಗೆ ಶಾಶ್ವತ ಹಕ್ಕು ಪತ್ರ ನೀಡಿ ಅವರ ತ್ರಿಶಂಕು ಪರಿಸ್ಥಿತಿಗೆ ಪರಿಹಾರ ನೀಡಬೇಕಾಗಿದೆ ಎಂದರು. 2016–17 ರಲ್ಲಿ ಇದಕ್ಕೆ ಬೇಕಾದ ಕಾನೂನು ಮಾಡಿದ್ದೇವೆ. ನಾವು ನಮ್ಮ ಸರ್ಕಾರ ಬಂದಮೇಲೆ ಇದನ್ನ ಎಳೆದುಕೊಂಡ ಹೋಗಬಾರದೆಂದು ಈ ನಿರ್ದಾರ. 1.30 ಲಕ್ಷ ಮಂದಿಗೆ 94D ಭೂ ಕಂದಾಯ ಕಾಯ್ದೆಯಡಿ ಹಕ್ಕುಪತ್ರ ಕೊಡುವ ಕೆಲಸ ಆಗಿದೆ. ಮೇ 20 ರೊಳಗೆ ಒಂದು ಲಕ್ಷ ಹಕ್ಕುಪತ್ರ ನೀಡಲು ತಯಾರಿ ನಡೆಸಲಾಗಿದೆ. ಈ ವರ್ಷಾಂತ್ಯದಲ್ಲಿ ಎರಡು ಲಕ್ಷ ಹಕ್ಕು ಪತ್ರ ವಿತರಿಸುವ ಗುರಿ ಹೊಂದಲಾಗಿದೆ. ಹಕ್ಕುಪತ್ರ ಇದ್ದರೂ ಮೂಲದಾಖಲೆ ಇಲ್ಲ, ಒಂದೊಂದು ನಿವೇಶನಕ್ಕೆ ಇಬ್ಬರು ಮೂವರು ಹಕ್ಕುಪತ್ರ ಹೊಂದಿದ್ದಾರೆ. ಕೊಟ್ಟಿರುವ ಹಕ್ಕುಪತ್ರಗಳಿಗೂ ಮಾನ್ಯತೆ ಇಲ್ಲ. ಹೀಗಾಗಿ ಈ ಬಾರಿ ಡಿಜಿಟಲ್ ಹಕ್ಕುಪತ್ರ ಕೊಡುತ್ತಿದ್ದೇವೆ. ಇದರಿಂದ ಮೂಲ ದಾಖಲೆ ಕಳೆದುಹೋಗುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. ನಕಲು ಮಾಡಲು ಸಾಧ್ಯವಾಗಲ್ಲ. ಡಿಜಿಟಲ್ ಹಕ್ಕು ಪತ್ರದ ಮೂಲಕ ನೂರಕ್ಕೆ ನೂರು ಶಾಶ್ವತ ಪರಿಹಾರ ಸಿಗುತ್ತೆ ಕ್ರಯ ಪತ್ರದ ಮೂಲಕ ನೋಂದಣಿ ಜೊತೆ ಸರ್ಕಾರದಿಂದಲೇ ಖಾತೆ ಮಾಡಿಸಿಕೊಡ್ತೇವೆ. ಕೋರ್ಟ್ ಕಚೇರಿಗೆ ಹೋಗಲು ಅವಕಾಶ ನೀಡದಂತೆ ಡಿಜಿಟಲ್ ಹಕ್ಕು ಪತ್ರ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.



**ರಾಜ್ಯ ಸರ್ಕಾರದ ಎರಡು ವರ್ಷಗಳ ಜನಪರ ಆಡಳಿತಕ್ಕೆ ಸಾಕ್ಷಿಯಾಗಿ ಮೇ 20 ರಂದು ಕಂದಾಯ ಗ್ರಾಮಗಳ 1 ಲಕ್ಷ ಕುಟುಂಬಗಳಿಗೆ ಶಾಶ್ವತ ಡಿಜಿಟಲ್ ಹಕ್ಕುಪತ್ರ ವಿತರಿಸಲು ಉದ್ದೇಶಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.**

## ಬೆಂಗಳೂರಿಗೆ 2ನೇ ಅಂತಾರಾಷ್ಟ್ರೀಯ ವಿಮಾನನಿಲ್ದಾಣ

# ರೈತರಿಂದ ಭಾರಿ ವಿರೋಧ: ಜಮೀನು ಕೊಡಲು ನಕಾರ




**ಬೆಂಗಳೂರು, ಏ.25:** ಬೆಂಗಳೂರಿನಲ್ಲಿ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಗೆ ಸಂಬಂಧಿಸಿದಂತೆ ಈಗಾಗಲೇ ಹಲವು ಬಾರಿ ಪರಿಶೀಲನೆ ನಡೆಯುತ್ತಿದೆ. ಬೆಂಗಳೂರು ಸುತ್ತಮುತ್ತ 3 ಸ್ಥಳಗಳನ್ನು ಕೇಂದ್ರ ವಿಮಾನ ಪ್ರಾಧಿಕಾರದ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ಹೀಗಿರುವಾಗಲೇ 2ನೇ ವಿಮಾನ ನಿಲ್ದಾಣಕ್ಕೆ ಬಾರಿ ವಿರೋಧ ವ್ಯಕ್ತವಾಗಿದೆ. ಇದೀಗ ತಮ್ಮ ಮನೆ, ಜಮೀನು ಉಳಿಸಿಕೊಳ್ಳಲು ಸದ್ದಿಲ್ಲದೆ ಹತ್ತಾರು ಹಳ್ಳಿಯ ರೈತರು ಹಾಗೂ ರೈತ ಮುಖಂಡರು ಹೋರಾಟಕ್ಕೆ ಅಣಿಯಾಗಿದ್ದಾರೆ. ನೆಲಮಂಗಲ ಕುಣಿಗಲ್ ರಸ್ತೆಯ ಅಕ್ಕಪಕ್ಕದ 2 ಕಡೆ ವಿಮಾನ ನಿಲ್ದಾಣದ ಸ್ಥಳ ಗುರುತು ಮಾಡಲಾಗಿದೆ. ಹೀಗಾಗಿ ನೆಲಮಂಗಲ ವಿಧಾನಸಭೆ ಕ್ಷೇತ್ರದ ಪೆಮ್ಮನಹಳ್ಳಿ ಗ್ರಾಮದಲ್ಲಿ ನೂರಾರು ರೈತರ ಸಭೆ ಮಾಡಲಾಗಿದ್ದು, ವಿಮಾನ ನಿಲ್ದಾಣ ವಿರುದ್ಧ ಹೋರಾಟದ ರೂಪುರೇಷೆ ಬಗ್ಗೆ ಚರ್ಚಿಸಿದರು. ವಿಮಾನ ನಿಲ್ದಾಣವಾದರೆ ನೂರಾರು ವರ್ಷಗಳ ಮನೆ ಮಠ, ಆಸ್ತಿ ಪಾಸ್ತಿ, ದೇವಾಲಯಗಳು, ಜಾನುವಾರುಗಳು ತೋಟಗಳು ಕಳೆದುಕೊಳ್ಳುವ ಭೀತಿ ಎದುರಾಗಿದೆ. ಹಾಗಾಗಿ ಕರಪತ್ರಗಳ ಮೂಲಕ ರೈತ ಮುಖಂಡರು ರೈತರ ಮನವರಿಕೆಗೆ ಮುಂದಾಗಿದ್ದಾರೆ. ಇತ್ತೀಚೆಗೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಧಿಕಾರಿಗಳು ಬೆಂಗಳೂರಲ್ಲೇ ಠಿಕಾಣಿ ಹೂಡಿದ್ದರು. ಕನಕಪುರ ರಸ್ತೆಯ 2 ಸ್ಥಳಗಳಿಗೆ ಅಧಿಕಾರಿಗಳು ಭೇಟಿಕೊಟ್ಟಿದ್ದರು. ಸಚಿವ ಎಂ ಬಿ ಪಾಟೀಲ್ ಜೊತೆಗೆ ಸುದೀರ್ಘ ಚರ್ಚೆ ಕೂಡ ಮಾಡಿದ್ದರು. ಬಳಿಕ ನೆಲಮಂಗಲ ಮತ್ತು ಕುಣಿಗಲ್ ಭಾಗದ ಸ್ಥಳಗಳನ್ನೂ ಏರ್ಪೋರ್ಟ್ ಅಥಾರಿಟಿ ಅಧಿಕಾರಿಗಳು ಪರಿಶೀಲನೆ ಮಾಡಿದ್ದರು. ಸರ್ಕಾರ ಗುರುತಿಸಿರುವ 3 ಸ್ಥಳಗಳನ್ನ ಬಿಟ್ಟು ಶಿರಾದಲ್ಲಿ ನೂತನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪಿಸಲು ಕೂಗು ಕೇಳಿಬಂದಿತ್ತು. ಸಿಎಂ ಸಿದ್ದರಾಮಯ್ಯಗೆ ಟಿಬಿ ಜಯಚಂದ್ರ ನೇತೃತ್ವದಲ್ಲಿ 30ಕ್ಕೂ ಹೆಚ್ಚು ಶಾಸಕರು ಪಕ್ಷಾತೀತವಾಗಿ ಪತ್ರಬರೆದಿದ್ದಾರೆ. ಕನಕಪುರದಲ್ಲೂ ವಿಮಾನ ನಿಲ್ದಾಣಕ್ಕೆ ಜಾಗ ಪರಿಶೀಲಿಸಲಾಗಿದೆ. ಇದಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಒತ್ತಡವೇ ಕಾರಣ ಅಂತಾ ಕೆಲವರಿಂದ ಬೇಸರ ವ್ಯಕ್ತವಾಗಿತ್ತು. ಏರ್‌ಪೋರ್ಟ್ ಸ್ಥಾಪನೆ ವಿಚಾರದಲ್ಲೂ ಉತ್ತರ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದೆ ಅಂತಾ 30ಕ್ಕೂ ಹೆಚ್ಚು ಶಾಸಕರು ಧ್ವನಿ ಎತ್ತಿದ್ದರು. ಸದ್ಯ ಪರ ವಿರೋಧ ಏನೇ ಇದ್ದರೂ, ಅಂತಿಮವಾಗಿ ಕೇಂದ್ರದ ನಾಗರಿಕ ವಿಮಾನಯಾನ ಇಲಾಖೆ ಮತ್ತು ಕೇಂದ್ರ ಸರ್ಕಾರವೇ ಜಾಗ ಫೈನಲ್ ಮಾಡಲಿದೆ. ಸದ್ಯ ಯಾವ ಸ್ಥಳ ಗುರ್ತಿಸ್ತಾರೆ ಅನ್ನೋದೇ ಕುತೂಹಲ ಮೂಡಿಸಿದೆ.




**ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮೇಣದಬತ್ತಿ ಮೆರವಣಿಗೆಯನ್ನು ನಡೆಸಿದರು. ಕಾಂಗ್ರೆಸ್ ಕಾರ್ಯಕಾರಿ ಅಧ್ಯಕ್ಷ ಜಿ.ಸಿ.ಚಂದ್ರ ಶೇಖರ್, ಶಾಸಕ ಸಲೀಮ್ ಅಹ್ಮದ್, ಹಿರಿಯ ಕಾಂಗ್ರೆಸ್ ನಾಯಕರು, ಕಾರ್ಯಕರ್ತರು ಪಾಲ್ಗೊಂಡಿದ್ದರು.**

# ಗ್ರೇಟರ್ ಬೆಂಗಳೂರು ಮಸೂದೆಗೆ ರಾಜ್ಯಪಾಲರ ಸಹಿ

**ಬೆಂಗಳೂರು, ಏ.25:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯನ್ನು ವಿಸ್ತರಿಸುವುದು ಹಾಗೂ ಬೆಂಗಳೂರಿಗೆ ಸಂಬಂಧಿಸಿದಂತೆ ಗರಿಷ್ಠ ಏಳು ನಗರ ಪಾಲಿಕೆಗಳನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಿರುವ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ–2024 ಸೇರಿ ಹಲವು ಮಸೂದೆಗಳಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಒಪ್ಪಿಗೆ ನೀಡಿದ್ದಾರೆ. ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕಕ್ಕೆ ಅನುಮೋದನೆ ಸಿಕ್ಕಿರುವುದರಿಂದ ಬಿಬಿಎಂಪಿ ಚುನಾವಣೆಗಳು ಮತ್ತೆ ವಿಳಂಬವಾಗುವ ಸಾಧ್ಯತೆ ಇದೆ. ಅಲ್ಲದೆ, ಮಂಡ್ಯ ತಾಲೂಕಿನ ವಿ.ಸಿ ಫಾರ್ಮ್ ನಲ್ಲಿ ನೂತನ ಕೃಷಿ ವಿಶ್ವವಿದ್ಯಾನಿಲಯ ಸ್ಥಾಪನೆಗೆ ರಾಜ್ಯಪಾಲರು ಅನುಮೋದನೆ ನೀಡಿದ್ದಾರೆ. ಕಳೆದ ಮಾರ್ಚ್‌ನಲ್ಲಿ ನಡೆದ ಬಜೆಟ್ ಅಧಿವೇಶನದಲ್ಲಿ ನೂತನ ಮಂಡ್ಯ ಕೃಷಿ ವಿಶ್ವವಿದ್ಯಾಲಯ ಪ್ರಾರಂಭಿಸುವ ಕುರಿತು ಉಭಯ ಸದನಗಳಲ್ಲಿ ವಿಧೇಯಕವನ್ನು ಅಂಗೀಕರಿಸಿ ರಾಜ್ಯಪಾಲರ ಅಂಗೀಕಾರಕ್ಕೆ ಕಳುಹಿಸಲಾಗಿತ್ತು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪಹಲ್ಗಾಮ್ ದಾಳಿ ಗುಪ್ತಚರ ಸಂಸ್ಥೆಗಳ ವೈಫಲ್ಯ: ತೇಜಸ್ವಿ

**ಪಟನಾ,ಏ.25:** ಪಹಲ್ಗಾಮ್ ದಾಳಿಯ ಬಗ್ಗೆ ಬಿಹಾರ ವಿರೋಧ ಪಕ್ಷದ ನಾಯಕ (ಎಲ್‌ಒಪಿ) ತೇಜಸ್ವಿ ಯಾದವ್ ಕೇಂದ್ರ ಸರ್ಕಾರವನ್ನು ಟೀಕಿಸಿದ್ದಾರೆ, ಇದನ್ನು ಗುಪ್ತಚರ ಸಂಸ್ಥೆಗಳ ಸಂಪೂರ್ಣ ವೈಫಲ್ಯ ಎಂದು ಕರೆದಿದ್ದಾರೆ. ಪಹಲ್ಗಾಮ್‌ನ ಹೈ ಸೆಕ್ಯುರಿಟಿ ವಲಯದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಉಲ್ಲೇಖಿಸಿ, ಭಯೋತ್ಪಾದಕರು ತೀವ್ರವಾದ ಭದ್ರತಾ ಉಪಸ್ಥಿತಿಯ ಹೊರತಾಗಿಯೂ ಆ ಪ್ರದೇಶವನ್ನು ಹೇಗೆ ತಲುಪಲು ಸಾಧ್ಯವಾಯಿತು ಎಂದು ಯಾದವ್ ಪ್ರಶ್ನಿಸಿದ್ದಾರೆ. ಅಲ್ಲಿ 2,000 ಪ್ರವಾಸಿಗರಿದ್ದರು. ವಾಹನಗಳು ತಲುಪಲು ಸಹ ಸಾಧ್ಯವಾಗದ ಸ್ಥಳ ಅದು. ನೀವು ನಡೆಯಬಹುದು ಅಥವಾ ಕುದುರೆಗಳನ್ನು ತೆಗೆದುಕೊಂಡು ಹೋಗಬಹುದು. ಹಲವಾರು ಮಿಲಿಟರಿ ಚೆಕ್‌ಪೋಸ್ಟ್‌ಗಳಿದ್ದರೂ, ಭಯೋತ್ಪಾದಕರು ಅವರನ್ನು ತಲುಪುವಲ್ಲಿ ಯಶಸ್ವಿಯಾದರು. ಅದು ಹೇಗೆ ಸಾಧ್ಯ ಯಾದವ್ ಪ್ರಶ್ನಿಸಿದರು. ಇಂತಹ ಸೂಕ್ಷ್ಮ ಪ್ರದೇಶದಲ್ಲಿ ನಾಗರಿಕರಿಗೆ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ವಿಫಲವಾದ ಸರ್ಕಾರವನ್ನು ತೇಜಸ್ವಿ ಯಾದವ್ ಟೀಕಿಸಿದರು. ಗುಪ್ತಚರ



ಎಲ್ಲಿತ್ತು. ಈ ವೈಫಲ್ಯದ ಜವಾಬ್ದಾರಿಯನ್ನು ಯಾರು ತೆಗೆದುಕೊಳ್ಳುತ್ತಾರೆ ಎಂದು ಪ್ರಶ್ನಿಸಿದ್ದಾರೆ.

ರಾಷ್ಟ್ರೀಯ ಭದ್ರತೆಯ ಬದಲು ರಾಜಕೀಯ ಲಾಭಕ್ಕಾಗಿ ಗುಪ್ತಚರ ಮತ್ತು ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಯಾದವ್ ಆರೋಪಿಸಿದರು. ನೀವು ವಿರೋಧ ಪಕ್ಷದ ನಾಯಕರ ವಿರುದ್ಧ ಮಾತ್ರ ಗುಪ್ತಚರ ಮತ್ತು ತನಿಖಾ ಸಂಸ್ಥೆಗಳನ್ನು ಕಳುಹಿಸುತ್ತಿದ್ದೀರಿ. ಆದರೆ ದೇಶಕ್ಕೆ ನಿಜವಾಗಿಯೂ ರಕ್ಷಣೆ ಬೇಕಾದಾಗ ಅವರು ಎಲ್ಲಿದ್ದರು ಎಂದು ತೇಜಸ್ವಿ ಹೇಳಿದರು. ಯಾದವ್ ಕೂಡ 2019ರ ಪುಲ್ವಾಮಾ ದಾಳಿಯೊಂದಿಗೆ ಹೋಲಿಕೆಗಳನ್ನು ತೋರಿಸಿದರು, ಮತ್ತೊಮ್ಮೆ ಭದ್ರತಾ ಲೋಪಗಳು ಮತ್ತು ಪಾರದರ್ಶಕತೆಯ ಕೊರತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದರು.

ಪುಲ್ವಾಮಾ ಘಟನೆಯ ಸಮಯದಲ್ಲಿಯೂ ಸಹ, ನಾವು ಇದೇ ರೀತಿಯ ಪ್ರಶ್ನೆಗಳನ್ನು ಎತ್ತಿದ್ದೇವೆ. ಆ ತನಿಖೆಗೆ ಏನಾಯಿತು 200–300 ಕೆಜಿ ಆರ್‌ಡಿಎಕ್ಸ್ ಅಲ್ಲಿಗೆ ಹೇಗೆ ತಲುಪಿತು ಮತ್ತು ಈ ಸಂದರ್ಭದಲ್ಲಿ ಅನೇಕ ಸೈನಿಕರು ಹುತಾತ್ಮರಾದರು ಎಂದು ಅವರು ಹೇಳಿದರು. ಪುಲ್ವಾಮಾ ದಾಳಿಯ ತನಿಖೆಯಿಂದ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಮತ್ತು ಯಾವ ತೀರ್ಮಾನಗಳು ಬಂದವು ಎಂಬುದನ್ನು ತಿಳಿದುಕೊಳ್ಳುವ ಸಾರ್ವಜನಿಕರ ಹಕ್ಕನ್ನು ಅವರು ಒತ್ತಿ ಹೇಳಿದರು. ಆಡಳಿತ ಪಕ್ಷವು ಅಪರಾಧಿಗಳ ವಿರುದ್ಧ ಕಠಿಣ ಕ್ರಮಕೈಗೊಳ್ಳುವುದಾಗಿ ಪ್ರತಿಜ್ಞೆ ಮಾಡಿದ್ದರೂ ಸಹ ಪಹಲ್ಗಾಮ್ ದುರಂತ ನಡೆದಿದೆ. ಈ ಕುರಿತು ಸ್ಪಷ್ಟತೆ ಮತ್ತು ಹೊಣೆಗಾರಿಕೆಗಾಗಿ ಒತ್ತಾಯಿಸುವ ಇತರ ವಿರೋಧ ನಾಯಕರೊಂದಿಗೆ ತೇಜಸ್ವಿ ಸೇರಿಕೊಂಡಿದ್ದಾರೆ. 2014ರಿಂದ ಕಾಶ್ಮೀರದಲ್ಲಿ ಭಯೋತ್ಪಾದನೆಗೆ ಸಂಬಂಧಿಸಿದ ಘಟನೆಗಳ ಗೊಂದಲಮಯ ದಾಖಲೆಯನ್ನು ಉಲ್ಲೇಖಿಸಿ, ಇತ್ತೀಚಿನ ಪಹಲ್ಗಾಮ್ ದಾಳಿಯನ್ನು ವ್ಯವಸ್ಥಿತ ವೈಫಲ್ಯದ ಮತ್ತೊಂದು ಉದಾಹರಣೆ ಎಂದು ಸೂಚಿಸಿದರು.

ಕಳೆದ ದಶಕದಲ್ಲಿ ಕಾಶ್ಮೀರದಲ್ಲಿ ಮಾತ್ರ 3,982 ಭಯೋತ್ಪಾದಕ ದಾಳಿಗಳು ನಡೆದಿವೆ, ಇದರ ಪರಿಣಾಮವಾಗಿ 413 ನಾಗರಿಕರು ಮತ್ತು 630 ಭದ್ರತಾ ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ಯಾದವ್ ಹೇಳಿದ್ದಾರೆ.

ಈ ಗಂಭೀರ ನಿರ್ಲಕ್ಷ್ಯಕ್ಕೆ ಯಾರು ಹೊಣೆಗಾರರಾಗುತ್ತಾರೆ ಎಂದು ಅವರು ಸರ್ಕಾರ ಗುಪ್ತಚರ ಮತ್ತು ತುರ್ತು ಪ್ರತಿಕ್ರಿಯೆ ಎರಡರಲ್ಲೂ ವಿಫಲವಾಗಿದೆ ಎಂದು ಆರೋಪಿಸಿದರು. ದಾಳಿಯಲ್ಲಿ ಮೃತಪಟ್ಟ ನೌಕಾಪಡೆಯ ಲೆಫ್ಟಿನೆಂಟ್ ವಿನಯ್ ನರ್ವಾಲ್ ಅವರ ಸಹೋದರಿಯ ಹೃದಯ ವಿದ್ರಾವಕ ಘಟನೆಯನ್ನು ಉಲ್ಲೇಖಿಸಿ ತೇಜಸ್ವಿ ಅವರು, ಅವರು ಒಂದೂವರೆ ಗಂಟೆಗಳ ಕಾಲ ಜೀವಂತವಾಗಿದ್ದರು. ಆದರೆ ಅವರಿಗೆ ಯಾವುದೇ ಸಹಾಯ ಸಿಗಲಿಲ್ಲ. ಎಂದಿದ್ದಾರೆ. ಗಡಿಯ ಸಮೀಪವಿರುವ ಕಾರಣ, ಹೈ–ಸೆಕ್ಯುರಿಟಿ ವಲಯ ಎಂದು ಗೊತ್ತುಪಡಿಸಿದ ಸ್ಥಳದಲ್ಲಿ ಭದ್ರತಾ ಪಡೆಗಳ ಅನುಪಸ್ಥಿತಿಯನ್ನು ಅವರು ಒತ್ತಿ ಹೇಳಿದರು.




ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಗುವಾಹಟಿಯಲ್ಲಿ ಶುಕ್ರವಾರದ ನಮಾಜ್ ನಂತರ ಬುರ್ಹಾ ಜಾಮಾ ಮಸೀದಿಯ ಮುಂದೆ ಮುಸ್ಲಿಮರು ಧರಣಿ ನಡೆಸಿದರು.

# ಮಾನನಷ್ಟ ಮೊಕದ್ದಮೆ: ಹೋರಾಟಗಾರ್ತಿ ಮೇಧಾ ಪಾಟ್ಕರ್ ಬಂಧನ

**ನವದೆಹಲಿ,ಏ.25:** ದೆಹಲಿಯ ಹಾಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ ಸಕ್ಸೇನಾ ಅವರು 24 ವರ್ಷಗಳ ಹಿಂದೆ ಹೂಡಿರುವ ಮಾನನಷ್ಟ ಮೊಕದ್ದಮೆ ಸಂಬಂಧ ನರ್ಮದಾ ಬಚಾವೋ ಆಂದೋಲನದ ನಾಯಕಿ, ಹೋರಾಟಗಾರ್ತಿ ಮೇಧಾ ಪಾಟ್ಕರ್ ಅವರನ್ನು ಪೊಲೀಸರು ಶುಕ್ರವಾರ ಬಂಧಿಸಿದ್ದಾರೆ. ಪ್ರಕರಣ ಸಂಬಂಧ ಪ್ರೊಬೇಷನ್ ಬಾಂಡ್ ಸಲ್ಲಿಸದ ಕಾರಣ ಮೇಧಾ ಪಾಟ್ಕರ್ ವಿರುದ್ಧ ದೆಹಲಿ ನ್ಯಾಯಾಲಯ ಬುಧವಾರ ಜಾಮೀನು ರಹಿತ ವಾರೆಂಟ್ ಹೊರಡಿಸಿತ್ತು. 2001ರಲ್ಲಿ ಪಾಟ್ಕರ್ ವಿರುದ್ಧ ಸಕ್ಸೇನಾ ಪ್ರಕರಣ ದಾಖಲಿಸಿದ್ದರು. ಆಗ ಅವರು ಅಹಮದಾಬಾದ್ ಮೂಲದ ಎನ್‌ಜಿಒ ನ್ಯಾಷನಲ್ ಕೌನ್ಸಿಲ್ ಫಾರ್ ಸಿವಿಲ್ ಲಿಬರ್ಟೀಸ್‌ನ ಮುಖ್ಯಸ್ಥರಾಗಿದ್ದರು. ನ.25, 2000ದಲ್ಲಿ ದೇಶಭಕ್ತನ ನಿಜವಾದ ಮುಖ ಎಂಬ ಶೀರ್ಷಿಕೆಯಡಿಯಲ್ಲಿ ಪಾಟ್ಕರ್ ಅವರು ನೀಡಿದ್ದ ಪತ್ರಿಕಾ ಪ್ರಕಟಣೆಯ ವಿರುದ್ಧ ಮಾನಹಾನಿ ಆರೋಪ ಮಾಡಿ ಸಕ್ಸೇನಾ ಪ್ರಕರಣ ದಾಖಲಿಸಿದ್ದರು. ಹವಾಲಾ ವಹಿವಾಟಿನಲ್ಲಿ ಮುಳುಗಿರುವ ವಿ.ಕೆ ಸಕ್ಸೇನಾ, ಸ್ವತಃ ಮಾಲೆಗಾಂವ್‌ಗೆ ಬಂದು ಎನ್‌ಬಿಎಯನ್ನು ಹೊಗಳಿ ರೂ. 40,000ರ ಚೆಕ್ ಅನ್ನು ನೀಡಿದ್ದಾರೆ. ಲೋಕ ಸಮಿತಿಯು ತ್ವರಿತವಾಗಿ ರಸೀದಿ ಮತ್ತು ಪತ್ರವನ್ನು ಕಳುಹಿಸಿದೆ. ಅದು ಪ್ರಾಮಾಣಿಕತೆ ಮತ್ತು ಉತ್ತಮ ದಾಖಲೆ ಇಟ್ಟುಕೊಳ್ಳುವುದನ್ನು ತೋರಿಸುತ್ತದೆ. ಆದರೆ, ಚೆಕ್ ನಗದೀಕರಿಸಿಲ್ಲ, ಬೌನ್ಸ್ ಆಗಿದೆ. ವಿಚಾರಣೆಯಲ್ಲಿ, ಖಾತೆಯು ಅಸ್ತಿತ್ವದಲ್ಲಿಲ್ಲ ಎಂದು ಬ್ಯಾಂಕ್ ವರದಿ ಮಾಡಿದೆ ಎಂದು ಪಾಟ್ಕರ್ ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ಆರೋಪಿಸಿದ್ದರು.

ಪಾಟ್ಕರ್ ಅವರ ಪ್ರಕಟಣೆ ದುರುದ್ದೇಶಪೂರಿತವಾಗಿದ್ದು, ಸಕ್ಸೇನಾ ಅವರ ಒಳ್ಳೆಯ ಹೆಸರನ್ನು ಹಾಳುಮಾಡುವ ಗುರಿಯನ್ನು ಹೊಂದಿತ್ತು. ಇದರಿಂದ ಅವರ ಸ್ಥಾನಮಾನ ಮತ್ತು ಹೆಗ್ಗಳಿಕೆಗೆ ಹಾನಿಯುಂಟಾಗಿದೆ ಎಂದು ನ್ಯಾಯಾಧೀಶರು ಹೇಳಿದ್ದರು. ಆರೋಪಿಯ ಹೇಳಿಕೆಗಳು ದೂರುದಾರರನ್ನು ಹೇಡಿ, ದೇಶಪ್ರೇಮಿ ಅಲ್ಲ ಮತ್ತು ಹವಾಲಾ ವಹಿವಾಟುಗಳಲ್ಲಿ ತೊಡಗಿಸಿಕೊಂಡಿದ್ದಾರೆ ಎಂದಿದೆ. ಇದು ಮಾನಹಾನಿಕರ ಮಾತ್ರವಲ್ಲದೆ, ದೂರದಾರರ ಬಗ್ಗೆ ನಕಾರಾತ್ಮಕ ಭಾವನೆ ಹುಟ್ಟಿಸುತ್ತದೆ ಎಂದಿದ್ದರು.

ಮೇ 24, 2023ರಂದು, ದೆಹಲಿಯ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಪಾಟ್ಕರ್ ಅವರ ಹೇಳಿಕೆಗಳನ್ನು ಮಾನನಷ್ಟಕರವೆಂದು ಪರಿಗಣಿಸಿ ಜುಲೈ 1ರಂದು ಅವರಿಗೆ ಐದು ತಿಂಗಳ ಜೈಲು ಶಿಕ್ಷೆಯನ್ನು ವಿಧಿಸಿತ್ತು. ಆದಾಗ್ಯೂ, ಸಾಕೇತ್ ನ್ಯಾಯಾಲಯದ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ವಿಶಾಲ್ ಸಿಂಗ್ ಅವರು ಕಳೆದ ವರ್ಷ ಜುಲೈ 29ರಂದು ಶಿಕ್ಷೆಯನ್ನು ಅಮಾನತುಗೊಳಿಸಿ ಮೇಧಾ ಪಾಟ್ಕರ್ ಅವರಿಗೆ ಜಾಮೀನು ನೀಡಿದ್ದರು. ನಂತರ, 1 ಲಕ್ಷ ರೂ. ದಂಡವನ್ನು ಪಾವತಿಸುವ ಷರತ್ತಿನೊಂದಿಗೆ ಮೇಧಾ ಪಾಟ್ಕರ್ ಉತ್ತಮ ನಡವಳಿಕೆಯ ಪ್ರೊಬೇಷನ್ ಅನ್ನು ಪಡೆದರು. ಈ ರಿಯಾಯಿತಿಯ ಹೊರತಾಗಿಯೂ, ಏಪ್ರಿಲ್ 23 ರಂದು ಪ್ರೊಬೇಷನ್ ಬಾಂಡ್ ಔಪಚಾರಿಕವಾಗಿ ಸಲ್ಲಿಸಲು ಮತ್ತು ದಂಡವನ್ನು ಪಾವತಿಸುವ ಸಲುವಾಗಿ ನ್ಯಾಯಾಲಯಕ್ಕೆ ಹಾಜರಾಗಲು ಪಾಟ್ಕರ್ ವಿಫಲರಾಗಿದ್ದರು. ಅವರ ಗೈರುಹಾಜರಿ ಮತ್ತು ನಿಯಮ ಪಾಲಿಸದ ಕಾರಣ ನ್ಯಾಯಾಲಯವು ದೆಹಲಿ ಪೊಲೀಸ್ ಆಯುಕ್ತರ ಮೂಲಕ ಜಾಮೀನು ರಹಿತ ವಾರಂಟ್ ಹೊರಡಿಸಿತ್ತು. ಪ್ರಕರಣಕ್ಕೆ ಸಂಬಂಧಿಸಿದ ಪ್ರೊಬೇಷನ್ ಬಾಂಡ್ ಜಾರಿಗೊಳಿಸುವ ಪ್ರಕ್ರಿಯೆಗೆ ಎರಡು ವಾರಗಳ ತಡೆ ನೀಡಬೇಕೆಂಬ ಪಾಟ್ಕರ್ ಅವರ ಮನವಿಯನ್ನು ದೆಹಲಿ ಹೈಕೋರ್ಟ್ ಮಂಗಳವಾರ ತಿರಸ್ಕರಿಸಿತ್ತು. ಪ್ರೊಬೇಷನ್ ಬಾಂಡ್ ಜಾರಿ ತಡೆಯುವಂತೆ ಕೋರಿರುವ ಮೇಧಾ ಪಾಟ್ಕರ್ ಅರ್ಜಿಯು ನ್ಯಾಯಾಲಯವನ್ನು ಮೋಸಗೊಳಿಸುವ ಉದ್ದೇಶದಿಂದ ಕೂಡಿದೆ ಎಂದು ವಿಶಾಲ್ ಸಿಂಗ್ ಹೇಳಿದ್ದರು. ಮುಂದಿನ ದಿನಾಂಕದಂದು, ಅಪರಾಧಿಯು 08/04/2025ರ ಶಿಕ್ಷೆಯ ಆದೇಶದ ನಿಯಮಗಳನ್ನು ಪಾಲಿಸಲು ವಿಫಲವಾದರೆ, ನ್ಯಾಯಾಲಯವು ದಯಾಪರ ಶಿಕ್ಷೆಯನ್ನು ಮರುಪರಿಶೀಲಿಸಬೇಕಾಗುತ್ತದೆ ಮತ್ತು ಶಿಕ್ಷೆಯ ಮೇಲಿನ ಆದೇಶವನ್ನು ಬದಲಾಯಿಸಬೇಕಾಗುತ್ತದೆ ಎಂದು ಸಾಕೇತ್ ನ್ಯಾಯಾಲಯದ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ವಿಶಾಲ್ ಸಿಂಗ್ ಏ.23ರ ತಮ್ಮ ಆದೇಶದಲ್ಲಿ ಹೇಳಿದ್ದರು. ಬಲವಂತದ ಆದೇಶದ ಮೂಲಕ ಅಪರಾಧಿ ಮೇಧಾ ಪಾಟ್ಕರ್ ಅವರನ್ನು ಹಾಜರುಪಡಿಸುವುದನ್ನು ಜಾರಿಗೊಳಿಸುವುದನ್ನು ಬಿಟ್ಟು ನ್ಯಾಯಾಲಯಕ್ಕೆ ಬೇರೆ ದಾರಿಯಿಲ್ಲ ಎಂದು ನ್ಯಾಯಾಧೀಶ ಸಿಂಗ್ ಹೇಳಿದ್ದರು. ಮುಂದಿನ ದಿನಾಂಕಕ್ಕೆ ದೆಹಲಿ ಪೊಲೀಸ್ ಆಯುಕ್ತರ ಕಚೇರಿಯ ಮೂಲಕ ಅಪರಾಧಿ ಮೇಧಾ ಪಾಟ್ಕರ್ ವಿರುದ್ಧ ಜಾಮೀನು ರಹಿತ ಆದೇಶ ಹೊರಡಿಸಿ ಎಂದಿದ್ದರು.

ನ್ಯಾಯಾಲಯದ ಆದೇಶದಂತೆ ಮೇಧಾ ಪಾಟ್ಕರ್ ವಿರುದ್ಧ ಪೊಲೀಸರು ಬುಧವಾರ ಜಾಮೀನು ರಹಿತ ವಾರೆಂಟ್ ಹೊರಡಿಸಿದ್ದರು

# ಪಾಕಿಸ್ತಾನದಿಂದ ಆಕಸ್ಮಿಕವಾಗಿ ಗಡಿ ದಾಟಿದ ಬಿಎಸ್‌ಎಫ್ ಯೋಧನ ಬಂಧನ

**ನವದೆಹಲಿ, ಏ. 25:** ಪಂಜಾಬ್‌ನ ಫಿರೋಜ್‌ಪುರ ಜಿಲ್ಲೆಯ ಆಚೆ ಅಂತಾರಾಷ್ಟ್ರೀಯ ಗಡಿಯನ್ನು ಆಕಸ್ಮಿಕವಾಗಿ ದಾಟಿದ ಕಾರಣಕ್ಕಾಗಿ ಪಾಕಿಸ್ತಾನಿ ರೇಂಜರ್‌ಗಳು ಭಾರತದ ಗಡಿ ಭದ್ರತಾ ಪಡೆಯ ಯೋಧನನ್ನು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಬಂಧನಕ್ಕೊಳಗಾದ ಯೋಧನನ್ನು 182 ನೇ ಬೆಟಾಲಿಯನ್‌ನ ಪೇದೆ ಪಿಕೆ ಸಾಹು ಎಂದು ಗುರುತಿಸಲಾಗಿದ್ದು, ಅವರು ಎರಡು ದೇಶಗಳ ನಡುವಿನ ಮುಳ್ಳುತಂತಿ ಬೇಲಿಯ ಆಚೆ ಭಾರತೀಯ ರೈತರೊಂದಿಗೆ ಹೋಗುತ್ತಿದ್ದಾಗ ಬಂಧಿಸಲಾಯಿತು.

ರೈತರಿಗೆ ಭಾರತೀಯ ಪ್ರದೇಶದೊಳಗೆ ಉಳಿದಿರುವ ಬೇಲಿಯ ಮುಂಭಾಗದ ಭೂಮಿಯಲ್ಲಿ ಕೆಲಸ ಮಾಡಲು ಅವಕಾಶವಿದೆ. ಈ ಭೂಮಿ ಬಿಎಸ್‌ಎಫ್ ಸಿಬ್ಬಂದಿಯ ಮೇಲ್ವಿಚಾರಣೆಯಲ್ಲಿದ್ದು, ಇದೇ ಬುಧವಾರ ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ಕೆಲಸ ಮಾಡಬಹುದಾಗಿದೆ ಎಂದು ಮಾಧ್ಯಮ ವರದಿ ಮಾಡಿದೆ.

ಈ ಕಾರ್ಯಾಚರಣೆಯ ಮೇಲ್ವಿಚಾರಣೆಗೆ ನಿಯೋಜಿಸಲಾದ ಬಿಎಸ್‌ಎಫ್ ಸಿಬ್ಬಂದಿಯನ್ನು ಕಿಸಾನ್ ಗಾರ್ಡ್‌ಗಳು ಎಂದು ಕರೆಯಲಾಗುತ್ತದೆ.

ಸಾಹು ಅವರನ್ನು ಬಂಧಿಸಿದ ಸಮಯದಲ್ಲಿ, ಇಬ್ಬರು ಬಿಎಸ್‌ಎಫ್ ಜವಾನರನ್ನು ಜಲೋಕ್ ಪೋಸ್ಟ್‌ನಲ್ಲಿ ಕಿಸಾನ್ ಗಾರ್ಡ್‌ಗಳಾಗಿ ನಿಯೋಜಿಸಲಾಗಿತ್ತು. ಅಲ್ಲಿ ರೈತರು ಮುಳ್ಳುತಂತಿಯ ಉದ್ದಕ್ಕೂ ಬೆಳೆಗಳನ್ನು ಕೊಯ್ಲು ಮಾಡುತ್ತಿದ್ದರು ಎಂದು ಪತ್ರಿಕೆ ವರದಿ ಮಾಡಿದೆ. ಪಶ್ಚಿಮ ಬಂಗಾಳದ ಹೂಗ್ಲಿ ನಿವಾಸಿಯಾಗಿರುವ ಯೋಧ ಸಾಹು ಸಮವಸ್ತ್ರದಲ್ಲಿದ್ದರು, ಬಂಧಿಸಲ್ಪಟ್ಟಾಗ ಅವರ ಸೇವಾ ಆಯುಧ ಎಕೆ –47 ರೈಫಲ್ ಅನ್ನು ಹಿಡಿದುಕೊಂಡು, ಮರದ ನೆರಳಿನಲ್ಲಿ ವಿಶ್ರಾಂತಿ ಪಡೆಯಲು ತೆರಳಿದ್ದರು ಎಂದು ದಿ ಹಿಂದೂ ವರದಿ ಮಾಡಿದೆ.

ಅವರ ಸಹೋದ್ಯೋಗಿಯೊಬ್ಬರು ಕರೆ ಮಾಡಿ ಅವರು ಕರ್ತವ್ಯದಲ್ಲಿದ್ದಾಗ ಸಿಕ್ಕಿಬಿದ್ದಿದ್ದಾರೆ ಎಂದು ನಮಗೆ ತಿಳಿಸಿದರು ಎಂದು ಸಾಹು ಅವರ ಪತ್ನಿ ಪಿಟಿಐಗೆ ತಿಳಿಸಿದ್ದಾರೆ. ನಾನು ಕೊನೆಯ ಬಾರಿಗೆ ಮಂಗಳವಾರ ರಾತ್ರಿ ಅವರೊಂದಿಗೆ ಮಾತನಾಡಿದೆ. ಅವರು 17 ವರ್ಷಗಳಿಂದ ಬಿಎಸ್‌ಎಫ್‌ನಲ್ಲಿದ್ದಾರೆ. ಅವರು ಶೀಘ್ರದಲ್ಲೇ ಮನೆಗೆ ಮರಳಬೇಕೆಂದು ನಾನು ಬಯಸುತ್ತೇನೆ.

ಎಂದು ಅವರು ಹೇಳಿದ್ದಾರೆ. ಸಾಹು ಅವರ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳಲು ರೇಂಜರ್‌ಗಳೊಂದಿಗೆ ಧ್ವಜ ಸಭೆಗಳನ್ನು ನಡೆಸ ಲಾಗುತ್ತಿದೆ ಎಂದು ಬಿಎಸ್‌ಎಫ್ ಅಧಿಕಾರಿಯೊಬ್ಬರು ಗುರುವಾರ ಹೇಳಿದ್ದಾರೆ ಎಂದು ದಿ ಹಿಂದೂ ವರದಿ ಮಾಡಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ 2 ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳು ಹದಗೆಡುತ್ತಿರುವ ಮಧ್ಯೆ ಈ ಘಟನೆ ನಡೆದಿದೆ.

# ಸುವೇಂದು ಅಧಿಕಾರಿಯಿಂದ ಸುಳ್ಳು ಪ್ರಚಾರ

**ಮುಜಫರ್ ನಗರ, ಏ.25:** ಜಮ್ಮು ಕಾಶ್ಮೀರದ ಪಹಲ್ಗಾಮ್ನ ಬೈಸರನ್ ಪ್ರದೇಶದಲ್ಲಿ ನಡೆದ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ, ಪಶ್ಚಿಮ ಬಂಗಾಳದಲ್ಲಿ ಕಾಶ್ಮೀರಿಗಳು ವೈರ್‌ಲೆಸ್ ನೆಟ್‌ವರ್ಕ್ ಸ್ಥಾಪಿಸಿದ್ದಾರೆ ಎಂದು ರಾಜ್ಯದ ಬಿಜೆಪಿ ವಿಪಕ್ಷ ನಾಯಕ ಸುವೆಂಧು ಅಧಿಕಾರಿ ಸುಳ್ಳು ಹೇಳುವ ಮೂಲಕ ರಾಜ್ಯದಲ್ಲಿ ಹಿಂಸಾಚಾರಕ್ಕೆ ಪ್ರಯತ್ನ ಮಾಡಿರುವ ಘಟನೆ ನಡೆದಿದೆ. ಅದಾಗ್ಯೂ, ಪೊಲೀಸರು ಅವರ ಹೇಳಿಕೆಯ ಬಗ್ಗೆಗಿನ ಸತ್ಯಾಸತ್ಯತೆಯನ್ನು ಬಹಿರಂಗಪಡಿಸಿದ್ದಾರೆ. ಬಂಗಾಳದಲ್ಲಿ ಕಾಶ್ಮೀರಿಗಳು ಕೋಲ್ಕತ್ತಾದ ದಕ್ಷಿಣ ಹೊರವಲಯದಲ್ಲಿರುವ ಬರುಯಿಪುರದಲ್ಲಿ ವಾಸಿಸುವ ಇಬ್ಬರು ಕಾಶ್ಮೀರಿ ವ್ಯಕ್ತಿಗಳು ತಮ್ಮ ಮನೆಯ ಛಾವಣಿಯ ಮೇಲೆ ನ್ಯಾನೋಬೀಮ್ 2ACಕಾಂಪ್ಯಾಕ್ಟ್ ಮತ್ತು ಹೈ–ಪರ್ಫಾರ್ಮೆನ್ಸ್ ವೈರ್ಲೆಸ್ ನೆಟ್ವರ್ಕ್ ಬ್ರಿಡ್ಜ್ ಅನ್ನು ಸ್ಥಾಪಿಸಿದ್ದಾರೆ ಎಂದು ಬಿಜೆಪಿ ಶಾಸಕ, ಪಶ್ಚಿಮ ಬಂಗಾಳದ ವಿರೋಧ ಪಕ್ಷದ ನಾಯಕ ಸುವೇಂದು ಅಧಿಕಾರಿ ಗುರುವಾರ ಆರೋಪಿಸಿದ್ದಾರೆ. ಅದಾಗ್ಯೂ, ಬರುಯಿಪುರದ ಪೊಲೀಸರು ಈ ಹೇಳಿಕೆಯನ್ನು ನಿರಾಕರಿಸಿದ್ದು, ಎಂಜಿನಿಯರ್‌ಗಳಾಗಿದ್ದು, ಅವರ ಛಾವಣಿಯ ಮೇಲೆ ಇರುವ ಸಾಧನವು ಇಂಟರ್‌ನೆಟ್ ಸಂಪರ್ಕಕ್ಕಾಗಿ ಸ್ಥಾಪಿಸಲಾಗಿದೆ ಎಂದು ಹೇಳಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಸುವೆಂಧು ಅಧಿಕಾರಿ, ಇಬ್ಬರು ಕಾಶ್ಮೀರಿ ವ್ಯಕ್ತಿಗಳು ಮೇಲ್ಛಾವಣಿಯಲ್ಲಿ ನ್ಯಾನೋಬೀಮ್ 2AC ಕಾಂಪ್ಯಾಕ್ಟ್ ಮತ್ತು ಹೈ–ಪರ್ಫಾರ್ಮೆನ್ಸ್ ವೈರ್‌ಲೆಸ್ ನೆಟ್ವರ್ಕ್ ಬ್ರಿಡ್ಜ್ ಅನ್ನು ಸ್ಥಾಪಿಸಿದ್ದಾರೆ ಎಂಬ ಮಾಹಿತಿಯನ್ನು ಸ್ಥಳೀಯರು ನನ್ನೊಂದಿಗೆ ಹಂಚಿಕೊಂಡಿದ್ದಾರೆ. ಅದನ್ನು ಹೆಚ್ಚಿನ ವೇಗದ, ದೂರದ ವೈರ್‌ಲೆಸ್ ಸಂಪರ್ಕಕ್ಕಾಗಿ ವಿನ್ಯಾಸಗೊಳಿಸಲಾಗಿದೆ. ಎಂದು ಅವರು ಹೇಳಿದ್ದಾರೆ. ರಾಜ್ಯದ ಪೊಲೀಸ್ ಉಪ ಜನರಲ್ ಮತ್ತು ರಾಷ್ಟ್ರೀಯ ತನಿಖಾ ಸಂಸ್ಥೆಯನ್ನು ಒತ್ತಾಯಿಸಿದ್ದಾರೆ. ಜಮ್ಮು ಕಾಶ್ಮೀರದ ಪಹಲ್ಗಾಮ್ನಲ್ಲಿ ಭಯೋತ್ಪಾದಕರು ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ನಡೆಸಿದ ದಾಳಿಯಲ್ಲಿ 26 ಜನರು ಮೃತಪಟ್ಟಿದ್ದಾರೆ.

# ಪೋಪ್ ಅಗಲುವಿಕೆಯಿಂದ ಜಾಗತಿಕ ನಷ್ಟ: ಫಾ|ಫೌಸ್ತಿನ್ ಲೋಬೊ

**ಮುಂಬಯಿ,ಏ.25:** ಕಳೆದ ಸೋಮವಾರ ರೋಮ್‌ನಲ್ಲಿ ಕ್ರೈಸ್ತೈಕ್ಯರಾದ ಕಥೋಲಿಕ್ ಕ್ರೈಸ್ತರ ಪರ್ಮೋಚ್ಚ ಧರ್ಮಗುರು ಪೋಪ್ ಫ್ರಾನ್ಸಿಸ್ ಅವರಿಗೆ ಎಂಸಿಸಿ ಬ್ಯಾಂಕ್ ವತಿಯಿಂದ ನುಡಿನಮನ ಸಲ್ಲಿಸಲಾಯಿತು.




ಮಂಗಳೂರು ಅಲ್ಲಿನ ಬ್ಯಾಂಕ್‌ನ ಆಡಳಿತ ಕಛೇರಿಯಲ್ಲಿ ಕಳೆದ ಗುರುವಾರ ಎಂಸಿಸಿ ಬ್ಯಾಂಕ್‌ನ ಅಧ್ಯಕ್ಷ ಸಹಕಾರರತ್ನ ಅನಿಲ್ ಲೋಬೊ ಅಧ್ಯಕ್ಷತೆಯಲ್ಲಿ ನಡೆಸಲಾದ ಬಾಷ್ಪಾಂಜಲಿ ಮತ್ತು ಶೋಕಸಭೆಯಲ್ಲಿ ಫಾದರ್ ಮುಲ್ಲರ್ಸ್ ಚಾರಿಟೆಬಲ್ ಇನ್‌ಸ್ಟಿಟ್ಯೂಶನ್ಸ್‌ನ ನಿಯೋಜಿತ ನಿರ್ದೇಶಕ ವಂದನೀಯ ಫಾ|ಫೌಸ್ತಿನ್ ಲೂಕಸ್ ಲೋಬೊ ಹಾಜರಿದ್ದು ಪ್ರಾರ್ಥನೆಗೈದರು.

ಪರಮಪೂಜ್ಯ ಪೋಪ್ ಫ್ರಾನ್ಸಿಸ್ ದ್ವನಿಯಿಲ್ಲದವರ ದ್ವನಿಯಾಗಿದ್ದು, ದೇವಸ್ವರೂಪ ಯೇಸುಕ್ರಿಸ್ತನನ್ನು ಭವ್ಯತೆಯಲ್ಲಿ ಅಲ್ಲ, ಬಡವರು ಮತ್ತು ದೀನದಲಿತರಲ್ಲಿ ಕಂಡರು. ತಮ್ಮಜೀವನದುದ್ದಕ್ಕೂ ಸರಳ ಮತ್ತು ವಿನಮ್ರ ಜೀವನಶೈಲಿಯನ್ನು ನಡೆಸುವ ಮೂಲಕ ಸಂತ ಫ್ರಾನ್ಸಿಸ್ ಅಸ್ಸಿಸಿಯ ಹೆಜ್ಜೆಗಳನ್ನು ಅಕ್ಷರಶಃ ಅನುಸರಿಸಿದರು. ಪೋಪ್ ಫ್ರಾನ್ಸಿಸ್ ಪ್ರಗತಿಪರರಾಗಿದ್ದರು ಮತ್ತು ಅನಗತ್ಯ, ಅಪ್ರಸ್ತುತ ಅಭ್ಯಾಸಗಳನ್ನು ತೆಗೆದುಹಾಕುವಲ್ಲಿ ನಂಬಿಕೆ ಇಟ್ಟಿದರು. ಪ್ರಪಂಚದಾದ್ಯಂತ ಯುದ್ಧಗಳು ಮತ್ತು ಸಂಘರ್ಷಗಳಿಂದಾಗಿ ಬಳಲುತ್ತಿರುವ ಮಾನುಕುಲದ ಬಗ್ಗೆ ಪೋಪ್ ಆಳವಾದ ಸಹಾನಭೂತಿ ಹೊಂದಿದ್ದರು. ಅವರು ಜನರಲ್ಲಿ ಅಂತರ್‌ಧರ್ಮೀಯ ಸಾಮರಸ್ಯವನ್ನು ಪ್ರತಿಪಾದಿಸಿದರು ಮತ್ತು ಶಾಂತಿಯನ್ನು ರೂಪಿಸಲು ಬಯಸಿದರು. ಅವರು ಮಾನವಕುಲದ ಸುಧಾರಣೆಗಾಗಿ ನಿಜವಾದ ಅರ್ಥದಲ್ಲಿ ಶ್ರಮಿಸುವ ವಿಶ್ವ ಮಾನವತಾ ಜಾಗತಿಕ ವ್ಯಕ್ತಿತ್ವವುಳ್ಳವರಾಗಿದ್ದರು. ಪೋಪ್ ಅಗಲುವಿಕೆಯಿಂದ ಜಾಗತಿಕ ಕಥೋಲಿಕ್ ಸಮಾಜ ಅನಾಥವಾಗಿದೆ ಮತ್ತು ಅವರ ಪವಿತ್ರತೆಯ ಆದರ್ಶಗಳನ್ನು ನಮ್ಮಜೀವನದಲ್ಲಿ ಅನುಸರಿಸಿ ಬಾಳುವುದೇ ಅವರಿಗೆ ನಮ್ಮ ನಿಜಾರ್ಥದ ಶ್ರದ್ಧಾಂಜಲಿ ಆಗಲಿ ಎಂದು ಫಾ| ಫೌಸ್ತಿನ್ ಲೋಬೊ ತಿಳಿಸಿ ಪೋಪ್ ಫ್ರಾನ್ಸಿಸ್‌ಅವರ ಆತ್ಮಕ್ಕೆ ಚಿರಶಾಂತಿ ಕೋರುತ್ತಾ ಗೌರವ ಸಲ್ಲಿಸಿದರು. ಹಾಗೂ ಹಲವಾರು ಸಂದರ್ಭಗಳಲ್ಲಿ ಪೋಪ್ ಅವರೊಂದಿಗಿನ ಭೇಟಿಯನ್ನು ನೆನಪಿಸಿಕೊಂಡರು. ಬ್ಯಾಂಕ್‌ನ ನಿರ್ದೇಶಕಿ ಐರಿನ್ ರೆಬೆಲ್ಲೊ ಮಾತನಾಡಿ ಪೋಪ್ ಫ್ರಾನ್ಸಿಸ್ ಅವರು ರೋಮನ್ ಕಾಥೋಲಿಕ್ ಚರ್ಚ್‌ನ ಸರ್ವೋಚ್ಚ ಧರ್ಮಗುರುಗಳಾಗಿ ನಿರ್ವಹಿಸಿದ್ದ ಸ್ಥಾನಕ್ಕೆ ಸಂಪೂರ್ಣ ನ್ಯಾಯ ಒದಗಿಸುತ್ತಾ ಸಾಗಿದ ಹಾದಿಯನ್ನು ಪ್ರಸ್ತುತಪಡಿಸಿ ನುಡಿನಮನ ಸಲ್ಲಿಸಿದರು.

ಬ್ಯಾಂಕ್‌ನ ನಿರ್ದೇಶಕರು, ಷೇರುದಾರರು, ಗ್ರಾಹಕರು ಮತ್ತು ಸಿಬ್ಬಂದಿಗಳ ಪರವಾಗಿ ಬ್ಯಾಂಕ್‌ನ ಅಧ್ಯಕ್ಷ ಅನಿಲ್ ಲೋಬೊ ಪೋಪ್ ಫ್ರಾನ್ಸಿಸ್ ಅವರ ಭಾವಚಿತ್ರಕ್ಕೆ ಪುಷ್ಪಾಂಜಲಿಗೈದು ನುಡಿನಮನ ಸಲ್ಲಿಸಿ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಿದರು. ಫಾ| ಫೌಸ್ತಿನ್ ಲೋಬೊ ಮತ್ತು ಬ್ಯಾಂಕ್‌ನ ಉಪಾಧ್ಯಕ್ಷ ಜೆರಾಲ್ಡ್ ಜೂಡ್ ಡಿಸಿಲ್ವಾ ಪೋಪ್ ಅಗಲಿಕೆಗೆ ಸಂತಾಪ ವ್ಯಕ್ತ ಪಡಿಸಿ ಪುಷ್ಪನಮನಗೈದು ಗೌರವ ಸಲ್ಲಿಸಿದರು.

ಶೋಕಸಭೆಯಲ್ಲಿ ಬ್ಯಾಂಕ್‌ನ ನಿರ್ದೇಶಕರು, ಸಂಸ್ಥಾಪಕ ಶಾಖೆ ಮತ್ತು ಆಡಳಿತ ಕಛೇರಿ ಸಿಬ್ಬಂದಿಗಳು ಮತ್ತು ಮಹಾಪ್ರಬಂಧಕ ಸುನಿಲ್ ಮಿನೆಜಸ್ ಹಾಜರಿದ್ದರು. ಕ್ಯಾರೆನ್ ಕ್ರಾಸ್ತಾ ತಂಡದ ಪ್ರಾರ್ಥನಾಗೀತೆಯೊಂದಿಗೆ ಸಭೆ ಆದಿಗೊಂಡಿತು. ಹಿರಿಯ ಪ್ರಬಂಧಕ ಡೇರಿಲ್ ಲಸ್ರಾದೊ ನಿರೂಪಿಸಿ ವಂದಿಸಿದರು.

# ಮುಂಬಯಿ ವಿಶ್ವವಿದ್ಯಾಲಯ: ಶ್ರೀನಾರಾಯಣ ಗುರುಗಳ ಅಧ್ಯಯನ ಸರ್ಟಿಫಿಕೇಟು ಕೋರ್ಸ್‌ನಲ್ಲಿ ಜಗನ್ನಾಥ್ ಎಂ.ಅಮೀನ್ ಪ್ರಥಮ

ಮುಂಬಯಿ, ಎ.23: ಮುಂಬಯಿ ವಿಶ್ವವಿದ್ಯಾಲಯದ ತತ್ವಶಾಸ್ತ್ರ ವಿಭಾಗದ ಶ್ರೀ ನಾರಾಯಣ ಗುರುಗಳ ತತ್ವಶಾಸ್ತ್ರ 2023–24ನೇ ಶೈಕ್ಷಣಿಕ ಸಾಲಿನ ಸರ್ಟಿಫಿಕೇಟು ಕೋರ್ಸ್ ಪರೀಕ್ಷೆ ಇತ್ತೀಚೆ ನಡೆಸಲಾಗಿದ್ದು ಮುಂಬಯಿ ಅಲ್ಲಿನ ತುಳು–ಕನ್ನಡಿಗ ಹಿರಿಯ ಸಮಾಜ ಸೇವಕ ಜಗನ್ನಾಥ ಮದನ್ ಅಮೀನ್ ಸರ್ಟಿಫಿಕೇಟು ಕೋರ್ಸ್‌ನಲ್ಲಿ ಪ್ರಥಮ ರ್‍ಯಾಂಕ್ ಪಡೆದಿದ್ದು ಡಿಪ್ಲೋಮಾ ಕೋರ್ಸ್‌ನಲ್ಲಿ ದ್ವಿತೀಯ ರ್‍ಯಾಂಕ್‌ಗೆ ಭಾಜನರಾಗಿದ್ದಾ ರೆ. ಸಾಂತಾಕ್ರೂಜ್ ಪೂರ್ವದ ಕಲೀನಾ ಇಲ್ಲಿನ ವಿದ್ಯಾನಗರಿಯ ವಿಶ್ವವಿದ್ಯಾಲಯದ ತತ್ವಶಾಸ್ತ್ರ ವಿಭಾಗದಲ್ಲಿ ಕಳೆದ ಎ.19ರ ಶುಕ್ರವಾರ ನಡೆದ ವಿಚಾರ ಸಂಕಿರಣದಲ್ಲಿ ವಿಭಾಗದ ಮುಖ್ಯಸ್ಥೆ ಡಾ| ಪ್ರಿಯಾ ಎಂ.ವೈದ್ಯ ಮತ್ತು ಶ್ರೀ ನಾರಾಯಣ ಗುರುಗಳ ತತ್ರಶಾಸ್ತ್ರ ಸರ್ಟಿಫಿಕೇಟು ಕೋರ್ಸ್‌ನ ಸಮನ್ವಯಕ



ಡಾ| ನಾರಾಯಣ್ ಶಂಕರ್ ಗಡಾದ ಅವರು ಜಗನ್ನಾಥ್ ಅಮೀನ್ ಅವರಿಗೆ ಪ್ರಶಸ್ತಿ, ಮಾನ್ಯತಾಪತ್ರ ಮತ್ತು ಅಂಕಪಟ್ಟಿ ಪ್ರದಾನಿಸಿ ಅಭಿನಂದಿಸಿದರು.

ಕಾಸರಗೋಡು ಉಪ್ಪಳ ಅಲ್ಲಿನ ಕೊಂಡೆವೂರು ಮೂಲತಃ ಮದನ ಪೂಜಾರಿ ಮತ್ತು ಲಕ್ಷ್ಮೀ ಪೂಜಾರ್ತಿ ದಂಪತಿ ಸುಪುತ್ರ 82 ಹರೆಯದ ಜಗನ್ನಾಥ್ ಅಮೀನ್ ಉಪ್ಪಳದಲ್ಲಿ ಬಾಲ್ಯ ಶಿಕ್ಷಣ ಪೂರೈಸಿ 1960ರಲ್ಲಿ ಮುಂಬಯಿಗೆ ಆಗಮಿಸಿ ಕನ್ನಡ ರಾತ್ರಿ ಶಾಲೆಯಲ್ಲಿ ಶಿಕ್ಷಣ ಪೂರೈಸಿದ್ದರು. ಬಿಲ್ಲವ ಸಹಕಾರ ಭೂಷಣ, 'ಬಿಲ್ಲವ ರತ್ನ' ಜಯ ಸಿ.ಸುವರ್ಣ ಅವರ ನಿಕಟವರ್ತಿ ಆಗಿದ್ದು ಕಳೆದ ಸುಮಾರು ಐದು ದಶಕಗಳಿಂದ ಪುಟ್ಟಪರ್ತಿ ಸತ್ಯಸಾಯಿ ಬಾಬಾ ಅವರ ಪ್ರಸಾಂತಿ ನಿಲಯ ಆಶ್ರಮದಲ್ಲಿ ಅರೆಕಾಲಿಕವಾಗಿ ಸೇವಾ ನಿರತರಾಗಿದ್ದಾರೆ.

ಯುಎಸ್‌ಎ ಅಲ್ಲಿ ನೆಲೆಯಾಗಿರುವ ಸುಪುತ್ರಿ, ಅಳಿಯ, ಮೊಮ್ಮಗಳನ್ನು ಕಾಣಲು ಸಂದರ್ಶಕರಾಗಿ ಅಮೇರಿಕಾಕ್ಕೆ ಹೋದಲ್ಲೂ ಓದುತ್ತಾ, ನಾರಾಯಣ ಗುರುಗಳ ಅಧ್ಯಯನದಲ್ಲೇ ಕಾಲ ಕಳೆದು ಪರೀಕ್ಷೆ ಬರೆದ ಹಿರಿಯ ನಾಗರೀಕರಾದ ಜಗನ್ನಾಥ್ ಅಮೀನ್ ತತ್ವಶಾಸ್ತ್ರ ಪರೀಕ್ಷೆಯ ಬ್ರಹ್ಮಶ್ರೀ ನಾರಾಯಣ ಗುರುಗಳ ಅಧ್ಯಯನದಲ್ಲಿ ಶ್ರೇಷ್ಠದರ್ಜೆಯೊಂದಿಗೆ ತೇರ್ಗಡೆಯಾದ ಸಾಧನೆಗೆ ಗಣ್ಯರನೇಕರು ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ಮಾನವೀಯ ಧರ್ಮಾನುಸಾರ ಬಾಳು ಬೆಳಗಿಸಿ: ಸುನೀತಾ ಶರ್ಮ

**ಮುಂಬಯಿ,ಏ.25:** ಮುಂಬಯಿಯಲ್ಲಿನ ಕರುನಾಡ ಸಿರಿ ಸಂಸ್ಥೆಯು ಸಾಂತಕ್ರೂಜ್ ಅಲ್ಲಿನ ಲಯನ್ಸ್ ಕ್ಲಬ್ ಮೈದಾನದಲ್ಲಿ ಕಳೆದ ಭಾನುವಾರ ವಾರ್ಷಿಕ ಕ್ರಿಕೆಟ್ ಪಂದ್ಯಟ ಆಯೋಜಿಸಿದ್ದು ಕ್ರಿಕೆಟೋತ್ಸವಕ್ಕೆ ಚಾಲನೆಯನ್ನಿತ್ತು ಸಿಸಿಐ ಲಾಜಿಸ್ಟಿಕ್ಸ್ ಲಿಮಿಟೆಡ್ ಇದರ ನಿರ್ದೇಶಕಿ ಮುಂಬಯಿ ಬಿಜೆಪಿ ಉಪಾಧ್ಯಕ್ಷೆ ಸುನೀತಾ ಶರ್ಮ ತಿಳಿಸಿದರು.

ಹೇಗೆ ಕ್ರೀಡೆಗೆ ಜಾತಿಪಂಥ ಇಲ್ಲವೋ ಹಾಗೆನೇ ನಾನೂ ಯಾವುದೇ ಜಾತಿಪಾತಿ ನಂಬುವುದಿಲ್ಲ. ನಾನು ಮಾನವಿಯತೆಯನ್ನು ನಂಬುತ್ತೇನೇ. ನಾನು ಒಬ್ಬಳು ಮನುಷ್ಯಳೇ ಹೊರತು ಮಾನವೀಯ ಧರ್ಮಾನುಸಾರ ಬದುಕುತ್ತೇನೆ. ತಾವೂ ಇದನ್ನೇ ರೂಢಿಸಿರಿ. ಸಾಮರಸ್ಯದ ಜೀವನ ನಡೆಸುವ ಎಲ್ಲರೊಂದಿಗೆ ನಾನು ಯಾವಾಗಲು ಸಹಕಾರಕ್ಕಾಗಿ ಸಿದ್ಧ ಎಂದು ಸುನೀತಾ ತಿಳಿಸಿದರು.

ಸಮಾಜ ಸೇವಕಿ ಶ್ರೀದೇವಿ ರಾವ್ ಮಾತನಾಡಿ ಕರುನಾಡ ಸಿರಿಯ ಸಮರ್ಪಣೆ ಮತ್ತು ಸಂಘಟನಾ ಕೌಶಲ್ಯದ ಫಲವಾಗಿ ಪ್ರತಿಷ್ಠಿತ ಸೇವಾ ಸಂಸ್ಥೆಯಾಗಿ ಕಾರ್ಯಚರಿಸುತ್ತಿದೆ ಎಂದು ಶ್ಲಾಘಿಸಿದರು.

ಹಿರಿಯರ ವಿಭಾಗದಲ್ಲಿ ಪ್ರೀತಮ್ ಇಲೆವೆನ್ ಮೊದಲ ಸ್ಥಾನಕ್ಕೆ ಭಾಜನವಾಗಿದು ಲಲಿತ ಎಸ್. ಕೆ ಫೌಂಡೇಶನ್ ದ್ವಿತಿಯ ಸ್ಥಾನ ಪಡೆಯಿತು. ಮಕ್ಕಳ ವಿಭಾಗದಲ್ಲಿ ಎನ್‌ಎಸ್ ಟೋಕೋ



ರೈಡರ್ಸ್ ಪ್ರಥಮ ಸ್ಥಾನದೊಂದಿಗೆ ವಿಜೇತರಾಗಿದ್ದು ಶ್ಯಡೋ ಸ್ಟ್ರೈಕರ್ಸ್ ದ್ವಿತೀಯ ಸ್ಥಾನಕ್ಕೆ ಪಾತ್ರವಾಯಿತು. ಪಂದ್ಯಾಟದಲ್ಲಿ ಹಿರಿಯರ 08 ತಂಡಗಳು, ಮಕ್ಕಳ 10 ತಂಡಗಳು ಭಾಗವಹಿಸಿದ್ದವು. ಅದುಅಲ್ಲದೆ ಪುರುಷರ ಹಾಗೂ ಮಹಿಳಾ ತಂಡಗಳೂ ಭಾಗವಹಿಸಿದ್ದವು. ಮೊದಲಿಗೆ ಮಕ್ಕಳ ಕ್ರಿಕೆಟ್ ಟೂರ್ನಮೆಂಟ್ ಆಡಿಸಲಾಗಿದ್ದು ಈ ಪಂದ್ಯದಲ್ಲಿ ನಮಸ್ಟಟ್ಸ್ ಕೋಚಿಂಗ್ ಕ್ಲಾಸ್‌ನ ಮಾಜಿ ಹಾಗೂ ಹಾಲಿ ವಿದ್ಯಾರ್ಥಿಗಳು ಜೊತೆಗೆ ಧಾರವಿಯ ದಿ ಹೋಪ್ ಫೌಂಡೇಷನ್‌ನ ಮಕ್ಕಳೂ ಉತ್ಸಾಹದಿಂದ ಭಾಗವಹಿಸಿದ್ದರು. ಪಂದ್ಯಾಟದಲ್ಲಿ ಮಕ್ಕಳು ಹಾಗೂ ಹಿರಿಯರಿಗಾಗಿಯೂ ಕ್ರಿಕೆಟ್ ಪಂದ್ಯಾಟ ಆಯೋಜಿಸಲಾಗಿತ್ತು.

ಕರುನಾಡ ಸಿರಿ ಪ್ರಮುಖ ಸದಸ್ಯರಾದ ಅನಿಲ್ ಗೌಡ, ಯೋಗೇಶ್ ಸುಪೆಕರ, ಮಂಗೇಶ್ ರಾಯಪನೋರ್ ಅವರು ಶ್ರಮಿಸಿದ್ದು ಕರುನಾಡ ಸಿರಿ ಅಧ್ಯಕ್ಷ ಬಾಲಚಂದ್ರ ದೇವಾಡಿಗ ಸ್ವಾಗತಿಸಿದರು. ಮಹಿಳಾ ಸದಸ್ಯೆಯರಾದ ಲಲಿತ ಗೌಡ, ಮಮತಾ ಗೌಡ, ಅಮೃತ ಗೌಡ ಅತಿಥಿಗಳಿಗೆ ತುಳಸಿ ಗಿಡವನ್ನಿತ್ತು ಸತ್ಕರಿದರು. ದುರ್ಗಪ್ಪ ವೈ. ಕೋಟಿಯಾವರ್ ಕಾರ್ಯಕ್ರಮ ನಿರೂಪಿಸಿದರು. ಭೀಮರಾಯ ಚಿಲ್ಕ ವಂದಿಸಿದರು.

# ಬೋಟ್‌ಮ್ಯಾನ್ಸ್ ಹಬ್ ಉದ್ಘಾಟಿಸಿದ ಡಾ|ರೊನಾಲ್ಡ್ ಕೊಲಾಸೋ

**ಮುಂಬಯಿ, ಏ.25:** ಗಲ್ಫ್ ರಾಷ್ಟ್ರದ ದುಬಾಯಿ ಅಲ್ ಖುಸೈಸ್ ಇಲ್ಲಿನ ಫಾರ್ಚೂನ್ ದುಬೈ ಗ್ರ್ಯಾಂಡ್ ಹೋಟೆಲ್‌ನಲ್ಲಿ ಆತಿಥ್ಯ ಸತ್ಕಾರದ ವಿನೂತನ ಪರಿಕಲ್ಪನೆಯ ಭವ್ಯವಾದ 'ಬೋಟ್‌ಮ್ಯಾನ್ಸ್ ಹಬ್' ಕಳೆದ ಬುಧವಾರ ಸಂಜೆ ಸೇವಾರ್ಪಣೆಗೈಯಲಾಗಿದ್ದು, ಕರ್ನಾಟಕದ ಪ್ರತಿಷ್ಠಿತ ಉದ್ಯಮಿ, ಕೊಡುಗೈದಾನಿ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ|ರೊನಾಲ್ಡ್ ಕೊಲಾಸೋ ರಿಬ್ಬನ್ ಕತ್ತರಿಸಿ 'ಬೋಟ್‌ಮ್ಯಾನ್ಸ ಹಬ್' ಉದ್ಘಾಟಿಸಿ ಶುಭಾರೈಸಿದರು.



ನೂತನ ಆತಿಥ್ಯಗೃಹದ ಬಾಗಿಲು ತೆರೆಯುವ ಮುನ್ನ ಬಿಎಪಿಎಸ್ ಹಿಂದೂ ಮಂದಿರದ ಸ್ವಾಮೀಜಿ ಬಹುಶ್ರುತದಾಸ್ ಜೀ ಅವರು ಸಾಂಕೇತಿಕವಾಗಿ ರೆಸ್ಟೋರೆಂಟ್‌ಗೆ ಚಾಲನೆಯನ್ನಿತ್ತು ಆಶೀರ್ವಾದಗೈದರು. ಪ್ರವೀಣ್ ಅವರ ಆಪ್ತಮಿತ್ರರಾದ ಹುಸೇನ್ ಅಬ್ಬಾಸ್ ಲೂತಾಹ್, ಭಾರತೀಯ ಗಾಯಕಿ, ಗೋವಾದ ನಟಿ ರೀಟಾ ರೋಸ್ ಮತ್ತು ಅಬುಧಾಬಿ ಕರ್ನಾಟಕ ಸಂಘ ಇದರ ಅಧ್ಯಕ್ಷ ಸರ್ವೋತ್ತಮ ಶೆಟ್ಟಿ, ಫಾರ್ಚೂನ್ ಗ್ರೂಪ್ ಆಫ್ ಹೋಟೆಲ್‌ಗಳ ಕಾರ್ಯನಿರ್ವಾಹಕ ನಿರ್ದೇಶಕಿ ಪ್ರಾಚಿ ಶೆಟ್ಟಿ ಸೇರಿದಂತೆ ವಿಐಪಿ ಅತಿಥಿಗಳು, ಗಣ್ಯರು, ಉದ್ಯಮ ವೃತ್ತಿಪರರು ಮತ್ತು ಆಹಾರ ಪ್ರಿಯರು ಸಮಾರಂಭ ಮತ್ತು ಸಂಗೀತ ಸಂಜೆಯಲ್ಲಿ ಭಾಗವಹಿಸಿದ್ದರು.

ರೀಟಾ ರೋಸ್ ಅವರು ತಮ್ಮ ಕೆಲವು ನಾಸ್ಟಾಲ್ಜಿಕ್ ಹಿಟ್‌ಗಳನ್ನು ಹಾಡಿದ್ದು ಗೋವಾದ ದಂತಕಥೆ ಗಾಯಕ ಆಲ್ಫ್ರೆಡ್ ರೋಸ್ ಅವರ ಪ್ರತಿಭಾವಂತ ಮಕ್ಕಳಾದ ಎಂಗೆಲ್ಬರ್ಟ್ ಮತ್ತು ಅಲ್ರಿಯಾ ಅವರೂ ಸಂಗೀತಗ್ಗೆ ಸಾಥ್ ನೀಡಿದರು. ಗೋವಾ ಮೂಲತಃ ಪ್ರಶಸ್ತಿ ವಿಜೇತ ಪ್ರಸಿದ್ಧ ಬಾಣಸಿಗ, ಬೋಟ್‌ಮ್ಯಾನ್ಸ್ ಹಬ್‌ನ ಸಂಯೋಜಕಿ ಚೆಫ್ ಸರಿತಾ ಚವ್ಹಾಣ್ ಅವರು ಮಂಗಳೂರು, ಗೋವಾನ್ ಮತ್ತು ಮಾಲ್ವಾಣಿ ಶೈಲಿಯ ಸ್ವಾಧಿಷ್ಟ ರುಚಿಗಳ ಖಾದ್ಯಗಳನ್ನು ಉಣಬಡಿಸಿದರು.

ಫಾರ್ಚೂನ್ ಗ್ರೂಪ್ ಆಫ್ ಹೋಟೆಲ್‌ಗಳ ಕಾರ್ಯಾಧ್ಯಕ್ಷ ವಕ್ವಾಡಿ ಪ್ರವೀಣ್ ಶೆಟ್ಟಿ ತಮ್ಮ ಅನುಭವವನ್ನು ಹಂಚಿಕೊಂಡಿದ್ದು, "ಇಂದು ನಾವು ಪಡೆದಿರುವ ಆಶೀರ್ವಾದ ಮತ್ತು ಬೆಂಬಲದಿಂದ ನಾವು ವಿನಮ್ರರಾಗಿದ್ದೇವೆ. ಬೋಟ್‌ಮ್ಯಾನ್ಸ್ ಹಬ್ ಕೇವಲ ರೆಸ್ಟೋರೆಂಟ್‌ಗಿಂತ ಹೆಚ್ಚಾಗಿರುತ್ತದೆಇದು ಸಮುದಾಯ ಮತ್ತು ಕರಾವಳಿ ಪರಂಪರೆಯ ಆಚರಣೆಯಾಗಿದೆ, ಮತ್ತು ಪ್ರತಿಯೊಬ್ಬರನ್ನು ತೆರೆದ ತೋಳುಗಳು ಮತ್ತು ಬೆಚ್ಚಗಿನ ತಟ್ಟೆಗಳೊಂದಿಗೆ ಸ್ವಾಗತಿಸಲು ನಾವು ಎದುರು ನೋಡುತ್ತೇವೆ. ಭವ್ಯವಾದ ಉದ್ಘಾಟನೆಯೊಂದಿಗೆ ಸೇವೆಗೆ ಸಿದ್ಧವಾಗಿರುವ ಬೋಟ್‌ಮ್ಯಾನ್ಸ್ ಹಬ್ ಈಗ ಅಧಿಕೃತವಾಗಿ ತೆರೆದಿದೆ. ಕರಾವಳಿ ಪಾಕಶಾಲೆಯ ಉತ್ಕೃಷ್ಟತೆಯ ಪ್ರಯಾಣಕ್ಕೆ ಡಿನ್ನರ್‌ಗಳನ್ನು ಸ್ವಾಗತಿಸಲು ಸಿದ್ಧವಾಗಿದೆ ಎಂದರು.

# ಮಲೆಮಹದೇಶ್ವರ ಬೆಟ್ಟದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ನಿರ್ಣಯ-ಸಿದ್ದರಾಮಯ್ಯ

**ಚಾಮರಾಜನಗರ, ಏ.25–** ನಿನ್ನೆ ನಡೆದ ಮಲೆಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ಸಭೆಯಲ್ಲಿ ಮಹದೇಶ್ವರ ಬೆಟ್ಟದಲ್ಲಿ ಶುಚಿತ್ವ, ಪಾನನಿಷೇಧ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೊಳಿಸಲು ನಿರ್ಣಯ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಶುಕ್ರವಾರ ಮಲೆ ಮಹದೇಶ್ವರ ಬೆಟ್ಟದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದರು.



**ಮೌಢ್ಯಗಳು ಸಮಾಜದ ಪ್ರಗತಿಗೆ ಮಾರಕ:**

ಮೈಸೂರು ವಿಭಾಗದ ಚಾಮರಾಜನಗರ ಜಿಲ್ಲೆ ಹಿಂದುಳಿದ ಜಿಲ್ಲೆಯಾಗಿದ್ದು, ಈ ಭಾಗಕ್ಕೆ ವಿಶೇಷ ಗಮನ ನೀಡುವ ನಿಟ್ಟಿನಲ್ಲಿ ಸಚಿವ ಸಂಪುಟ ಸಭೆ ನಡೆಸಲಾಗಿದೆ. ಚಾಮರಾಜನಗರಕ್ಕೆ ಬಂದರೆ ಅಧಿಕಾರ ಹೋಗುತ್ತದೆ ಎಂಬುದು ಸತ್ಯಕ್ಕೆ ದೂರವಾದ ಮಾತು. ಇಂತಹ ಮೌಢ್ಯಗಳೇ ಸಮಾಜದ ಪ್ರಗತಿಗೆ ಮಾರಕವಾಗಿದೆ. ನಾನು ಇದುವರೆಗೆ 20 ಬಾರಿ ಜಿಲ್ಲೆಗೆ ಬಂದಿದ್ದು, ಎರಡನೇ ಬಾರಿ ಮುಖ್ಯಮಂತ್ರಿ ಯಾಗಿದ್ದೇನೆ ಎಂದರು.

**ಮಲೆಮಹದೇಶ್ವರ ಅಭಿವೃದ್ಧಿಗೆ ನಿರ್ಣಯ:**

ಮಲೆಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ಸಭೆ ನಿನ್ನೆ ನಡೆಸಲಾಗಿದೆ. ಈ ಪ್ರದೇಶದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು, ಮದ್ಯನಿಷೇದ ವಾಗಬೇಕು, ದೇವಸ್ಥಾನದ ವಿತರಿಸಲಾಗುವ ಲಾಡು ಪ್ರಸಾದವನ್ನು ಗುಣಮಟ್ಟದಲ್ಲಿ ಹಾಗೂ ಕಡಿಮೆ ದರದಲ್ಲಿ ನೀಡುವ ಬಗ್ಗೆ ಕ್ರಮ ಕೈಗೊಳ್ಳಬೇಕು. ಮಲೈಮಹದೇಶ್ವರ ಸನ್ನಿಧಿಯ ಸುತ್ತಮುತ್ತಲ ಪ್ರದೇಶದಲ್ಲಿ ಮೂಲಸೌಕರ್ಯ ಅಭಿವೃದ್ಧಿಪಡಿಸಬೇಕೆಂದು ನಿರ್ಣಯಿಸಲಾಗಿದೆ

**ಬಿಜೆಪಿಯವರ ಮೇಲೆ ಇ.ಡಿ ದಾಳಿ ಆಗುವುದಿಲ್ಲ:**

ಶಾಸಕ ವಿನಯ್ ಕುಲಕರ್ಣಿಯವರ ಮನೆಯ ಮೇಲೆ ಇಡಿ ದಾಳಿಯಾಗಿರುವ ಬಗ್ಗೆ, ಕೇಂದ್ರ ಸರ್ಕಾರ ದ್ವೇಷದ ರಾಜಕಾರಣಕ್ಕಾಗಿ ಜಾರಿ ನಿರ್ದೇಶನಾಲಯವನ್ನು ಬಳಸಿಕೊಳ್ಳುತ್ತಿದೆ. ಬಿಜೆಪಿಯವರ ಮೇಲೆ ಯಾವುದೇ ಇಡಿ ದಾಳಿ ಆಗುವುದಿಲ್ಲ.

# ಸಾರ್ವಜನಿಕರು ಯಾವುದೇ ಜ್ವರವಿರಲಿ, ರಕ್ತಲೇಪನ ಪರೀಕ್ಷೆ ಮಾಡಿಸಿ: ಡಿಎಚ್‌ಓ ಡಾ.ಯಲ್ಲಾ ರಮೇಶ್ ಬಾಬು



**ಬಳ್ಳಾರಿ,ಏ.25–**ಸಾರ್ವಜನಿಕರು ಯಾವುದೇ ಜ್ವರವಿರಲಿ, ಮೊದಲು ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಶೂನ್ಯ ಮಲೇರಿಯಾ ಗುರಿ ತಲುಪಲು ಮತ್ತು ರೋಗ ತಡೆಗಟ್ಟಲು ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾ ಕಚೇರಿ ವತಿಯಿಂದ ವಿಶ್ವ ಮಲೇರಿಯಾ ದಿನಾಚರಣೆ ಅಂಗವಾಗಿ ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ. ಮರು ಹೂಡಿಕೆ ಮಾಡಿ, ಮರು ಕಲ್ಪನೆ ಮಾಡಿ, ಮರು ಉತ್ತೇಜನ ನೀಡೋಣ ಎಂಬ ಘೋಷವಾಕ್ಯದೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿ ಆವರಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಮಲೇರಿಯಾ ರೋಗಕ್ಕೆ ಉಚಿತವಾಗಿ ರಕ್ತ ಪರೀಕ್ಷೆ ಹಾಗೂ ಸೂಕ್ತ ಚಿಕಿತ್ಸೆ ನೀಡಲಾಗುತ್ತದೆ. ಇದರ ಸದುಯೋಗಪಡೆದುಕೊಳ್ಳಬೇಕು ಎಂದು ತಿಳಿಸಿದರು.

# ಕೆಪಿಎಸ್‌ಸಿಯ 70 ಸಾವಿರ ಪರೀಕ್ಷಾರ್ಥಿಗಳಿಗೆ ಮರುಪರೀಕ್ಷೆ ನಡೆಸಲು ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹ

**ಬೆಂಗಳೂರು ಏ.25–** ಕೆಪಿಎಸ್‌ಸಿಯ ಸುಮಾರು 70 ಸಾವಿರದಷ್ಟು ಪರೀಕ್ಷಾರ್ಥಿಗಳೆಲ್ಲರಿಗೆ ಸೂಕ್ತ ಕಾಲಾವಕಾಶ ನೀಡಿ ಮರುಪರೀಕ್ಷೆ ನಡೆಸಬೇಕು ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಗ್ರಹಿಸಿದ್ದಾರೆ.

ಮಾಧ್ಯಮಗಳೊಂದಿಗೆ, ಮುಖ್ಯ ಮಂತ್ರಿಗಳು ಮೇಲ್ಮನೆಯಲ್ಲಿ ಕೊಟ್ಟ ವಾಗ್ದಾನದ ರೀತಿಯಲ್ಲಿ ಸಹಾಯ ಮಾಡಬೇಕು ಎಂದು ಅವರು ಆಗ್ರಹಿಸಿದರು. ಕರ್ನಾಟಕ ಲೋಕ ಸೇವಾ ಆಯೋಗದ ಅವಾಂತರಗಳನ್ನು ಪ್ರಶ್ನಿಸಿ ವಿದ್ಯಾರ್ಥಿಗಳು ಬಹುಕಾಲದಿಂದ ಹೋರಾಟ ಮಾಡುತ್ತಿದ್ದಾರೆ. ಅವರಿಗೆ ಆದ ಅನ್ಯಾಯ, ಕನ್ನಡಕ್ಕೆ ಆದ ಅಪಮಾನ, ಪ್ರಶ್ನೆಪತ್ರಿಕೆಗಳಲ್ಲಿನ ದೋಷ, ಹಲವಾರು ವಿಷಯಗಳ ಕುರಿತು ಅವರ ಹೋರಾಟ ನಡೆದಿತ್ತು. ನಾವು ಕೂಡ ವಿದ್ಯಾರ್ಥಿಗಳನ್ನು ಬೆಂಬಲಿಸಿ, ಅವರ ವಿಚಾರಗಳ ಬಗ್ಗೆ ಸದನದಲ್ಲಿ ಹಾಗೂ ಹೊರಗೂ ಸರಕಾರದ ಗಮನ ಸೆಳೆದಿದ್ದೇವೆ. ಸರಕಾರವು ಅದಕ್ಕೆ ಉತ್ತರಿಸಿ, ಅವರಿಗೆ ಅನ್ಯಾಯ ಆಗಿದೆ. ಅದನ್ನು ಸರಿಪಡಿಸುವ ಕೆಲಸ ನಾವು ಕೂಡ ಮಾಡಿದ್ದೇವೆ. ಅದಕ್ಕಾಗಿಯೇ ಮರು ಪರೀಕ್ಷೆ ಮಾಡಿದ್ದಾಗಿ ಹೇಳಿದ್ದರು. ಮರುಪರೀಕ್ಷೆಯಲ್ಲೂ ಮತ್ತೆ ಅದೇ ತಪ್ಪುಗಳು ಮರುಕಳಿಸಿದ್ದವು ಎಂದು ವಿವರಿಸಿದರು. ನಾವು ಸರಕಾರದ ಗಮನ ಸೆಳೆದಾಗ ಮುಖ್ಯಮಂತ್ರಿಗಳು ನಮ್ಮ ಮಾತಿಗೆ ಒಪ್ಪಿ, ವಿದ್ಯಾರ್ಥಿಗಳ ಸಮಸ್ಯೆ ಪರಿಹರಿಸುತ್ತೇನೆ; ಈಗಾಗಲೇ ಅವರು ನ್ಯಾಯಾಲಯಕ್ಕೆ ಹೋದ ಕಾರಣ ತೀರ್ಪು ಹೊರಬರಬೇಕಿದೆ ಎಂದಿದ್ದರು ಎಂದು ವಿವರ ನೀಡಿದರು.

ಈಗ ಕೋರ್ಟ್ ತೀರ್ಮಾನ ಬಂದಿದೆ. ಕೋರ್ಟ್‌ಗೆ ಹೋಗಿದ್ದ 32 ವಿದ್ಯಾರ್ಥಿಗಳು ವಾದ ಮಂಡಿಸಿ ದ್ದರು. ಈ 32 ಜನರಿಗೆ ಮಾತ್ರ ಪರೀಕ್ಷೆ ನಡೆಸಲು ಕೋರ್ಟ್ ಆದೇಶ ಮಾಡಿದೆ. ವಿದ್ಯಾರ್ಥಿಗಳು ಅನ್ಯಾಯ ಆದ ಎಲ್ಲರಿಗೂ ಪರೀಕ್ಷೆ ನಡೆಸುವಂತೆ ಕೋರಿದ್ದರು. ಆಯೋಗದಲ್ಲಿ




ತಪ್ಪಾಗಿದೆ ಎಂಬುದು ಇದರಿಂದ ಅರ್ಥವಾಗಿದೆ. ಸರಕಾರವು ಇದನ್ನು ಗಮನಿಸಿ ಆಗಿರುವ ದೋಷವನ್ನು ಸರಿಪಡಿಸಬೇಕು. 70 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಆಪತ್ತಿಗೆ ಸಿಲುಕಿದ್ದಾರೆ. ಅವರೆಲ್ಲರಿಗೂ ಮರುಪರೀಕ್ಷೆ ನಿಗದಿಪಡಿಸಿ ನಡೆಸ ಬೇಕೆಂದು ಒತ್ತಾಯಿಸಿದರು.

ಈ ಸರಕಾರ ವಿದ್ಯಾರ್ಥಿಗಳ ಪರವಾಗಿ ಇಲ್ಲ ಎಂದು ಅವರು ಆರೋಪಿಸಿದರು. ಒಂದು ವೇಳೆ ಇದ್ದಿದ್ದರೆ ಸರಕಾರವು ಅನ್ಯಾಯ ಆದುದನ್ನು ಸರಿಪಡಿಸುವುದಾಗಿ ಕೋರ್ಟಿಗೆ ಅರ್ಜಿ ಮೂಲಕ ತಿಳಿಸ ಬೇಕಿತ್ತು. ಆದರೆ, ಹಾಗೆ ಮಾಡಿಲ್ಲ ಎಂದು ಆಕ್ಷೇಪಿಸಿದರು.

## ನೀಟ್ ವ್ಯಾಪ್ತಿಗೆ ಫಿಸಿಯೋಥೆರಪಿ ಕೋರ್ಸ್‌ಗಳ ಪ್ರವೇಶ

# ಕೋರ್ಸ್ ಅವಧಿ ಐದು ವರ್ಷಗಳಿಗೆ ವಿಸ್ತರಣೆ: ಡಾ.ಶರಣಪ್ರಕಾಶ್ ಪಾಟೀಲ್

**ಬೆಂಗಳೂರು ಏ.25–** ಫಿಸಿಯೋಥೆರಪಿ ಕೋರ್ಸ್‌ಗಳಿಗೆ ಪ್ರವೇಶವು ಈಗ ನೀಟ್ ವ್ಯಾಪ್ತಿಗೆ ಬರಲಿದೆ. ಇದು ಪ್ರಮಾಣೀಕೃತ ವೈದ್ಯಕೀಯ ಶಿಕ್ಷಣದತ್ತ ರಾಷ್ಟ್ರೀಯ ನಡೆಗೆ ಪೂರಕವಾಗಿರುತ್ತದೆ. ಸಾಮರ್ಥ್ಯ ಆಧಾರಿತ ಕಲಿಕೆ ಮತ್ತು ಹೆಚ್ಚುವರಿ ಕ್ಲಿನಿಕಲ್ ಮಾನ್ಯತೆಗಾಗಿ ಕೋರ್ಸ್ ಅವಧಿಯನ್ನು ಐದು ವರ್ಷಗಳಿಗೆ ವಿಸ್ತರಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.



ಬೆಂಗಳೂರು ಅರಮನೆ ಮೈದಾನದಲ್ಲಿ ನಡೆದ ಫಿಸಿಯೋಥೆರಪಿಯ ಅಂತಾರಾಷ್ಟ್ರೀಯ ಸಮ್ಮೇಳನವಾದ ಕರ್ನಾಟಕ ಫಿಸಿಯೋಕಾನ್ –25 ಉದ್ಘಾಟನಾ ಸಮಾರಂಭದಲ್ಲಿ ಸಚಿವರು ಭಾಷಣ ಮಾಡಿದರು. ಫಿಸಿಯೋಥೆರಪಿ ಕೋರ್ಸ್‌ಗಳ ಪ್ರವೇಶವನ್ನು ನೀಟ್ ವ್ಯಾಪ್ತಿಗೆ ಸೇರಿಸಲು ರಾಜ್ಯ ಸರ್ಕಾರದ ಬೆಂಬಲವಿದೆ. ಶೈಕ್ಷಣಿಕ ಗುಣಮಟ್ಟ ಮತ್ತು ವೃತ್ತಿಪರ ಮಾನದಂಡಗಳನ್ನು ಹೆಚ್ಚಿಸುವ ನೀಟ್ ಅಡಿಯಲ್ಲಿ ಭೌತಚಿಕಿತ್ಸೆಯ ಕೋರ್ಸ್ಗಳ ಏಕೀಕರಣವನ್ನು ನಾವು ಸ್ವಾಗತಿಸುತ್ತೇವೆ ಎಂದು ಅವರು ಹೇಳಿದರು. ಹೆರಿಗೆಯಿಂದ ವೃದ್ಧರ ಆರೈಕೆಯವರೆಗೆ, ಆರೋಗ್ಯ ರಕ್ಷಣೆಯಲ್ಲಿ ಭೌತಚಿಕಿತ್ಸಕರು ಪ್ರಮುಖ ಪಾತ್ರ ವಹಿಸುತ್ತಾರೆ. ಭೌತಚಿಕಿತ್ಸಕರು ನರ ಮತ್ತು ಮೂಳೆಚಿಕಿತ್ಸೆ ಪುನರ್ ಆರೈಕೆ, ಹೃದಯ ಶ್ವಾಸಕೋಶ ಆರೈಕೆ, ಮಕ್ಕಳ ಚಿಕಿತ್ಸೆ, ಅಂಗವೈಕಲ್ಯ ಚಿಕಿತ್ಸೆ, ಫಿಟ್ನೆಸ್ ಮತ್ತು ಸಮುದಾಯ ಆಧಾರಿತ ಆರೈಕೆಗೆ ಗಣನೀಯ ಕೊಡುಗೆ ನೀಡುತ್ತಾರೆ" ಎಂದು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ತರಬೇತಿ ಪಡೆದ ವೃತ್ತಿಪರರಿಗೆ ದೇಶೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೇಡಿಕೆ ಇದೆ. ಇದನ್ನು ಪೂರೈಸಲು ಹೆಚ್ಚಿನ ಸರ್ಕಾರಿ ಕಾಲೇಜುಗಳಲ್ಲಿ ಭೌತಚಿಕಿತ್ಸೆಯ ಕೋರ್ಸ್‌ಗಳನ್ನು ಪರಿಚಯಿಸುವ ಚಿಂತನೆ ಇದೆ ಎಂದು ಡಾ. ಶರಣ ಪ್ರಕಾಶ ಪಾಟೀಲ ತಿಳಿಸಿದರು.

ರಾಷ್ಟ್ರೀಯ ಅಲೈಡ್ & ಹೆಲ್ತ್ ಪ್ರೊಫೆಷನಲ್ಸ್ ಆಯೋಗದ ಅಧ್ಯಕ್ಷರಾದ ಡಾ. ಯಜ್ಞ ಶುಕ್ಲಾ ಮಾತನಾಡಿ, ಭೌತಚಿಕಿತ್ಸೆಯ ಶಿಕ್ಷಣದಲ್ಲಿ ಒಂದು ರಾಷ್ಟ್ರ, ಒಂದು ಪಠ್ಯಕ್ರಮ ಉಪಕ್ರಮವನ್ನು ಪರಿಚಯಿಸಲು ಆಯೋಗ ಚಿಂತನೆ ನಡೆಸಿದೆ ಎಂದು ಹೇಳಿದರು,ಪಠ್ಯಕ್ರಮ ಸುಧಾರಣೆಗಳು ವಿದ್ಯಾರ್ಥಿಗಳು ಮತ್ತು ವೈದ್ಯರಿಗೆ ವಿಶೇಷ ಪ್ರಯೋಜನಗಳೊಂದಿಗೆ ವೃತ್ತಿಯನ್ನು ಉನ್ನತೀಕರಿಸುವ ಮಾನದಂಡವನ್ನು ರೂಪಿಸಲಾಗುತ್ತಿದೆ ಎಂದು ತಿಳಿಸಿದರು.

ಸಮ್ಮೇಳನದಲ್ಲಿ ಇಸ್ರೇಲ್, ಆಸ್ಟ್ರೇಲಿಯಾ ಮತ್ತು ನೇಪಾಳದ ಭಾಷಣಕಾರರು, ಜಾಗತಿಕ ತಜ್ಞರು ಹಾಗೂ ಹತ್ತು ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು, 50 ರಾಷ್ಟ್ರೀಯ ತಜ್ಞರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ 800 ಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳನ್ನು ಮಂಡಿಸಲಾಯಿತು. ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಫರೀದ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಾಸೀರ್ ಅಹ್ಮದ್ ಉಪಸ್ಥಿತರಿದ್ದರು, ಹೊಸ ಕಚೇರಿ ಕಟ್ಟಡ ಉದ್ಘಾಟನೆಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಆವರಣದಲ್ಲಿ ಕರ್ನಾಟಕ ರಾಜ್ಯ ಅಲೈಡ್ ಹೆಲ್ತ್ ಸೈನ್ಸ್ ಕೌನ್ಸಿಲ್ (ಕೆಎಸ್‌ಎಎಚ್ಸಿ)ನ ಹೊಸ ಕಚೇರಿಯನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಕೆಎಸ್‌ಎಎಚ್ಸಿ ಅಧ್ಯಕ್ಷ ಡಾ. ಯು.ಟಿ. ಇಫ್ತಿಕರ್ ಫರೀದ್ ಉಪಸ್ಥಿತರಿದ್ದರು.

## ಪರೀಕ್ಷೆಯಿಂದ ವಂಚಿತನಾದ ವಿದ್ಯಾರ್ಥಿಗೆ ಎರಡು ಆಯ್ಕೆ

# ಭೌತಶಾಸ್ತ್ರ–ರಸಾಯನಶಾಸ್ತ್ರ ಅಂಕಗಳನ್ನು ಆಧರಿಸಿ ರ್‍ಯಾಂಕ್ ನೀಡಲು ಶಿಫಾರಸು



**ಬೆಂಗಳೂರು, ಏ.25–** ಸಿಇಟಿ ಜನಿವಾರ ಪ್ರಕರಣ ರಾಜ್ಯದಾದ್ಯಂತ ಭಾರೀ ಸದ್ದು ಮಾಡುತ್ತಿದ್ದು, ಇದೀಗ ಪರೀಕ್ಷೆಯಿಂದ ವಂಚಿತನಾದ ವಿದ್ಯಾರ್ಥಿಗೆ ಎರಡು ಆಯ್ಕೆ ನೀಡಲು ಉನ್ನತ ಶಿಕ್ಷಣ ಇಲಾಖೆ ಮುಂದಾಗಿದೆ.

ಬೀದರ್ ನಲ್ಲಿ ಸಿಇಟಿ ಪರೀಕ್ಷೆಗೆ ಬರುವಾಗ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿಯ ಜನಿವಾರ ತೆಗೆಸಿದ್ದರು.ಇದೀಗ ವಿದ್ಯಾರ್ಥಿಗೆ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ನೀಡುವುದಾಗಿ ಅಥವಾ ಹಾಲಿ ಬರೆದಿರುವ ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರ ಪರೀಕ್ಷೆಯಲ್ಲಿ ಪಡೆಯುವ ಅಂಕದ ಆಧಾರದ ಮೇಲೆ ಗಣಿತ ವಿಷಯದ ಅಂಕ ನಿಗದಿ ಮಾಡುವ ಆಯ್ಕೆಯನ್ನು ನೀಡಿದೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಉನ್ನತ ಶಿಕ್ಷಣ ಸಚಿವ ಡಾ. ಎಂ ಸಿ ಸುಧಾಕರ್ ಅವರು, ಈಗಾಗಲೇ ಪರೀಕ್ಷೆ ವಿಚಾರವಾಗಿ ನಿರ್ಧಾರ ಕೈಗೊಳ್ಳಲು ರಚಿಸಿದ ಸಮಿತಿ ವರದಿ ನೀಡಿದೆ. ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರದ ಅಂಕಗಳನ್ನು ಆಧರಿಸಿ ರ್‍ಯಾಂಕ್ ನೀಡಲು ಶಿಫಾರಸು ಮಾಡಿದೆ ಎಂದರು. ಎರಡು ಆಯ್ಕೆ ಯನ್ನು ವಿದ್ಯಾರ್ಥಿಗೆ ನೀಡಲಾಗಿದೆ. ಸಿಇಟಿ ಫಲಿತಾಂಶ ನೀಡಲು ಇನ್ನು ಸಾಕಷ್ಟು ಸಮಯವಿದ್ದು, ರ್‍ಯಾಂಕ್‌ಗೆ ಸಿಇಟಿಯಲ್ಲಿ ಪಡೆದ ಅಂಕಗಳಲ್ಲಿ ಶೇ.50 ಮತ್ತು ದ್ವಿತೀಯ ಪಿಯುಸಿ ಪಡೆದ ಶೇ.50 ಅಂಕಗಳನ್ನು ಸಮೀಕರಿಸಿ ರ್‍ಯಾಂಕ್ ನೀಡುವುದಾಗಿ ತಿಳಿಸಿದರು.

# ಸ್ವತಃ ತಾನೇ ಗುಂಡು ಹಾರಿಸಿಕೊಂಡ ರಿಕ್ಕಿ ರೈ ಗನ್‌ಮ್ಯಾನ್ ಮನ್ನಪ್ಪ ಸ್ಫೋಟಕ ಹೇಳಿಕೆ

**ಬೆಂಗಳೂರು, ಏ.25–** ಭೂಗತ ಲೋಕದ ಮಾಜಿ ಡಾನ್ ದಿ. ಮುತ್ತಪ್ಪ ರೈ ಕಿರಿಯ ಪುತ್ರ ರಿಕ್ಕಿ ರೈ ಮೇಲೆ ನಡೆದ ಗುಂಡಿನ ದಾಳಿ ಪ್ರಕರಣದ ಸಂಬಂಧ ಬಂಧಿತ ಮಾಜಿ ಗನ್‌ಮ್ಯಾನ್ ಮನ್ನಪ್ಪ ವಿಠಲ್ ರಿಕ್ಕಿ ರೈ ತನಗೆ ತಾನೇ ಗುಂಡು ಹಾರಿಸಿಕೊಂಡಿದ್ದಾನೆ ಎಂದು ಹೇಳಿಕೆ ನೀಡಿದ್ದಾನೆ.

ಮೊದಲು, ಗನ್ ಮ್ಯಾನ್ ಗುಂಡು ಹಾರಿಸಿದ್ದಾನೆ ಎಂದು ಪೊಲೀಸರು ಸಂಶಯದ ಮೇಲೆ ವಶಕ್ಕೆ ತೆಗೆದುಕೊಂಡು ವಿಚಾರಣೆ ನಡೆಸಿದಾಗ ರಿಕ್ಕಿ ರೈ ತನ್ನನ್ನು ತಾನೇ ಶೂಟ್ ಮಾಡಿಕೊಂಡಿದ್ದಾನೆ ಎಂದು ಗನ್ ಮ್ಯಾನ್ ಬಿಡದಿ ಪೊಲೀಸರಿಗೆ ಹೇಳಿಕೆ ನೀಡಿದ್ದು ಬಂಧಿತ ಆತನನ್ನು ರಾಮನಗರ ನ್ಯಾಯಾಲಯಕ್ಕೆ ಆತನನ್ನು ಹಾಜರುಪಡಿಸಿ, 10 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಪಡೆಯಲಾಗಿದೆ. ಈ ವೇಳೆ ಪೊಲೀಸರು ವಿಠಲ್‌ನನ್ನು ವಿಚಾರಣೆಗೆ ಒಳಪಡಿಸಿದಾಗ ಈ ಮಾಹಿತಿ ದೊರೆತಿದೆ. ಪೊಲೀಸರು ಆತನಿಂದ ಮತ್ತಷ್ಟು ಮಾಹಿತಿಗಳನ್ನು ಕಲೆ ಹಾಕುತ್ತಿದ್ದಾರೆ. ಇದರೊಂದಿಗೆ, ರಿಕ್ಕಿ ರೈ ಶೂಟೌಟ್ನ ನಾಟಕ ವಾಡುತ್ತಿದ್ದಾನಾ ಎನ್ನುವ ಅನುಮಾನಕ್ಕೆ ಪುಷ್ಟಿದೊರೆತಂತಾಗಿದೆ.

ಮಾಜಿ ಡಾನ್ ಮುತ್ತಪ್ಪ ರೈ ಕಿರಿಯ ಪುತ್ರ ಹಾಗೂ ಉದ್ಯಮಿ ರಿಕ್ಕಿ ರೈ ಮೇಲೆ ಕಳೆದ ಏ.18 ರಂದು ಬಿಡದಿ ಬಳಿ ಫೈರಿಂಗ್ ನಡೆದಿತ್ತು. ರಾತ್ರಿ 11:30ರ ಸುಮಾರಿಗೆ ಕಾರಿನಲ್ಲಿ ಬೆಂಗಳೂರಿಗೆ ಹೊರಟಿದ್ದ ರಿಕ್ಕಿ ರೈ ಮೇಲೆ ಗುಂಡಿನ ದಾಳಿ ನಡೆದಿದ್ದು, ಘಟನೆಯಲ್ಲಿ ರಿಕ್ಕಿ ಮೂಗು ಹಾಗೂ ಕೈಗಳಿಗೆ ಗಾಯಗಳಾಗಿತ್ತು. ಬಳಿಕ ಆತನನ್ನು ಬೆಂಗಳೂರಿನ ಹೆಚ್‌ಎಎಲ್ ರಸ್ತೆಯಲ್ಲಿರುವ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಪೊಲೀಸರಿಗೆ ಶೂಟೌಟ್ ನಡೆದ ಸ್ಥಳದಲ್ಲಿ ಸಿಕ್ಕಿರುವ ಬುಲೆಟ್, ವಿಠಲ್ ಬಳಿ ಇದ್ದ ಗನ್ನ ಬುಲೆಟ್ ಎಂದು ಗೊತ್ತಾಗಿತ್ತು. ಪೊಲೀಸರು ಈತನ ಗನ್ ಅನ್ನು ವಶಕ್ಕೆ ಪಡೆದು ಪರಿಶೀಲನೆ



ನಡೆಸಿದ್ದರು. ಈ ಬಗ್ಗೆ ಸ್ಪಷ್ಟ ತೀರ್ಮಾನ ನೀಡಲು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಗನ್ ಅನ್ನು ಕಳುಹಿಸಿದ್ದರು. ತಜ್ಞವರದಿ ಇನ್ನೂ ಬರಬೇಕಾಗಿದೆ. ಮುತ್ತಪ್ಪ ರೈ ಬಳಿ ಗನ್‌ಮ್ಯಾನ್ ಆಗಿ ಕೆಲಸ ಮಾಡುತ್ತಿದ್ದ ವಿಠಲ್ ಕೆಲಕಾಲ ರಿಕ್ಕಿ ರೈಗೂ ಗನ್‌ಮ್ಯಾನ್ ಆಗಿದ್ದ. ಆರೋಗ್ಯ ಸರಿ ಇಲ್ಲದ ಕಾರಣ ಗನ್ ಮ್ಯಾನ್ ಕೆಲಸ ಬಿಟ್ಟು ಮನೆಯಲ್ಲೇ ಸೆಕ್ಯುರಿಟಿ ಕೆಲಸ ಮಾಡುತ್ತಿದ್ದ. ಮುತ್ತಪ್ಪ ರೈ ಸಾಯುವ ಮುನ್ನ ಈತನಿಗೆ ನಿವೇಶನ ನೀಡುವುದಾಗಿ ಹೇಳಿದ್ದರು. ಆದರೆ, ರಿಕ್ಕಿ ರೈ ಸೈಟ್ ಕೊಡಲು ನಿರಾಕರಿಸಿದ್ದ. ಈ ಕಾರಣಕ್ಕೆ ವಿಠಲ್ ಕೋಪ ಗೊಂಡಿರಬಹುದು ಎಂದು ಮೊದಲು ಸಂಶಯಿಸಲಾಗಿತ್ತು.

ಈ ನಡುವೆ, ರಿಕ್ಕಿ ರೈ ಗನ್ ಮ್ಯಾನ್ ನೀಡಿದ ದೂರಿನಲ್ಲಿ ಮೂವರನ್ನು ಹೆಸರಿಸಿದ್ದು, ಮೂವರನ್ನೂ ವಿಚಾರಣೆಗೆ ಒಳಪಡಿಸಲಾಗಿದೆ. ಪ್ರಕರಣದಲ್ಲಿ ಇವರ ಪಾತ್ರ ದೃಢಪಡಿಸಲು ಯಾವುದೇ ಸಾಕ್ಷಿ ಕಂಡುಬಂದಿಲ್ಲವಾದ್ದರಿಂದ ಯಾರನ್ನೂ ಬಂಧಿಸಿಲ್ಲ. ಮುತ್ತಪ್ಪ ರೈ ಮಾಜಿ ಸಹಚರ, ಮೊದಲ ಆರೋಪಿ ರಾಕೇಶ್ ಮಲ್ಲಿ ಹಾಗೂ ಮೂರನೇ ಆರೋಪಿ ನಿತೀಶ್ ಶೆಟ್ಟಿಯನ್ನು ವಿಚಾರಣೆಗೆ ಒಳಪಡಿಸಿ ಬಿಟ್ಟು ಕಳಿಸಲಾಗಿದೆ. ಎರಡನೇ ಆರೋಪಿ, ಮುತ್ತಪ್ಪ ರೈ ಅವರ ಎರಡನೇ ಪತ್ನಿ ಅನುರಾಧ ವಿದೇಶದಲ್ಲಿದ್ದಾರೆ.

# ಜಾರಿ ನಿರ್ದೇಶನಾಲಯದ ದಾಳಿ ರಾಜಕೀಯ ಪ್ರೇರಿತ: ವಿನಯ್ ಕುಲಕರ್ಣಿ ಆರೋಪ

**ಬೆಂಗಳೂರು, ಏ.25–** ವಿನಯ್ ಕುಲಕರ್ಣಿ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ ಅಧಿಕಾರಿಗಳ ದಾಳಿ ಅಂತ್ಯ ಆಗಿದೆ. ಬರೋಬ್ಬರಿ 28 ಗಂಟೆಗಳ ಶೋಧ ಕಾರ್ಯಾಚರಣೆ ಬಳಿಕ ಅಧಿಕಾರಿಗಳು ಮನೆಯಿಂದ ಹೊರಟಿದ್ದಾರೆ. ನಾಲ್ಕು ಕಾರಗಳಲ್ಲಿ ಬಂದಿದ್ದ ಎಂಟು ಇ ಡಿ ಅಧಿಕಾರಿಗಳ ತಂಡ, ಸಾಕಷ್ಟು ದಾಖಲೆ ಪತ್ರಗಳನ್ನು ತೆಗೆದುಕೊಂಡು ಹೋಗಿದೆ ಎನ್ನುವ ಮಾಹಿತಿ ಸಿಕ್ಕಿದೆ.



ಇಡಿ ದಾಳಿ ಬಗ್ಗೆ ಮಾಜಿ ಸಚಿವ ವಿನಯ್ ಕುಲಕರ್ಣಿ ಮಾತನಾಡಿ, ಏನು ಬೇಕೋ ಎಲ್ಲಾ ಕೇಳಿದ್ದಾರೆ. ಯಾವ ಕೇಸ್ ಹಾಕಬೇಕೋ ಎಲ್ಲ ಕೇಸ್ ಹಾಕಿದ್ದಾರೆ. ಇದೆಲ್ಲ ರಾಜಕೀಯ ಷಡ್ಯಂತ್ರ. ನಾನು ಸಂಪೂರ್ಣ ಕೃಷಿಕ. ಯಾವುದೇ ಬಿಜಿನೆಸ್ ಇಲ್ಲ. ಮನೆಯಲ್ಲಿ ಏನು ಸಿಗಲಿಲ್ಲ. ಅವರಿಗೆ ಏನು ಬೇಕು ಎಲ್ಲ ಹುಡುಕಿದ್ದಾರೆ. ಹೈಕೋರ್ಟ್‌ನಲ್ಲಿ ಕೆಲವು ಕೇಸ್‌ಗಳಲ್ಲಿ ನಾನು ಸಾಕ್ಷಿ ಆಗಿದ್ದೇನೆ. ಒಂದು ತಿಂಗಳಿನಿಂದ ಪ್ರತಿದಿನ ಕಿರುಕುಳ ನಡೀತಿದೆ ಎಂದಿದ್ದಾರೆ. ನಾನು ಎಂಎಲ್‌ಎ ಆದರೂ ಕ್ಷೇತ್ರಕ್ಕೆ ಹೋಗಲು ಆಗ್ತಿಲ್ಲ. ಕಿರುಕುಳಕ್ಕೂ ಒಂದು ಮಿತಿ ಇರಬೇಕು. ಬಹಳ ನೋವಾಗುತ್ತದೆ. ಐಶ್ವರ್ಯಗೌಡ ಜೊತೆ ವ್ಯವಹಾರ ಇದ್ದರೆ ಸಿಕ್ಕೇ ಸಿಗುತ್ತದೆ. ಒಮ್ಮೆ ಕೊಲ್ಲಾಪುರ ಟೆಂಪಲ್ ಹೋಗುವಾಗ ಪರಿಚಯ ಆಯ್ತು. ಅವರೇ ಕಾರನ್ನ ನಮ್ಮ ಫಾರ್ಮ್‌ನಲ್ಲಿ ಬಿಟ್ಟುಹೋಗಿದ್ದರು. ಒಂದು ತಿಂಗಳ ನಂತರ ಪೊಲೀಸರು ಕಾಲ್ ಮಾಡಿದ್ರು. ನಂತರ ತಂದು ಕೊಟ್ಟಿದ್ರು. ಮಂಜುಳಾ ಪಾಟೀಲ್, ವನಿತಾ ಐತಾಳ್ ಎರಡು ತಿಂಗಳ ನಂತರ ಪರಿಚಯ. ಕೇಸ್ ಮಾಡೋದು ಬೇಡ ದುಡ್ಡು ಕೊಡಿಸಿ ಅಂತ ಬಂದಿದ್ರು. ನನ್ನ ಬರ್ತ್ ಡೇ ದಿನ ಸನ್ಮಾನ ಮಾಡಿದ್ದರು. ಅಣ್ಣಮ್ಮ ಜಾತ್ರೆಗೆ ಒಮ್ಮೆ ಹೋಗಿಬಂದಿದ್ದೆ. ಜನರಿಗೆ ಮೋಸ ವಂಚನೆ ಮಾಡುವುದು ಒಳ್ಳೆ ಕೆಲಸವಲ್ಲ. ಇ ಡಿ ಅವರು ಯಾವುದೇ ನೋಟಿಸ್ ನೀಡಿಲ್ಲ. ಚಾಮರಾಜನಗರದಲ್ಲಿ ದಾಳಿ ಬಗ್ಗೆ ಸಿಎಂ ಸಿದ್ದರಾಮಯ್ಯ ಮಾತನಾಡಿದ್ದಾರೆ. ನಾನು ಸಿಎಂ ಆದ ಮೇಲೆ 20ಕ್ಕೂ ಹೆಚ್ಚು ಬಾರಿ ಚಾಮರಾಜನಗರಕ್ಕೆ ಬಂದಿದ್ದೇನೆ. ಇದರಿಂದ ನಮಗೆ ಅಧಿಕಾರ ಗಟ್ಟಿಯಾಗುತ್ತಿದೆ ಎಂದಿದ್ದಾರೆ.


ಇದೇ ವೇಳೆ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಮನೆ ಮೇಲೆ ಇಡಿ ದಾಳಿ ಮಾಡಿರುವ ವಿಚಾರವಾಗಿ ಮಾತನಾಡಿ, ಇದು ರಾಜಕೀಯ ಪ್ರೇರಿತ ದಾಳಿ. ಕೇಂದ್ರ ಸರ್ಕಾರದ ಒತ್ತಡದ ಮೇಲೆ ದಾಳಿ ಮಾಡಿದ್ದಾರೆ. ಬಿಜೆಪಿಯರ ಮೇಲೆ ಯಾಕೆ ದಾಳಿ ಮಾಡುತ್ತಿಲ್ಲ. ಬಿಜೆಪಿಯವರು ಏನ್ ಸಾಚಾಗಳಾ ಎಂದು ಪ್ರಶ್ನೆ ಮಾಡಿದ್ದಾರೆ.



ಹಿನ್ನಾಳಿ ತಾಲೂಕಿನ ದೊಡ್ಡತ್ತಿನಹಳ್ಳಿ ಗ್ರಾಮದಲ್ಲಿ ಭದ್ರಕಾಳಿ ಸಮೇತ ವೀರಭದ್ರಸ್ವಾಮಿ ದೇವಸ್ಥಾನದ ಉದ್ಘಾಟನೆ, ಕಳಸಾರೋಹಣ ಅಂಗವಾಗಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯವನ್ನು ರಂಭಾಪುರಿ ಪೀಠದ ಜಗದ್ಗುರುಗಳು ವಹಿಸಿದ್ದರು.

# ರಾಜ್ಯಾದ್ಯಂತ ಉಬರ್, ರ್‍ಯಾಪಿಡೋ ಬೈಕ್ ಟ್ಯಾಕ್ಸಿ ಸೇವೆ ಸ್ಥಗಿತಕ್ಕೆ ಸಚಿವ ರಾಮಲಿಂಗಾರೆಡ್ಡಿ ಆದೇಶ

**ಬೆಂಗಳೂರು, ಏ.25–** ಕರ್ನಾಟಕ ಹೈಕೋರ್ಟ್ ಉಬರ್, Rapido ಬೈಕ್ ಟ್ಯಾಕ್ಸಿ ಸೇವೆಯನ್ನು ಸ್ಥಗಿತಗೊಳಿಸುವಂತೆ ಆದೇಶಿಸಿತ್ತು. ಈ ಆದೇಶದಂತೆ ರಾಜ್ಯಾದ್ಯಂತ ಉಬರ್, ರ್‍ಯಾಪಿಡೋ ಬೈಕ್ ಟ್ಯಾಕ್ಸಿ ಸೇವೆಯನ್ನು ಸ್ಥಗಿತಗೊಳಿಸುವಂತೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಆದೇಶಿಸಿದ್ದಾರೆ.



ಈ ಸಂಬಂಧ ಇಂದು ಸಾರಿಗೆ ಇಲಾಖೆಯ ಕಾರ್ಯದರ್ಶಿ, ಸಾರಿಗೆ ಮತ್ತು ರಸ್ತೆ, ಸುರಕ್ಷತೆ ಆಯುಕ್ತರಿಗೆ ಪತ್ರ ಬರೆದಿರುವಂತ ಅವರು, ಕರ್ನಾಟಕ ಉಚ್ಚ ನ್ಯಾಯಾಲಯವು WP No.6421/2022 (MV) c/w WP No.14627/2021 (MV), WP No.19869/2021 (MV), WP No.24569/2023 (MV) (Uber India Systems Pvt.Ltd. Mumbi, Gurgaon & Bangalore and others V/S State of Karnataka, Rep.by the Secretary, Department of Transport, Bangalore and others) ಸಂಬಂಧಿಸಿದಂತೆ ದಿನಾಂಕ:02–04–2025 ರಂದು ನೀಡಿದ ಆದೇಶದ ಪುಟ ಸಂಖ್ಯೆ 70 ರಲ್ಲಿ ಕಂಡಿಕೆ (ಬಿ) ನಲ್ಲಿ, ಕೆಳಕಂಡಂತೆ ಆದೇಶ ನೀಡಿರುತ್ತದೆ ಎಂದಿದ್ದಾರೆ.

ಈ ಸಂಸ್ಥೆಗಳಿಗೆ ಬೈಕ್, ಟ್ಯಾಕ್ಸಿ ಸೇವೆಗಳನ್ನು ಸ್ಥಗಿತಗೊಳಿಸಲು ಆರು ವಾರಗಳ ಕಾಲಾವಕಾಶ ನೀಡಿದೆ. ಆದ್ದರಿಂದ, ಉಚ್ಚ ನ್ಯಾಯಾಲಯದ ಆದೇಶವನ್ನು ಕಾರ್ಯಗತಗೊಳಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

# ನರೇಗಾ ಯೋಜನೆಯಡಿ 100 ದಿನಗಳ ಕೆಲಸಕ್ಕಾಗಿ ಒತ್ತಾಯ

**ವಿಜಯಪುರ, ಏ.25–** ಜಿಲ್ಲೆಯ ನರೇಗಾ ಯೋಜನೆಯನ್ನು ಸಮರ್ಪಕ ಜಾರಿಗಾಗಿ ಸತತ 100 ದಿನಗಳ ಕೆಲಸಕ್ಕಾಗಿ ಒತ್ತಾಯಿಸಿ ವಿಜಯಪುರ ಜಿಲ್ಲಾ ಪಂಚಾಯತ ಆವರಣದಲ್ಲಿ ಪ್ರತಿಭಟನೆ ಹಮ್ಮಿಕೊಂಡು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರಿಗೆ ಮನವಿ ಸಲ್ಲಿಸುವ ಸಂದರ್ಭದಲ್ಲಿ ಹಾಗೂ ಡಿ.ಎಸ್–1 ಅಧಿಕಾರಿ ಬಲವಂತ ರಾಠೋಡ ಉಪಸ್ಥಿತರಿದ್ದರು.



ಈ ಸಂದರ್ಭದಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷರಾದ ಅಣ್ಣಾರಾಯ ಈಳಗೇರಿ ಮಾತನಾಡಿ, ವಿಜಯಪುರ ಜಿಲ್ಲೆ ಕರ್ನಾಟಕದಲ್ಲಿಯೇ ಅತಿ ಹೇಚ್ಚು ವಲಸೆ ಹೋಗುವ ಕೂಲಿಕಾರರ ಜಿಲ್ಲೆಯಾಗಿದೆ. ನರೇಗಾ ಬಡವರ ಪಾಲಿಗೆ ವರದಾನವಾಗಬೇಕಾಗಿದೆ. ಯೋಜನೆ ಬಡವರ ಪಾಲಿಗೆ ಶಾಪವಾಗಿ ಪರಿಣಮಿಸಲು ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯಕ್ಕೆ ಒಳಗಾಗಿ ಯೋಜನೆ ದಾರಿ ತಪ್ಪಿದ್ದು. ಜಿಲ್ಲಾ ಪಂಚಾಯತ ಸಿ.ಇ.ಓ ರವರ ಆಲಕ್ಷತನದಿಂದ ಕೆಳ ಹಂತದ ಅಧಿಕಾರಿಗಳ ನಿರ್ಲಕ್ಷದಿಂದ ಯೋಜನೆ ಹಳ್ಳ ಹಿಡಿದಿದೆ. ಜಿಲ್ಲೆಯ ಹಲವಾರು ಪಂಚಾಯತಗಳ ಕೆಲಸಕ್ಕಾಗಿ ಫಾರ್ಮ ನಂ: 6 ಅರ್ಜಿಸಲ್ಲಿಸಿದ್ದರು ಕೆಲಸ ಕೋಡುತ್ತಿಲ್ಲಾ ಕೆಲಸ ಕೊಡದೆ ಇರುವಾಗ ನಿರುದ್ಯೋಗ ಭತ್ಯಗಾಗಿ ಆದೇಶ ಖಚಿತ ಜಾರಿಮಾಡದೆ ಯೋಜನೆ ಮಹತ್ವವನ್ನು ಹಾಳುಮಾಡಿದ್ದಾರೆ ಇದಕ್ಕೇ ನೇರವಾಗಿ ಸಿಇಓ ಅವರೇ ಕಾರಣಾಗಿದ್ದಾರೆ ಎಂದು ಆಕ್ರೋಶವ್ಯಕ್ತಪಡಿಸಿದ್ದಾರೆ.

ಇದೇ ಸಂದರ್ಭದಲ್ಲಿ ಜನವಾದಿ ಮಹಿಳಾ ಸಂಘಟನೆಯ ಸುರೇಖಾ ರಜಪೂತ ಮಾತನಾಡಿ, ಮೇ 1 ರಿಂದ ಸತತವಾಗಿ ಕೆಲಸ ಕೊಡಬೇಕು. ಒಂದೆ ಬಾರಿಗೆ ಎನ್. ಎಮ್ ಆರ್ ಫಾರ್ಮ್ ಕೊಡಬೇಕು. ಈಗಾಗಲೆ ಒಂಬಡ್ಸ್‌ಮನ ನಿರುದ್ಯೋಗ ಭತ್ಯೆಯ ಆದೇಶವನ್ನು ಜಾರಿಮಾಡಿ ನಿರುದ್ಯೋಗ ಭರ್ತಿಗೊಳಿಸಬೇಕು. ಗೋಲಗೇರಿ ಗ್ರಾಂ. ಪಂ. ಆಪರೇಟರನ್ನು ಕೂಡಲೆ ವರ್ಗಾವಣೆ ಮಾಡಬೇಕು (ಸಿಂದಗಿ ತಾಲೂಕ) ಆಲಮೇಲ ತಾಲೂಕ ಬಗಲೂರ ಗ್ರಾಂ.ಪಂ 80–ಜನರ ಫಾರಂ: ನಮೂನೆ 6 ತುಂಬಿಕೊಟ್ಟರು ಬರಿ 40 ಜನಕ್ಕೆ ಕೆಲಸ ಕೊಟ್ಟಿದ್ದಾರೆ ಕೂಡಲೆ ಉಳಿದ ಮಹಿಳೆಯರಿಗೆ ಕೇಲಸ ಕೋಡಬೇಕು.

ಇದೇ ಸಂದರ್ಭದಲ್ಲಿ ಕೃಷಿ ಕೂಲಿ ರಾಜ್ಯ ಸಮಿತಿ ಜಂಟಿ ಕಾರ್ಯದರ್ಶಿ ದಾವಲಸಾಬ ನದಾಫ್ ಮಾತನಾಡಿ, ದೇವರಹಿಪ್ಪರಗಿ ಕೊಂಡಗೂಳಿ ಗ್ರಾಂ. ಪಂ ಪಾರ್ಮ ನಂ: 6 ಕೋಟ್ಟು 20–ದಿನಗಳು ಕಳಿದಿವೆ ಕೂಡಲೆ ಕೇಲಸ ಕೋಡಬೇಕು. ಗ್ರಾಂ.ಪಂ ಅಭಿವೃದ್ಧಿ ಅಧಿಕಾರಿ ಹಾಗೂ ತಾಲೂಕ ಪಂಚಾಯತ ಇ.ಓ ಮತ್ತು ಎ.ಡಿ ಪೋನ್ ಕರೆಗಳು ಸ್ವಿಕರಿಸುತ್ತಿಲ್ಲಾ ಯಾಕೆ?. ದೇವರ ಹಿಪ್ಪರಗಿ ಹಾಗೂ ತಾಳಿಕೋಟಿ ಬಂಟನೂರ ಗ್ರಾಂ.ಪಂಯಲ್ಲಿ ಫಾರ್ಮ: 6 ಕೋಟ್ಟಿದ್ದು ಕೆಲಸ ಕೋಡಬೇಕು ಎಂದು ಒತ್ತಾಯಿಸಿದರು.

ಕೆಪಿಆರ್‌ಎಸ್ ಸಿಂದಗಿಯ ರಮೇಶ ಸಾಸಬಾಳ ಮಾತನಾಡಿ, ಸಿಂದಗಿ ತಾಲೂಕಿನ ಗೋಲಗೇರಿ ಗಾಂ.ಪಂ. ಅಭಿವೃದ್ಧಿ ಅಧಿಕಾರಿ ತಾಂತ್ರಿಕ ಸಹಾಯಕರು ಕೂಡಿಕೊಂಡು 2023–24 ಸಾಲಿನ ಸರಕಾರಿ ಪ್ರಾಥಮಿಕ ಶಾಲೆಗಳಿಗೆ ಹೈಟೆಕ್ ಶೌಚಾಲಯಗಳು ಕಳಪೆ ಆಗಿದ್ದು ಇ.ಓ. ಮತ್ತು ಎ.ಡಿ ಕಾರಣರಾಗಿದ್ದಾರೆ ಕೂಡಲೆ ಕ್ರಮ ಕೈಗೊಳ್ಳಬೇಕು. ಉದ್ಯೋಗ ಖಾತ್ರಿ ಕೆಲಸ ಮಾಡುವ ಸ್ಥಳದಲ್ಲಿ ನೆರಳಿನ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಒದಗಿಸಬೇಕು. ಸಿಂದಗಿ ತಾಲೂಕಿನ ಗೋಲಗೇರಿ ಗ್ರಾಂ.ಪಂ ಯಲ್ಲಿ ಸರಕಾರಿ ಪ್ರಾಥಮಿಕ ಶಾಲೆಗಳ ಹೈಟೆಕ್ ಶೌಚಾಲಯಗಳ ಕಳಪೆ ಕಾಮಗಾರಿಯಾಗಿದ್ದು ಇದಕ್ಕೆ ಸಂಬಂದಿಸಿದಂತೆ ದೂರ ಕೊಟ್ಟಿದ್ದರು ಇದಕ್ಕೆ ಸಂಬಂದಿಸಿದಮತೆ ದೂರ ಕೊಟ್ಟಿದ್ದರು ಕ್ರಮ ವೈಹಿಸಿರುವುದಿಲ್ಲಾ ಯಾಕೆ? ತಕ್ಷಣ ಇವೆಲ್ಲ ತಪ್ಪುಗಳನ್ನು ತಿದ್ದಿಕೊಂಡು ದುಡಿಯುವ ವರ್ಗಕ್ಕೆ ಕೆಲಸ ನೀಡಬೇಕೆಂದು ಅಗ್ರಹಿಸಿದ್ದರು.



ಬೇಸಿಗೆ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆಯ ಚಿಕ್ಕಪಡಸಲಗಿ ಬಳಿ ಕೃಷ್ಣಾ ನದಿ ಬತ್ತಿ ಹೋಗಿದೆ.

# ವರನಟ ಡಾ. ರಾಜಕುಮಾರ್ ವ್ಯಕ್ತಿಯಲ್ಲ, ನಾಡಿನ ಹೋರಾಟದ ಶಕ್ತಿ: ವಿಜಯಕುಮಾರ್



ಕಲಬುರಗಿಯ ಕನ್ನಡ ಭವನದಲ್ಲಿ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಳಗೂ ಕನ್ನಡ ಸಾಹಿತ್ಯ ಪರಿಷತ್ ಸಂಯುಕ್ತ ಆಶ್ರಯದಲ್ಲಿ ನಡೆದ ಡಾ.ರಾಜಕುಮಾರ ಅವರ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಕಸಾಪ ಅಧ್ಯಕ್ಷ ಟಿ.ವಿಜಯಕುಮಾರ ಪಾಟೀಲ್ ಉದ್ಘಾಟಿಸಿದರು.

**ಕಲಬುರಗಿ, ಏ.25–** ಡಾ.ರಾಜ್ ಕುಮಾರ್ ಕೇವಲ ವ್ಯಕ್ತಿ, ನಟನಷ್ಟೆಯಲ್ಲ, ಅವರೊಬ್ಬ ನಾಡಿನ ಹೋರಾಟದ ಪ್ರತೀಕ ಶಕ್ತಿಯಾಗಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ ಹೇಳಿದರು.

ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇವುಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದ ಕನ್ನಡ ಭವನದ ಸುವರ್ಣ ಸಭಾಭವನದಲ್ಲಿ ಆಯೋಜಿಸಿದ ವರನಟ ಡಾ. ಡಾಜ್‌ಕುಮಾರ್ ಅವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಗೋಕಾಕ್ ಚಳುವಳಿ ಸೇರಿದಂತೆ ಅನೇಕ ಕನ್ನಡಪರ ಹೋರಾಟಗಳಲ್ಲಿ ಮುಂಚೂಣಿಯಲ್ಲಿ ನಿಲ್ಲುತ್ತಿದ್ದ ನಟ ಸಾರ್ವಭೌಮ ರಾಜ್ ಕುಮಾರ ಅವರ ಭಾಷಾಭಿಮಾನ ನಮಗೆಲ್ಲ ಸ್ಪೂರ್ತಿಯ ಚಿಲುಮೆಯಾಗಿದ್ದು, ಇದುವೇ ನಮಗೆಲ್ಲ ಕನ್ನಡ ಉಳಿಸಿ ಬೆಳೆಸುವ ಶಕ್ತಿ ನೀಡಿದೆ ಎಂದ ಅವರು, ತಮ್ಮಅಭಿನಯದ ಮೂಲಕ ನಾಡಿನ ಪ್ರತಿಯೊಬ್ಬರ ಹೃದಯದಲ್ಲಿ ಡಾ.ರಾಜ್ ಕುಮಾರ್ ಅಮರರಾಗಿದ್ದಾರೆ. ಇದಕ್ಕೂ ಮುನ್ನ ಮುತ್ತುರಾಜನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿಗಳ ಕಚೇರಿಯ ಶಿಷ್ಟಾಚಾರ ತಹಶೀಲ್ದಾರ ಪಂಪಯ್ಯ ಮಾತನಾಡಿ, ಡಾ.ರಾಜ್ ಅವರು ಜೀವನದುದ್ದಕ್ಕೂ ಕನ್ನಡ ಚಿತ್ರ ಹೊರತುಪಡಿಸಿ ಬೇರೆ ಸಿನಿಮಾ ಮಾಡಿಲ್ಲ.ಇದು ಅವರ ಭಾಷಾಭಿಮಾನ ತೋರಿಸುತ್ತದೆ. ವೀರಪ್ಪನ್ ಅವರು ಅವರನ್ನು ಅಪಹರಣ ಮಾಡದೆ ಇದ್ದೆ ಡಾ.ರಾಜ್ ಅವರು ಇನ್ನಷ್ಟು ಕಾಲ ನಮ್ಮೊಂದಿಗೆ ಇರುತ್ತಿದ್ದರು ಎಂದರು.

**ಗೀತ ಗಾಯನ:** ಕಿರಣ ಪಾಟೀಲ ಮತ್ತು ಕಾವೇರಿ ಹಿರೇಮಠ ಅವರುಗಳು ಡಾ. ರಾಜಕುಮಾರ್ ಅಭಿನಯದ ಚಲಿಸುವ ಮೋಡಗಳು ಚಿತ್ರದ "ಜೇನಿನ ಹೊಳೆಯೋ ಹಾಲಿನ ಮಳೆಯೋ", ಸನಾದಿ ಅಪ್ಪಣ್ಣ ಚಿತ್ರದ" ಕರೆದರು ಕೇಳದೆ ಸುಂದರನೆ", ದೇವತಾ ಮನುಷ್ಯ ಚಿತ್ರದ "ಹೃದಯದಲ್ಲಿ ಇದೇನಿದು", ಕವಿರತ್ನ ಕಾಳಿದಾಸ ಚಿತ್ರದ "ಓ. ಪ್ರಿಯತಮಾ", "ಕರುಣೆ ತೋರಯ್" ಸೇರಿದಂತೆ ಅನೇಕ ಚಿತ್ರಗೀತೆಗಳು, ವಿಶೇಷವಾಗಿ ಪುನಿತ್ ರಾಜಕುಮಾರ್ ಅಭಿನಯದ "ಬೊಂಬೆ ಹೇಳುತ್ತೈತೆ ಮತ್ತೆ ಹೇಳುತ್ತೈತೆ ನೀನು ರಾಜಕುಮಾರ" ಹಾಡಿ ಗಾನದ ಸುಧೆ ಹರಿಸಿದರು. ಇದಲ್ಲದೆ ಅನೇಕ ಕನ್ನಡಾಭಿಮಾನಿಗಳು ರಾಜ್ ಅಭಿನಯದ ಕನ್ನಡ ಹಾಡು ಖುಷಿಪಟ್ಟರು.

**ಮೌನಾಚರಣೆ:** ಇದೇ ಸಂದರ್ಭದಲ್ಲಿ ಕಾರ್ಯಕ್ರಮ ಆರಂಭಕ್ಕು ಮುನ್ನ ಇತ್ತೀಚೆಗೆ ಜಮ್ಮು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಂ ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಸಾವನಪ್ಪಿದವರ ಆತ್ಮಕ್ಕೆ ಶಾಂತಿ ಕೋರಿ ಎರಡು ನಿಮಿಷ ಮೌನಾಚರಣೆ ಮಾಡಲಾಯಿತು.

# ಬಸವ ಜಯಂತಿ ಆಚರಣೆ ನಾಳೆ ಬೃಹತ್ ಬೈಕ್ ರ‍್ಯಾಲಿ, ಮೇ 4 ರಂದು ಮೆರವಣಿಗೆ: ಬಸವರಾಜ ಹೊರಟ್ಟಿ



**ಬೆಳಗಾವಿ, ಏ.25–** 'ನಗರದಲ್ಲಿ ಈ ವರ್ಷ ಸಂಭ್ರಮದಿಂದ ಬಸವ ಜಯಂತಿ ಆಚರಣೆಗೆ ನಿರ್ಧರಿಸಿದ್ದೇವೆ. ಇದರ ಅಂಗವಾಗಿ ಏ.27ರಂದು ಬೃಹತ್ ಬೈಕ್ ರ‍್ಯಾಲಿ, ಮೇ 4ರಂದು ಮೆರವಣಿಗೆ ಆಯೋಜಿಸಿದ್ದೇವೆ' ಎಂದು ಜಾಗತಿಕ ಲಿಂಗಾಯತ ಮಹಾಸಭೆ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಹೊರಟ್ಟಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ, 'ಜಾಗತಿಕ ಲಿಂಗಾಯತ ಮಹಾಸಭೆ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ, ರಾಷ್ಟ್ರೀಯ ಬಸವ ದಳ ಸೇರಿದಂತೆ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಏಪ್ರಿಲ್ 30ರಂದು ಎಲ್ಲ ಸಂಘ–ಸಂಸ್ಥೆಗಳು ಮತ್ತು ಮನೆಗಳಲ್ಲಿ ಬಸವ ಜಯಂತಿ ಆಚರಿಸಲಾಗುವುದು'. 'ಏಪ್ರಿಲ್ 27ರಂದು ಬೆಳಿಗ್ಗೆ 8ಕ್ಕೆ ಬಸವೇಶ್ವರ ವೃತ್ತದಿಂದ ಬೈಕ್ ರ‍್ಯಾಲಿ ಆರಂಭಗೊಳ್ಳಲಿದೆ. ಟಿಳಕ'ವಾಡಿಯ ಆರ್‌ಪಿಡಿ ಕಾಲೇಜು ವೃತ್ತ, ವಡಗಾವಿ, ಖಾಸಬಾಗ, ಶಹಾಪುರ, ಕಪಿಲೇಶ್ವರ ರೈಲ್ವೆ ಮೇಲ್ಸೇತುವೆ, ರವಿವಾರ ಪೇಟೆ, ಮಾರುತಿ ಗಲ್ಲಿ, ರಾಮದೇವ ಗಲ್ಲಿ, ರಾಣಿ ಚನ್ನಮ್ಮ ವೃತ್ತ, ಶಿವಬಸವ ನಗರ, ಮಹಾಂತೇಶ ನಗರ, ಶ್ರೀ ನಗರ, ಆಂಜನೇಯ ನಗರ ಮಾರ್ಗವಾಗಿ ಸಾಗಿ ರಾಮತೀರ್ಥ ನಗರ ತಲುಪಲಿರುವ ರ‍್ಯಾಲಿಯಲ್ಲಿ ಒಂದು ಸಾವಿರಕ್ಕೂ ಅಧಿಕ ಬೈಕ್ ಸವಾರರು ಪಾಲ್ಗೊಳ್ಳುವ ನಿರೀಕ್ಷೆ ಇದೆ'. 'ಮೇ 4ರಂದು ಬಸವೇಶ್ವರ ಪ್ರತಿಮೆಯೊಂದಿಗೆ ಭವ್ಯ ಮೆರವಣಿಗೆ ರಾಣಿ ಚನ್ನಮ್ಮ ವೃತ್ತದಿಂದ ಹೊರಡಲಿದ್ದು, ಕಾಕತಿವೇಸ್, ಮಾರುತಿ ಗಲ್ಲಿ, ರಾಮದೇವ ಗಲ್ಲಿ, ಸಮಾದೇವಿ ಗಲ್ಲಿ, ಕಾಲೇಜು ರಸ್ತೆ ಮಾರ್ಗವಾಗಿ ಸಾಗಿ ಲಿಂಗರಾಜು ಕಾಲೇಜು ಮೈದಾನ ತಲುಪಲಿದೆ. ವಿವಿಧ ರೂಪಕಗಳು, ಕಲಾ ತಂಡಗಳು ಭಾಗವಹಿಸಲಿವೆ' ಎಂದು ಹೇಳಿದರು.

ರತ್ನಪ್ರಭಾ ಬೆಲ್ಲದ, ಶಂಕರ ಗುಡಸ್, ಅಶೋಕ ಬೆಂಡಿಗೇರಿ, ರಮೇಶ ಕಳಸಣ್ಣವರ, ಎ. ವೈ.ಬೆಂಡಿಗೇರಿ, ಎಂ.ಎಂ.ಬಾಳಿ, ಬಾಲಚಂದ್ರ ಬಾಗಿ ಇತರರಿದ್ದರು.

'ಬಸವ ಜಯಂತಿ ಜತೆಗೆ ರೇಣುಕಾಚಾರ್ಯರ ಜಯಂತಿ ಸಹ ಆಚರಿಸಬೇಕು ಎಂದು ನಿವೃತ್ತ ಐಪಿಎಸ್ ಅಧಿಕಾರಿ ಶಂಕರ ಬಿದರಿ ಅವರು, ಅಖಿಲ ಭಾರತ ವೀರಶೈವ ಮಹಾಸಭೆಗೆ ಕರೆ ನೀಡಿದ್ದರು. ಆದರೆ, ನಾವು ಬೆಳಗಾವಿಯಲ್ಲಿ ಎಲ್ಲ ಸಂಘಟನೆಯವರು ಸೇರಿ ಚರ್ಚಿಸಿ, ಬಸವ ಜಯಂತಿ ಮಾತ್ರ ಆಚರಣೆಗೆ ತೀರ್ಮಾನಿಸಿದ್ದೇವೆ. ಇದಕ್ಕೆ ವೀರಶೈವ ಮಹಾಸಭೆ ಜಿಲ್ಲಾ ಘಟಕವೂ ಸಹಮತ ಸೂಚಿಸಿದೆ' ಎಂದು ಎಲ್ಲ ಮುಖಂಡರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.ಶಂಕರ ಬಿದರಿ ಹೇಳಿಕೆಯನ್ನೂ ಕೆಲವರು ಖಂಡಿಸಿದರು.

# ತಡರಾತ್ರಿ ರಾಜ್ಯ ಹೆದ್ದಾರಿ ಟೋಲ್ ಮೇಲೆ ದಾಳಿ
# ಶಾಸಕಿ ಸೋದರ, ಪುತ್ರ ಸೇರಿ ಹಲವರ ವಿರುದ್ಧ ಪ್ರಕರಣ

**ರಾಯಚೂರು, ಏ.25–** ಸಾರ್ವಜನಿಕರ ವಿರೋಧದ ನಡುವೆಯೂ ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಕಾಕರಗಲ್ ಸಮೀಪ ರಾಜ್ಯ ರಸ್ತೆ ಅಭಿವೃದ್ಧಿ ನಿಗಮ ನಿರ್ಮಿಸಿದ ಟೋಲ್ ಮೇಲೆ ತಡರಾತ್ರಿ ಜೆಡಿಎಸ್ ಕಾರ್ಯಕರ್ತರು, ಗ್ರಾಮಸ್ಥರು ದಿಡೀರ್ ದಾಳಿ ನಡೆಸಿ ಹಲವು ವಸ್ತ್ರತುಗಳು, ಪರಿಕರಗಳನ್ನು ಧ್ವಂಸ ಮಾಡಿರುವ ಘಟನೆ ನಡೆದಿದೆ.

ಬೈಕ್ ಮತ್ತು ಕಾರ್‌ಗಳಲ್ಲಿ ಬಂದ ನೂರಾರು ಜನ ಟೋಲ್ ನಿರ್ಮಾಣ ಖಂಡಿಸಿ ಕೆಲವು ಕಾಲ ಪ್ರತಿಭಟನೆ ನಡೆಸಿದ್ದಾರೆ. ಇದೇ ವೇಳೆ ಶಾಸಕರಾದ ಕರೆಮ್ಮ ಜಿ. ನಾಯಕ ಸ್ಥಳಕ್ಕೆ ಭೇಟಿ ನೀಡಿದ್ದರು. ಶಾಸಕರನ್ನು ಕಂಡು ಪ್ರಚೋದಿತರಾದ ಪ್ರತಿಭಟನಾಕಾರರು ಬ್ಯಾರಿಕೇಡ್‌ಗಳನ್ನು ಮುರಿದು ಸಿಸಿ ಟಿವಿ ಕ್ಯಾಮರಾಗಳನ್ನು ಕಿತ್ತೆಸೆದು ಕಂಪ್ಯೂಟರ್‌ಗಳನ್ನು ಹಾನಿಗೊಳಿಸಿದ್ದಾರೆ. ಕಿಟಕಿ ಗಾಜು ಒಡೆದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಗಬ್ಬೂರು ಠಾಣೆ ಪೊಲೀಸರು ಹಲವರನ್ನು ವಶಕ್ಕೆ ಪಡೆದು ಪರಿಸ್ಥಿತಿ ತಿಳಿಗೊಳಿಸಿದ್ದಾರೆ.ಮೇಲ್ವಿಚಾರಣೆಯಲ್ಲಿದ್ದ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ನವೀನ್ ಕುಮಾರ್ ಅವರು ಗಬ್ಬೂರು ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ. ಶಾಸಕಿಯ ಸಹೋದರ ತಿಮ್ಮರೆಡ್ಡಿ ನಾಯಕ, ಪುತ್ರ ಸಂತೋಷ ನಾಯಕ ಕಾರ್ಯಕರ್ತ ಸಲೀಂ ಕಾಕರಗಲ್ ಸೇರಿದಂತೆ 12ಕ್ಕೂ ಹೆಚ್ಚು ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಾಗಿದೆ.

# ಕಾಡಾನೆ ದಾಳಿಯಿಂದ ರಕ್ಷಿಸಲು ಅರಣ್ಯ ಇಲಾಖೆ ಮುನ್ನೆಚ್ಚರಿಕೆ ವ್ಯವಸ್ಥೆ

**ಮಡಿಕೇರಿ,ಏ.25–** ಆನೆ ಬಾಧಿತ ಪ್ರದೇಶದಲ್ಲಿ ವಾಸಿಸುವ ಜನರನ್ನು ಕಾಡಾನೆ ದಾಳಿಯಿಂದ ರಕ್ಷಿಸಲೆಂದೇ ಅರಣ್ಯ ಇಲಾಖೆ ಮುನ್ನೆಚ್ಚರಿಕಾ ವ್ಯವಸ್ಥೆಯನ್ನು ಜಾರಿಗೆ ತಂದಿದೆ. ಈ ವ್ಯವಸ್ಥೆಯಡಿ ಜನರಿಗೆ ಬರುವ ಸಂದೇಶಗಳನ್ನು ಕಡ್ಡಾಯವಾಗಿ, ಓದಿ ಪಾಲಿಸುವಂತೆ ಅರಣ್ಯ ಇಲಾಖೆಯ ಅಧಿಕಾರಿಗಳು ಮನವಿ ಮಾಡುತ್ತಾರೆ.

'ಅರ್ಲಿ ವಾರ್ನಿಂಗ್ ಸಿಸ್ಟಂ' ಎಂದು ಕರೆಯಲಾಗುವ ಈ ವ್ಯವಸ್ಥೆಯಡಿ ಕೊಡಗು ಜಿಲ್ಲೆಯ ಕಾಡಾನೆ ಬಾಧಿತ ಪ್ರದೇಶದ ಸುಮಾರು 16 ಸಾವಿರಕ್ಕೂ ಅಧಿಕ ಮಂದಿ ನೋಂದಣಿಯಾಗಿದ್ದಾರೆ. ಇವರಿಗೆ ನಿತ್ಯ 3 ಬಾರಿ ಕಾಡಾನೆಗಳ ಚಲನ ವಲನ ಕುರಿತು ಸಂದೇಶಗಳು ಬರುತ್ತವೆ. ಆದರೆ, ರೇಡಿಯೊ ಕಾಲರ್ ಅಳವಡಿಸದ ಕಾಡಾನೆಗಳ ಚಲನವಲನಗಳನ್ನು ಖುದ್ದು ಅರಣ್ಯ ಇಲಾಖೆ ಸಿಬ್ಬಂದಿಯೇ ಗುರುತಿಸಿ, ಸಂದೇಶ ರವಾನಿಸುತ್ತಾರೆ. ಬೆಳಿಗ್ಗೆ, ಮಧ್ಯಾಹ್ನ ಮತ್ತು ಸಂಜೆ ಕಾಡಾನೆಗಳು ಯಾವ ಕಡೆಯಿಂದ ಯಾವ ಕಡೆಗೆ ಹೊರಟಿವೆ ಎಂಬ ಸಂದೇಶ ಇದರಲ್ಲಿದ್ದು, ಜನರು ಈ ಸಂದೇಶವನ್ನು ಕಡ್ಡಾಯವಾಗಿ ಓದಬೇಕು ಹಾಗೂ ಸೂಚನೆಗಳನ್ನು ಪಾಲಿಸಬೇಕು ಎಂದು ಡಿಸಿಎಫ್ ಜಗನ್ನಾಥ್ ತಿಳಿಸಿದರು.



ವಿರಾಜಪೇಟೆ ಭಾಗದಲ್ಲಿ 160 ಮತ್ತು ಮಡಿಕೇರಿಯಲ್ಲಿ 130 ತಂಡಗಳನ್ನು ಇದಕ್ಕೆಂದೇ ನಿಯೋಜಿಸಲಾಗಿದೆ. ಒಟ್ಟು 290ಕ್ಕೂ ಅಧಿಕ ಮಂದಿ ಹಾಗೂ ಇಟಿಎಫ್ ಸಿಬ್ಬಂದಿ ಈ ನಿಟ್ಟಿನಲ್ಲಿ ನಿತ್ಯವೂ ಕಾರ್ಯನಿರ್ವಹಿಸುತ್ತಿದ್ದಾರೆ. ಮಡಿಕೇರಿಯಲ್ಲಿರುವ ನಿಯಂತ್ರಣ ಕಚೇರಿಗೆ ಇವರು ಕಾಡಾನೆಗಳ ಚಲನವಲನಗಳ ಮಾಹಿತಿಯನ್ನು ನೀಡುತ್ತಾರೆ. ನಿಯಂತ್ರಣ ಕಚೇರಿಯಿಂದ ಒಮ್ಮೆಗೆ ನೋಂದಣಿಯಾಗಿರುವ ಎಲ್ಲರ ಮೊಬೈಲ್‌ಗಳಿಗೆ ಸಂದೇಶ ರವಾನೆಯಾಗುತ್ತದೆ.

**ಸಿದ್ದಾಪುರ:** ಇಲ್ಲಿಗೆ ಸಮೀಪದ ಎಮ್ಮೆಗುಂಡಿ ತೋಟದಲ್ಲಿ ಗುರುವಾರ ಕಾಡಾನೆ ದಾಳಿಗೆ ಸಿಲುಕಿ ಸೆಲ್ವಂ ಅಲಿಯಾಸ್ ಚೆಲ್ಲದೊರೆ ಮೃತಪಟ್ಟ ನಂತರ ಸ್ಥಳೀಯರಲ್ಲಿ ಆತಂಕ ಹೆಚ್ಚಿದೆ. ಎಮ್ಮೆಗುಂಡಿ ಸೇರಿದಂತೆ ಸಮೀಪದ ಕಾಫಿ ತೋಟಗಳಲ್ಲಿ ಸುಮಾರು 50ಕ್ಕೂ ಹೆಚ್ಚು ಕಾಡಾನೆಗಳು ಬೀಡು ಬಿಟ್ಟಿದ್ದು ಕಾಡಾನೆ ದಾಳಿ ಬಳಿಕ ಕಾರ್ಮಿಕರು ಸ್ಥಳೀಯರು ಭಯಭೀತರಾಗಿದ್ದಾರೆ. ಕಾರ್ಮಿಕರು ಕೆಲಸಕ್ಕೆ ತೆರಳಲು ಹಿಂದೇಟು ಹಾಕುತ್ತಿದ್ದಾರೆ. ಕಾಡಾನೆ ಹಾವಳಿಗೆ ಶಾಶ್ವತ ಯೋಜನೆ ರೂಪಿಸಬೇಕೆಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಮೂಕೊಂಡ ವಿಜು ಸುಬ್ರಮಣಿ ಒತ್ತಾಯಿಸಿದ್ದಾರೆ. ಕಾಫಿ ತೋಟಗಳಲ್ಲಿ ಬೀಡುಬಿಟ್ಟಿರುವ ಆನೆಗಳನ್ನು ಕಾಡಿಗೆ ಅಟ್ಟಬೇಕೆಂದು ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಕುಟ್ಟಂಡ ಅಜಿತ್ ಕರುಂಬಯ್ಯ ಒತ್ತಾಯಿಸಿದ್ದಾರೆ.

ಅರಣ್ಯ ಇಲಾಖೆ ಕಾರ್ಯವೈಖರಿ ಬಗ್ಗೆ ಸ್ಥಳೀಯರು ಅಸಮಾಧಾನ ಹೊರಹಾಕಿದ್ದಾರೆ. ಸಂಕೇತ್ ಪೂವಯ್ಯ ಭೇಟಿ ನೀಡಿ ಸಾಂತ್ವನ ಕಾಡಾನೆ ದಾಳಿಗೆ ಸಿಲುಕಿ ಮೃತಪಟ್ಟ ಸೆಲ್ವಂ ಅಲಿಯಾಸ್ ಚೆಲ್ಲದೊರೆ ಅವರ ಕುಟುಂಬದ ಸದಸ್ಯರಿಗೆ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯರಾದ ಮೆರಿಯಂಡ ಸಂಕೇತ್ ಪೂವಯ್ಯ ಸಾಂತ್ವನ ಹೇಳಿ ರೂ.5.00 ಲಕ್ಷ ತುರ್ತು ಪರಿಹಾರದ ಚೆಕ್ ನೀಡಿದರು. ಈ ವೇಳೆ ಮಾತನಾಡಿದ ಸಂಕೇತ್ ಪೂವಯ್ಯ 'ಈಗಾಗಲೇ ಶಾಸಕರಾದ ಎ.ಎಸ್ ಪೊನ್ನಣ್ಣ ಅವರಿಗೆ ಮಾಹಿತಿ ನೀಡಲಾಗಿದೆ. ಅರಣ್ಯ ಇಲಾಖೆ ಸೂಕ್ತ ರೀತಿಯಲ್ಲಿ ಸ್ಪಂದಿಸುವಂತೆ ಅವರು ಸೂಚಿಸಿದ್ದಾರೆ. ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ' ಎಂದರು. ಇದೇ ವೇಳೆ ಮೃತರ ಕುಟುಂಬಕ್ಕೆ ತುರ್ತು ಪರಿಹಾರ ರೂ.5.00 ಲಕ್ಷ ಚೆಕ್ ಅನ್ನು ಸಂಕೇತ್ ಕುಟುಂಬಸ್ಥರಿಗೆ ಹಸ್ತಾಂತರಿಸಿದರು. ಮೃತ ಚೆಲ್ಲದೊರೆಗೆ ಪತ್ನಿ ಪುತ್ರ ಇದ್ದಾರೆ. ಇವರ ಮೃತದೇಹವನ್ನು ಸಿದ್ದಾಪುರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು. ಸ್ಥಳಕ್ಕೆ ಡಿಸಿಎಫ್ ಜಗನ್ನಾಥ್ ಎಸಿಎಫ್ ಗೋಪಾಲ್ ತಿತಿಮತಿ ವಲಯ ಅರಣ್ಯಾಧಿಕಾರಿ ಗಂಗಾಧರ್ ಉಪವಲಯ ಅರಣ್ಯಾಧಿಕಾರಿ ಶಶಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಪುಸ್ತಕಗಳ ಅಧ್ಯಯನದಿಂದ ವ್ಯಕ್ತಿತ್ವ ವಿಕಸನ: ಡಾ.ಮನ್ಮಥಡೋಳೆ



ಬೀದರ ನಗರದ ಪತ್ರಿಸ್ವಾಮಿ ಪದವಿಪೂರ್ವ ಕಾಲೇಜಿನಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿರುವ ವಿಶ್ವ ಪುಸ್ತಕ ದಿನಾಚರಣೆ ಸಮಾರಂಭವನ್ನು ಪ್ರಾಚಾರ್ಯ ಡಾ.ಮನ್ಮಥಡೋಳೆ ಉದ್ಘಾಟಿಸಿದರು.

**ಬೀದರ್, ಏ.25–** ಪುಸ್ತಕ ಓದುವ ಹವ್ಯಾಸದಿಂದ ಚಿಂತನೆಗಳು ಧನಾತ್ಮಕವಾಗಿ ವ್ಯಕ್ತಿತ್ವವೇ ವಿಕಸನವಾಗುತ್ತದೆ ಎಂದು ನಾಲಂದಾ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಡಾ. ಮನ್ಮತ ಡೋಳೆ ಹೇಳಿದರು.

ನಗರದ ಪತ್ರಿಸ್ವಾಮಿ ಪದವಿಪೂರ್ವ ಕಾಲೇಜಿನಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿರುವ ವಿಶ್ವ ಪುಸ್ತಕ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.ಪುಸ್ತಕಗಳು ಓದುಗನ ಕಲ್ಪನೆಗೆ ಮೀರಿದ ಬುದ್ಧಿ ಭಾವಗಳನ್ನು ಬೆಳಸಿ ಓದುವ ಅಭ್ಯಾಸವನ್ನು ವೃದ್ಧಿಸುತ್ತಿವೆ. ಓದುವುದರಿಂದ ಕೇವಲ ಉತ್ತಮ ಶಿಕ್ಷಣ ಒಂದು ನಿರ್ದಿಷ್ಟ ವಿಷಯದ ಜ್ಞಾನ ಹೊಂದುವುದಲ್ಲದೆ, ನಮ್ಮಲ್ಲಿ ಹಲವು ಕೌಶಲ್ಯ ಮತ್ತು ವಿಮರ್ಶಾತ್ಮಕ ಗುಣಗಳು ವೃದ್ಧಿಸಿ ಮನಸ್ಸು ಸದೃಢಗೊಳ್ಳುತ್ತದೆ ಎಂದರು.

ನಿವೃತ್ತ ಉಪನ್ಯಾಸಕ ಕಲ್ಯಾಣರಾವ ಶೆಂಬೆಳ್ಳಿ ಮಾತನಾಡಿ, ಪುಸ್ತಕಗಳು ಯಾವತ್ತಿಗೂ ವಾಸ್ತವ ಸತ್ಯವನ್ನು ತಿಳಿಸುತ್ತವೆ. ಯುವ ಸಮೂಹ ಮೊಬೈಲ್ ವ್ಯಾಮೋಹದಿಂದ ಹೊರಬಂದು ಪುಸ್ತಕ ಓದುವ ಸಂಸ್ಕೃತಿ ರೂಢಿಸಿಕೊಳ್ಳಬೇಕಿದೆ ಎಂದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ, ವಿಶ್ವ ಪುಸ್ತಕ ದಿನಾಚರಣೆ ಹಿನ್ನೆಲೆ ಮತ್ತು ಮಹತ್ವ ಕುರಿತು ತಿಳಿಸಿದರು.

ಪುಸ್ತಕಗಳ ಓದುವಿಕೆ ಸುಂದರ ಬದುಕು ರೂಪಿಸಬಲ್ಲವು ಎಂಬುದಕ್ಕೆ ಹಲವು ನಿದರ್ಶನಗಳಿವೆ ಎಂದರು.ಪುಸ್ತಕಗಳು ಓದುವ ಸಂಸ್ಕೃತಿ ಜೀವಂತವಾಗಿಟ್ಟ ಪುಸ್ತಕ ಪ್ರೇಮಿ ವಿಶ್ವನಾಥ ಕನಕೆ ಅವರಿಗೆ ತಾಲೂಕು ಕಸಾಪ ವತಿಯಿಂದ ವಿಶೇಷ ಸನ್ಮಾನ ಮಾಡಲಾಯಿತು. ಅಲ್ಲದೇ ಕಾಲೇಜಿನ ಕೆಲ ಮಕ್ಕಳಿಗೆ ಪುಸ್ತಕಗಳು ನೀಡಿ ಸಾಹಿತ್ಯದ ಕುರಿತು ಆಸಕ್ತಿ ಹೆಚ್ಚಿಸಿಕೊಳ್ಳಲು ವಿನಂತಿಸಲಾಯಿತು.ಈ ಸಂದರ್ಭದಲ್ಲಿ ಪತ್ರಿಸ್ವಾಮಿ ಕಾಲೇಜು ಪ್ರಾಚಾರ್ಯ ಎಸ್.ಕೆ ಅಖೀಲ್, ಉಪನ್ಯಾಸಕ ಅನೀಲ್, ಧನರಾಜ ಮಾನೆ, ಅಮೃತರಾವ ಬಿರಾದಾರ್, ಮಲ್ಲಿಕಾರ್ಜುನ ಟಂಕಸಾಲೆ, ಸಂದೀಪ ಪಾಟೀಲ್, ಅಮರ ಸ್ವಾಮಿ ಸ್ಥಾವರಮಠ, ಆನಂದ ದ್ಯಾಡೆ, ಶಾಂತಾ ಕನಕೆ, ಕುಮಾರಿ ಸುಷ್ಮಾ ವಿಜಯಕುಮಾರ್ ಸೇರಿದಂತೆ ಇನ್ನಿತರರಿದ್ದರು.

# ಹಳೇ ಕಟ್ಟಡ ನೋಡಿ ವಿದ್ಯಾರ್ಥಿಗಳ ಹಿಂಜರಿಕೆ: ಉತ್ತಮ ಬೋಧನೆ ಬಗ್ಗೆ ಅರಿವು ಅಗತ್ಯ- ಡಾ.ಪ್ರಜ್ಞಾ




**ಬಳ್ಳಾರಿ ಏ. 25–**ಬಳ್ಳಾರಿ ನಗರದ ರೇಡಿಯೋ ಪಾರ್ಕ್‌ನಲ್ಲಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿಗೆ ನಿಮ್ಮಮಕ್ಕಳನ್ನು ಸೇರಿಸಿ ಉತ್ತಮ ಶಿಕ್ಷಣ ನೀಡುವ ಜವಾಬ್ದಾರಿ ನಮ್ಮದೆಂದು ಕಾಲೇಜಿನ ಪ್ರಿನ್ಸಿಪಲ್ ಡಾ ಪ್ರಜ್ಞಾ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಖಾಸಗೀ ಕಾಲೇಜಿನ ಹಾವಳಿ ಇಲ್ಲದಿದ್ದಾಗ ಸರ್ಕಾರಿ ಕಾಲೇಜುಗಳಲ್ಲಿಯೂ ಕಡಿಮೆ ಅಂಕ ಪಡೆದವರು ಪ್ರವೇಶ ಪಡೆಯಲು ಕಷ್ಟವಿತ್ತು ಅದಕ್ಕೂ ಶಿಫಾರಸು ಬೇಕಿತ್ತು. ಆದರೆ ಈಗ ನಗರದಲ್ಲಿ ಸರಳಾದೇವಿ ಕಾಲೇಜು ಬಿಟ್ಟರೆ ಉಳಿದ ಕಾಲೇಜುಗಳ ಪರಿಸ್ಥಿತಿ ಬದಲಾಗಿದೆ.

ಕಳೆದ 11 ವರ್ಷಗಳ ಹಿಂದೆ ಆರಂಭವಾದ ಈ ಕಾಲೇಜಿನಲ್ಲಿ ಈ ವರೆಗೆ ಬಿ.ಎ.ಬಿಕಾಂ ತರಗತಿಗಳಿದ್ದವು. ಈ ವರ್ಷ ಬಿಎಸ್ಸಿ ಸಹ ಆರಂಭಿಸುತ್ತಿದ್ದಾರೆ. ಕಳೆದ ವರ್ಷ ಕಾಲೇಜಿನಲ್ಲಿ 351 ವಿದ್ಯಾರ್ಥಿನಿಯರು ಇದ್ದಾರೆ.

ಐದು ಜನ ಕಾಯಂ 16 ಜನ ಅತಿಥಿ ಉಪನ್ಯಾಸಕರು ಆರಂಭದಲ್ಲಿ 38 ವಿದ್ಯಾರ್ಥಿಗಳಿದ್ದ ಈ ಕಾಲೇಜು ಉತ್ತಮ ಬೋಧನೆಯಿಂದ ಈಗ 350 ರ ಗಡಿ ದಾಟಿದೆ. ಶೇ 90 ರಷ್ಟು ವಿದ್ಯಾರ್ಥಿಗಳು ಶೇ 80 ಕ್ಕಿಂತ ಹೆಚ್ಚು ಅಂಕ ಪಡೆದು ಡಿಸ್ಟಿಂಕ್ಸನ್ ಪಡೆದಿದ್ದಾರೆ.ಉದ್ಯೋಗ ಮೇಳ ಮಾಡಿದಾಗ 38 ಜನರಿಗೆ ಉದ್ಯೋಗವೂ ದೊರೆತಿತ್ತು. ಈಗ ಪ್ರವೇಶಾತಿ ಆರಂಭಗೊಂಡಿದ್ದು ಅಕ್ಕಮಹಾದೇವಿ ಮಹಿಳಾ ವಿಶ್ವ ವಿದ್ಯಾಲಯದಡಿ ಕಾರ್ಯ ನಿರ್ವಹಿಸುತ್ತಿದೆ ಎಮದು ತಿಳಿಸಿದ್ದಾರೆ.

# ಕನ್ನಡ ಸಾಹಿತ್ಯ ಪರಿಷತ್‌ನ ಸಮ್ಮೇಳನಕ್ಕೆ ಕರವೇ ಸಂಪೂರ್ಣ ಬೆಂಬಲ: ಚಾನಾಳ್ ಶೇಖರ್ ಘೋಷಣೆ



**ಬಳ್ಳಾರಿ, ಏ.25–** ಕರ್ನಾಟಕ ರಕ್ಷಣಾ ವೇದಿಕೆ, ಜಿಲ್ಲಾ ಪದಾಧಿಕಾರಿಗಳು, ತಾಲ್ಲೂಕು ಅಧ್ಯಕ್ಷರು, ವಿಧಾನ ಸಭಾಕ್ಷೇತ್ರದ ಅಧ್ಯಕ್ಷರು, ಹೋಬಳಿ ಘಟಕದ ಅಧ್ಯಕ್ಷರು, ಪದಾಧಿಕಾರಿಗಳು, ಗ್ರಾಮ ಶಾಖೆ ಅಧ್ಯಕ್ಷರು, ಪದಾಧಿಕಾರಿಗಳು, ಸರ್ವ ಸದಸ್ಯರು ಸೇರಿದಂತೆ, ಜಿಲ್ಲಾಘಟಕದ ಸಭೆ ನಡೆಯಿತು.

ಈ ಸಭೆಯಲ್ಲಿ ಜಮ್ಮು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ಮಾಡಿ 27 ಜನ ಅಮಾಯಕರ ಬಲಿ ಪಡೆದ ಉಗ್ರರ ಹೇಯಕೃತ್ಯ ಖಂಡಿಸಿ, ಹುತ್ಮಾತರಾದವ ರಿಗೆ ಒಂದು ನಿಮಿಷ ಮೌನ ಆಚರಣೆಯನ್ನು ಆಚರಿಸ ಲಾಯಿತು. ತದನಂತರ 68 ವರ್ಷಗಳ ನಂತರ ಕನ್ನಡ ಸಾಹಿತ್ಯ ಸಮ್ಮೇಳನ ಬಳ್ಳಾರಿ ಜಿಲ್ಲೆಗೆ ಒಲಿದು ಬಂದಿದ್ದು, ಅದರ ಅಂಗವಾಗಿ ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ನಿಷ್ಠಿ ರುದ್ರಪ್ಪರವರನ್ನು ಅಭಿನಂದಿಸಿ ಕರವೇವತಿಯಿಂದ ಸಮ್ಮೇಳನಕ್ಕೆ ಸಂಪೂರ್ಣ ಬೆಂಬಲ ನೀಡಲಾಗುವುದೆಂದು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಉಪಾಧ್ಯಕ್ಷ ಚಾನಾಳ್ ಶೇಖರ್ ತಿಳಿಸಿದರು.

ತದನಂತರ ಕರವೇಗೆ ನೂತನವಾಗಿ ಯುವಕರು ಸೇರ್ಪಡೆಗೊಂಡರು.

ಈ ಸಭೆಯಲ್ಲಿ ಬಳ್ಳಾರಿ ತಾಲ್ಲೂಕಿನ ನೂತನ ಅಧ್ಯಕ್ಷರನ್ನಾಗಿ ಸಿರಿವಾರ ದಿವಾಕರ್‌ರವರನ್ನು ನೇಮಕ ಮಾಡಲಾಯಿತು. ಹಾಗೂ ಮುಂದಿನ ದಿನಗಳಲ್ಲಿ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ತಿಂಗಳಿಗೆ ಒಂದು ಬಾರಿ ಭೇಟಿ ನೀಡಿ ಕರವೇ ನೂತನ ಸದಸ್ಯತ್ವ ಅ ಬಿ ಂ ು ಾ ನ ವ ನ ್ ನ ಡ ೆ ಸ ಲಾ ಗ ು ವು ದ ೆ ಂ ದ ು ತಿಳಿಸಲಾಯಿತು.

# ಹಳ್ಳಿಯ ಅಭಿವೃದ್ಧಿಯಿಂದ ಮಾತ್ರ ದೇಶದ ಪ್ರಗತಿ ಸಾಧ್ಯ: ಸುನೀಲ್ ಪವಾರ್



ಕಲಬುರಗಿ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ನಡೆದ ರಾಷ್ಟ್ರೀಯ ಪಂಚಾಯತರಾಜ್ ದಿವಸ ಆಚರಣೆಯನ್ನು ಸಸಿಗೆ ನೀರು ಎರೆಯುವ ಮೂಲಕ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸುನೀಲ್ ಪವಾರ್ ಅವರು ಚಾಲನೆ ನೀಡಿ ಮಾತನಾಡಿದರು.

**ಕಲಬುರಗಿ, ಏ.24–** ರಾಷ್ಟ್ರಪಿತ ಮಹಾತ್ಮ ಗಾಂಧಿಜೀ ಅವರು ನುಡಿದ "ಭಾರತದ ಆತ್ಮವು ಹಳ್ಳಿಯಲ್ಲಿ ವಾಸವಾಗಿದೆ" ಎಂಬ ವಿಚಾರದಾರೆಯನ್ನು ನೆನೆದು, ಹಳ್ಳಿ ಮಟ್ಟದಲ್ಲಿ ಕಲ್ಯಾಣಾಭಿವೃದ್ಧಿ ಯೋಜನೆಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು. ಹಳ್ಳಿಯ ಅಭಿವೃದ್ಧಿಯಿಂದ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸುನೀಲ ಪವಾರ ಅಭಿಪ್ರಾಯಪಟ್ಟರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ ಅವರು ಮಾತನಾಡಿ, ಪಂಚಾಯತ್ ರಾಜ್ ಕಾಯ್ದೆ ಅನುಸಾರ ರಚನೆಯಾಗಿರುವ ಗ್ರಾಮ ಪಂಚಾಯತ್‌ಗಳಲ್ಲಿ, ಗ್ರಾಮ ಸಭೆ, ಸಾಮಾನ್ಯ ಸಭೆಗಳ ಮೂಲಕ ಸ್ಥಳಿಯ ಅಭಿವೃದ್ಧಿಗೆ ನಿರ್ಣಯಗಳ ಅಭಿವೃದ್ಧಿ ಪಡಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯ 11 ತಾಲೂಕ ಪಂಚಾಯತಿಯ 261 ಗ್ರಾಮ ಪಂಚಾಯತಿಗಳ 2024–25 ನೇ ಸಾಲಿನಲ್ಲಿ ಒಟ್ಟು ರೂ–25.00 ಕೋಟಿ ಪ್ರಸ್ತುತ ಬೇಡಿಕೆಗೆ ಅನುಗುಣವಾಗಿ ಉತ್ತಮ ರೀತಿಯಲ್ಲಿ ತೆರಿಗೆ ವಸೂಲಾತಿಯಾಗಿದ್ದು, ಕಳೆದ 5 ವರ್ಷಗಳ ತೆರಿಗೆ ವಸೂಲಾತಿ ಸಾಧನೆಯನ್ನು ಪರಿಗಣಿಸಿದಾಗ ಈ ವರ್ಷದ ತೆರಿಗೆ ವಸೂಲಾತಿಯು ಉತ್ತಮವಾಗಿದೆ ಎಂದು ಹೇಳಿದರು.

ಅದರಂತೆ ಗ್ರಾಮ ಪಂಚಾಯತಿಗಳಲ್ಲಿ ಎಲ್ಲಾ ಯೋಜನೆಗೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತ ಹಾಜರಾತಿ, ವೇತನ ಮತ್ತು ಗ್ರಾಮ ಸಭೆ, ಮಕ್ಕಳ ಸಭೆ ಹಾಗೂ ಮಹಿಳಾ ಸಭೆಗಳನ್ನು ಡಿಜಿಟಲಿಕರಣದಿಂದ ಪಂಚತಂತ್ರ 2.0 ರಡಿಯಲ್ಲಿ ಅಳವಡಿಸಲಾಗುತ್ತಿದೆ, ಮಕ್ಕಳ ಓದು ಬರಹ ವಿಕಾಸಕ್ಕಾಗಿ ಸೂಸಜ್ಜಿತ ಡಿಜಿಟಲ್ ಅರಿವು ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದರು.

ನರೇಗಾ ಯೋಜನೆಯಡಿ ಸುಸಜ್ಜಿತ ಕೂಸಿನ ಮನೆ ನಿರ್ಮಿಸಿರುವುದರಿಂದ ನರೇಗಾ ಕೂಲಿ ಕಾರ್ಮಿಕರ ಮಕ್ಕಳ ಆರೈಕೆಯಲ್ಲಿ ಅನಕೂಲವಾಗಿದೆ. ಹಾಗೂ ಸರ್ಕಾರದ ಎಲ್ಲಾ ಯೋಜನೆಗಳನ್ನು ಹಾಗೂ ಸೌಲಭ್ಯಗಳನ್ನು ಗ್ರಾಮೀಣ ಭಾಗದ ಕಟ್ಟಕಡೆಯ ಜನ ಸಾಮಾನ್ಯರಿಗೂ ಕೂಡಾ ತಲುಪಿಸುವ ನಿಟ್ಟಿನಲ್ಲಿ ಚುನಾಯಿತ ಪ್ರತಿನಿಧಿಗಳ ಹಾಗೂ ಗ್ರಾಮ ಪಂಚಾಯತಿಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರ ಸಹಕಾರದಿಂದ ಲೋಕತಂತ್ರ ವ್ಯವಸ್ಥೆ ಹಾಗೂ ಸ್ಥಳಿಯ ಆಡಳಿತ ಸದೃಢ ಮಾಡಲು ಕೈಜೊಡಿಸಲು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಿವಿಧ ಯೋಜನೆಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಪ್ರಶಂಸನಾ ಪತ್ರವನ್ನು ನೀಡಿ ಗೌರವಿಸಲಾಗಿತು. ಕರ ವಸೂಲಿಯಲ್ಲಿ ಅತಿ ಹೆಚ್ಚು ಕರ ಸಂಗ್ರಹ ಮಾಡಿರುವ ಸೇಡಂ ತಾಲ್ಲೂಕಿನ ಊಡಗಿ ಗ್ರಾ.ಪಂ, ಆಳಂದ ತಾಲ್ಲೂಕಿನ ಮೋಘಾ(ಕೆ), ಅಫಜಲಪೂರ ತಾಲ್ಲೂಕಿನ ಗೌರ ಬಿ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಗೌರವಿಸಲಾಯಿತು.

# ಬಿಸಿಲಲ್ಲಿ ಬೆಂದ ಕಲಬುರಗಿಗೆ ಮಳೆಯ ಸಿಂಚನ



**ಕಲಬುರಗಿ, ಏ.25–** ಬೇಸಿಗೆಯ ಬಿರುಬಿಸಿಲಿನ ಸಂದರ್ಭದಲ್ಲಿ ಬೆಳಂಬೆಳಿಗ್ಗೆಯೇ ಚುರುಗುಡುವ ಬಿಸಿಲಿನ ತಾಪವು ಮಧ್ಯಾಹ್ನದ ವೇಳೆಗೆ ತಾಪಮಾನ ಗರಿಷ್ಠ ಮಟ್ಟದಲ್ಲಿ ಹೆಚ್ಚಿ ಜನಸಾಮಾನ್ಯರು ಪರದಾಡುವಂತಹ ಸಂದರ್ಭದಲ್ಲಿ ಶುಕ್ರವಾರ ಸಂಜೆ ಸುರಿದ ಗುಡುಗು, ಸಿಡಿಲು ಮಿಶ್ರಿತ ಮಳೆಯ ಆರ್ಭಟವು ತಂಪಾದ ವಾತಾವರಣ ನಿರ್ಮಾಣ ಮಾಡಿತು.

ಕಳೆದ ಮೂರು ದಿನಗಳಿಂದಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕದ ಕೇಂದ್ರ ಸ್ಥಾನವಾದ ಕಲಬುರಗಿ ಜಿಲ್ಲೆಯಲ್ಲಿ ಗರಿಷ್ಠ 42, 43 ಮತ್ತು 44.9ಡಿಗ್ರಿ ಸೆಲ್ಸಿಯಸ್‌ನಷ್ಟು ತಾಪಮಾನ ದಾಖಲಾಗುವ ಮೂಲಕ ಬಿಸಿಲಿನ ಹೊಡೆತಕ್ಕೆ ಜನಸಾಮಾನ್ಯರು ತತ್ತರಿಸುತ್ತಿದ್ದರು. ಅಂತಹ ಸಂಕಷ್ಟವನ್ನು ಸಂಜೆ ಸುರಿದ ಮಳೆಯು ನಿವಾರಿಸಿತು. ಸಂಜೆ ಸುಮಾರು ಅರ್ಧ ಗಂಟೆಯ ಕಾಲಕ್ಕೆ ಸುರಿದ ಬಿರುಸಿನ ಮಳೆಯಿಂದಾಗಿ ಬಿಸಿಲಿನ ಪ್ರಖರತೆ ಹೋಗಿ ತಂಪು ವಾತಾವರಣ ಮೂಡಿತು. ರಸ್ತೆ ಮೇಲೆ ಮಳೆ ನೀರು ಬಿಸಿಯಾಗಿ ಹರಿದು ಇಡೀ ಪ್ರದೇಶದಲ್ಲಿ ತಂಪು ಗಾಳಿ ಹೊರಸೂಸಿತು. ಇದರಿಂದ ಜನಸಾಮಾನ್ಯರು ಖುಷಿ ಪಟ್ಟರು. ಬೆಳಿಗ್ಗೆ 7–30ರಿಂದಲೇ ಚುರುಗುಟ್ಟುವ ಬಿಸಿಲಿನಿಂದ ಜನರು ಹಾಗೂ ಹೀಗೂ ತಮ್ಮ ದೈನಂದಿನ ಕಾರ್ಯಗಳಲ್ಲಿ ತೊಡಗುತ್ತಿದ್ದು, ಮಧ್ಯಾಹ್ನದ ವೇಳೆಗೆ ಅಯ್ಯೋ, ಅಪ್ಪಾ, ಉಶ್ ಎಂದು ಬಿಸಿಲಿನ ತಾಪಕ್ಕೆ ಗೋಳನ್ನು ಸಾರ್ವಜನಿಕರು ವ್ಯಕ್ತಪಡಿಸುತ್ತಿದ್ದಾರೆ.

# ಬೆಲೆ ಏರಿಕೆಯೇ ಸಿದ್ದರಾಮಯ್ಯ ಸರ್ಕಾರದ 6ನೇ ಗ್ಯಾರಂಟಿ: ವಿಜಯೇಂದ್ರ

**ಯಾದಗಿರಿ, ಏ.25–** ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಬಡವರು ಪರದಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಶಾಸಕ ಬಿ.ವೈ. ವಿಜಯೇಂದ್ರ ಅವರು ಎಂದು ಅವರು ತಿಳಿಸಿದರು.

ಜನಾಕ್ರೋಶ ಯಾತ್ರೆ ಸಂಬಂಧ ಬೃಹತ್ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರು 5 ಗ್ಯಾರಂಟಿಗಳನ್ನು ಕೊಟ್ಟಿದ್ದು, 6ನೇ ಗ್ಯಾರಂಟಿಗೆ ಹೆಚ್ಚು ಪ್ರಚಾರ ಕೊಟ್ಟಿಲ್ಲ; ಅದುವೇ ಬೆಲೆ ಏರಿಕೆಯ ಗ್ಯಾರಂಟಿ ಎಂದು ವ್ಯಂಗ್ಯವಾಡಿದರು. ರಾಜ್ಯದ ಕಾಂಗ್ರೆಸ್ ಸರಕಾರವು 50ಕ್ಕೂ ಹೆಚ್ಚು ಅಗತ್ಯ ವಸ್ತುಗಳ ಬೆಲೆ ಏರಿಸಿದ್ದರಿಂದ ಜನಸಾಮಾನ್ಯರು, ರೈತರು, ಬಡವರು ಜೀವನ ಸಾಗಿಸುವುದೇ ಕಷ್ಟವಾಗಿದೆ. ಉಗ್ರರ ವಿರುದ್ಧ ಪ್ರಧಾನಿಯವರ ದಿಟ್ಟ ಕ್ರಮದ ವಿಶ್ವಾಸ : ಕಾಶ್ಮೀರದಲ್ಲಿ ಹಿಂದೂ ಪಂಡಿತರಿಗೆ ಅವಮಾನ ಮಾಡಿದ, ಸೈನಿಕರ ಸಾವಿಗೆ ಕಾರಣವಾದ 370ನೇ ವಿಧಿಯನ್ನು ಬಿಜೆಪಿ ಸರಕಾರ ರದ್ದು ಮಾಡಿದೆ. ನಿನ್ನೆ ನಡೆದ ಭಯೋತ್ಪಾದಕರ ದಾಳಿ ಘಟನೆಯ ಮಾಹಿತಿ ತಿಳಿದ ಪ್ರಧಾನಿ ನರೇಂದ್ರ ಮೋದಿಯವರು ಸೌದಿ ಅರೇಬಿಯದಿಂದ ಧಾವಿಸಿ ಬಂದಿದ್ದಾರೆ ಎಂದು ವಿಜಯೇಂದ್ರ ಅವರು ವಿವರಿಸಿದರು. ಹಿಂದೂಗಳ ಮಾರಣಹೋಮದ ವಿಚಾರ ತಿಳಿದಾಕ್ಷಣ ಅಮಿತ್ ಶಾ, ಅಧಿಕಾರಿಗಳನ್ನು ಕಳಿಸಿದ್ದಾರೆ. ನಾವೆಲ್ಲರೂ ಹಿಂದೂಗಳು ಮೊದಲು. ಆ ಜಾತಿ, ಈ ಜಾತಿ ಅಲ್ಲ; 28 ಜನರ ಹತ್ಯೆಗೆ ಪಾಕಿಸ್ತಾನ ಬೆಲೆ ತೆರಲೇಬೇಕು ಎಂದು ನುಡಿದರು. ಉಗ್ರರ ವಿರುದ್ಧ ಪ್ರಧಾನಿಯವರು ದಿಟ್ಟ ಕ್ರಮ ಕೈಗೊಳ್ಳಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಪೆಟ್ರೋಲ್, ಸ್ಟಾಂಪ್ ಡ್ಯೂಟಿ ದರ ಏರಿಸಿದ್ದಾರೆ ಎಂದು ಖಂಡಿಸಿದರು. ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದಾಗ ರೈತರು ಹೊಲಕ್ಕೆ ವಿದ್ಯುತ್ ಸಂಪರ್ಕ ಪಡೆಯಲು 25 ಸಾವಿರ ಕಟ್ಟಿದರೆ ಸಾಕಿತ್ತು. ಇವತ್ತು ಕಾಂಗ್ರೆಸ್ಸಿನ ಸಿದ್ದರಾಮಯ್ಯನವರ ಆಡಳಿತದಲ್ಲಿ 2.5 ಲಕ್ಷದಿಂದ 3 ಲಕ್ಷ ಕಟ್ಟಬೇಕಾಗಿದೆ ಎಂದರು.

**ಬಡವರ, ರೈತರ ಮೇಲೆ ಹೊರೆ ಆಗಿದೆ:** ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರವು 6 ಸಾವಿರ ಹಾಗೂ ಯಡಿಯೂರಪ್ಪ ಅವರು 4 ಸಾವಿರ ಕೊಡುತ್ತಿದ್ದರು. ಅದನ್ನೂ ಈಗ ನಿಲ್ಲಿಸಿದ್ದಾರೆ. ಗ್ರಾಮೀಣ ಭಾಗದಲ್ಲಿ ಬಡವರು ರಕ್ತಪ–ರೀಕ್ಷೆ ಮಾಡಿಸಿಕೊಳ್ಳಲು 3ರಿಂದ 4 ಪಟ್ಟು ಹೆಚ್ಚು ದರ ಕೊಡಬೇಕಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಹಾಲಿನ ಮೇಲೆ 9 ರೂ. ಹೆಚ್ಚಿಸಿದ್ದಾರೆ. ಪೆಟ್ರೋಲ್ ಮೇಲೆ 3 ರೂ, ಡೀಸೆಲ್ ಮೇಲೆ 5.50 ರೂ. ಹೆಚ್ಚಿಸಿದ್ದಾರೆ ಎಂದು ದೂರಿದರು.

**ಜಾತಿ– ಜಾತಿಗಳ ನಡುವೆ ಕಂದಕ ನಿರ್ಮಿಸುವ ಕಾರ್ಯ :** ಅಭಿವೃದ್ಧಿ ಕೆಲಸ ಕಾರ್ಯ ಶೂನ್ಯವಾಗಿದೆ. ಸಮಾಜ– ಸಮಾಜಗಳ ನಡುವೆ ಈ ಸರಕಾರ ವಿಷಬೀಜ ಬಿತ್ತುತ್ತಿದೆ. ಜಾತಿ– ಜಾತಿಗಳ ನಡುವೆ ಕಂದಕ ನಿರ್ಮಿಸುವ ಕಾರ್ಯವನ್ನು ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದು ವಿಜಯೇಂದ್ರ ಅವರು ಟೀಕಿಸಿದರು.

ಈ ಸರಕಾರ ಅಧಿಕಾರಕ್ಕೆ ಬಂದು 2 ವರ್ಷವಾಗುತ್ತಿದ್ದು, ಅಭಿವೃದ್ಧಿ ಕಾರ್ಯಕ್ಕೆ ಯಾವುದೇ ಹಣ ನೀಡುತ್ತಿಲ್ಲ ಎಂದು ಆಕ್ಷೇಪಿಸಿದರು. ಬಿಜೆಪಿ ಸರಕಾರ ಇದ್ದಾಗ ಯಡಿಯೂರಪ್ಪ ಅವರು ಯಾದಗಿರಿ ಜಿಲ್ಲೆ ಘೋಷಿಸಿ ನೂರಾರು ಕೋಟಿ ಅಭಿವೃದ್ಧಿ ಮೊತ್ತ ನೀಡಿದ್ದಾರೆ ಎಂದು ವಿವರಿಸಿದರು.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಬಿ. ಶ್ರೀರಾಮುಲು, ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಪದಾಧಿಕಾರಿಗಳು, ಮಂಡಲ ಅಧ್ಯಕ್ಷರು ಮತ್ತು ಪಕ್ಷದ ಮುಖಂಡರು ಪಾಲ್ಗೊಂಡಿದ್ದರು.




**ಯಾದಗಿರಿಯಲ್ಲಿ ನಡೆದ ಜನಾಕ್ರೋಶ ರ್‍ಯಾಲಿಯಲ್ಲಿ ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿದರು. ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಪರಿಷತ್ ಸದಸ್ಯ ಎನ್.ರವಿಕುಮಾರ ಮತ್ತಿತರ ಪ್ರಮುಖರಿದ್ದರು.**

# ಪಹಲ್ಗಾಮ್ ದಾಳಿ ಖಂಡಿಸಿ ಎಬಿವಿಪಿ ಪ್ರತಿಭಟನೆ

**ಬೀದರ್, ಏ.25–** ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಭಯೋತ್ಪಾದಕರ ದಾಳಿಯನ್ನು ಖಂಡಿಸಿ ಹಾಗೂ ದಾಳಿ ಕೋರರ ಮೇಲೆ ಕಠಿಣ ಕ್ರಮ ಕೈಗೊಳ್ಳುವಂತೆ ಔರಾದ ಎಬಿವಿಪಿ ಕಾರ್ಯಕರ್ತರು ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ಮಾಡಿದರು.

ಜಮ್ಮು ಕಾಶ್ಮೀರದ ಪಹಲ್ಗಾಮದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರರ ಹೇಡಿತನದ ಗುಂಡಿನ ದಾಳಿಯ ಕೃತ್ಯವನ್ನು ಎಬಿವಿಪಿ ಔರಾದ[ಬಾ] ಶಾಖೆಯು ತೀವ್ರವಾಗಿ ಖಂಡಿಸುತ್ತದೆ. ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವೆಂಬುದು ಸಾರ್ವ ಕಾಲಿಕ ಸತ್ಯ, ಅಲ್ಲಿನ ಉಗ್ರವಾದಿಗಳನ್ನು ಹಿಡಿದು ಹೇಡೆ ಮುರಿಯಬೇಕು. ಪ್ರತ್ಯೇಕವಾದದ ಮನಸ್ಥಿತಿಯನ್ನು ಬದಲಾಯಿಸಲು ಹಾಗೂ ಜನ–ಜೀವನ ಸ್ಥಿತಿಗತಿ ಗಳನ್ನು ಸ್ಥಿರಗೊಳಿಸಿ ಶಾಂತಿಯುತ ಕಾಶ್ಮೀರವೆಂಬುದನ್ನು ಖಚಿತ ಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಈಗಾಗಲೇ ಸಾಕಷ್ಟು ಕ್ರಮಗಳನ್ನು ತೆಗೆದು ಕೊಂಡಿ ರುತ್ತದೆ. ಆದರೂ ಸಹ ಅಲ್ಲಿನ ಭಯೋ ತ್ಪಾದಕರ ನುಸುಳು ಕೋರರ ಹಾವಳಿ ತಡೆಗಟ್ಟಲು ಸಾಧ್ಯವಾಗಿಲ್ಲ. ಇತ್ತೀಚಿಗೆ ವಲಸೆ ಕಾರ್ಮಿಕರ ಮೇಲಿನ ದಾಳಿಗಳು ಹಾಗೂ 27 ಜನ ಪ್ರವಾಸಿಗರ ಮೇಲಿನ ದಾಳಿ ಗಮನಿಸುವುದಾದರೆ ಕಾಶ್ಮೀರದ ಶಾಂತಿ ಮತ್ತು ಭಾರತದೊಂದಿಗೆ ಏಕತೆಗೆ ಉಗ್ರರು ಅರ್ಥಾತ್ ಪ್ರತ್ಯೇವಾದಿಗಳು ತೀವ್ರ ಸವಾಲುವೊಡ್ಡು ತಿರುವುದು ಸಂಗತಿಯಾಗಿದೆ. ಆದ್ದರಿಂದ ಕೇಂದ್ರ ಸರ್ಕಾರ ಉಗ್ರರ ವಿರುದ್ಧ ವ್ಯಾಪಕ ಕಠಿಣ ಕ್ರಮಗಳನ್ನು ಕೈಗೊಂಡು ತಕ್ಕ ಉತ್ತರವನ್ನು ನೀಡಬೇಕೆಂದು ಅಖಿಲ ಭಾರತಿಯ ವಿದ್ಯಾರ್ಥಿ ಪರಿಷತ್ ಹಿರಿಯ ಕಾರ್ಯಕರ್ತ ಅಂಬಾದಾಸ ನಳಗೆ ಮಾತನಾಡಿ ಆಗ್ರಹಿಸಿದರು.

ವಿಶ್ವ ಹಿಂದೂ ಪರಿಷತ್ ಅಧ್ಯಕ್ಷ ರಾಜಕುಮಾರ ನಾಯ್ಕು ಮಾತನಾಡಿ ರಾಷ್ಟ್ರದಲ್ಲಿ ಭಯೋತ್ಪಾದಕರ ಹಾವಳಿ ತಡೆಗಟ್ಟಬೇಕು ಪಾಕಿಸ್ತಾನಿ ಉಗ್ರಗಾಮಿ ಗಳಿಗೆ ಹಿಡಿದು ಹೇಡೆಮುರಿಯಬೇಕು ಪಾಕಿಸ್ತಾನ ಸಂಪರ್ಕ ಮುಟುಕುಗೊಳಿಸಬೇಕು ಗಡಿಯಲ್ಲಿ ಭದ್ರತಾ ಸೈನ್ಯದ ಕಾರ್ಯ ಚುರುಕುಗೊಳಿಸಬೇಕು ನಿನ್ನೆ ನಡೆದ ಪ್ರವಾಸಿ ಸ್ಥಳದಲ್ಲಿ ಪ್ರಾಣ ಆಹುತಿಯಾದ ಹಿಂದೂ ಕುಟುಂಬದವರಿಗೆ ನ್ಯಾಯ ಒದಗಿಸಬೇಕು ಎಂದು ನುಡಿದು ಗ್ರೇಡ್ 2 ತಹಶಿಲ್ದಾರ ವೆಂಕಟೇಶ ಅವರ ಮುಖಾಂತರ ದೇಶದ ಗೃಹ ಸಚಿವರಿಗೆ ಮನವಿ ಪತ್ರ ಸಲ್ಲಿಸಲಾಯಿತು.




# ಮಗುವಿನ ಒಂದು ವರ್ಷದ ವಯಸ್ಸಿನೊಳಗೆ ತಪ್ಪದೇ ಎಲ್ಲಾ ಲಸಿಕೆ ಹಾಕಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು

ಬಳ್ಳಾರಿ,ಏ.25–ಮಗುವಿನ ಜನನದ ನಂತರ 12 ಮಾರಕ ರೋಗಗಳ ತಡೆಗಟ್ಟಲು ಎಲ್ಲಾ ಲಸಿಕೆಗಳನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡಲಾಗುತ್ತಿದ್ದು, ಪಾಲಕರು ತಪ್ಪದೇ ತಮ್ಮ ಮಕ್ಕಳಿಗೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಬಾಲಕ್ಷಯ ತಡೆಗಟ್ಟಲು ಬಿಸಿಜಿ, ಪೋಲಿಯೋ ರೋಗ ತಡೆಗಟ್ಟಲು ಪೋಲಿಯೋ ಹನಿ, ಕಾಮಾಲೆ ರೋಗ ತಡೆಗಟ್ಟಲು ಹೆಪಟೈಟೀಸ್ ಹಾಗೂ ನವಜಾತ ಶಿಶುವಿನ ದೇಹದ ಒಳಗಡೆ ಆಂತರಿಕ ರಕ್ತಸ್ರಾವ ಸಾಧ್ಯತೆಗಳನ್ನು ತಡೆಗಟ್ಟಲು ವಿಟಮಿನ್–ಕೆ ಚುಚ್ಚುಮದ್ದನ್ನು ಮೊದಲ ದಿನವೇ ನೀಡಲಾಗುತ್ತದೆ. ನಂತರ ವಯಸ್ಸಿಗೆ ಅನುಸಾರವಾಗಿ ಮಾರಕ ರೋಗಗಳನ್ನು ತಡೆಗಟ್ಟಲು ಒಂದು ವರ್ಷದೊಳಗಡೆ ಎಲ್ಲಾ ಲಸಿಕೆಗಳನ್ನು ಉಚಿತವಾಗಿ ಹಾಕಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಗುಗ್ಗರಹಟ್ಟಿ ಇವರ ಆಶ್ರಯದಲ್ಲಿ ನಗರದ ಬಂಡಿಮೋಟ್‌ನ ಬುಡ ಬುಡಿಕೆಯವರ ಓಣಿಯಲ್ಲಿ ವಿಶ್ವ ಲಸಿಕಾ ಸಪ್ತಾಹದ ಅಂಗವಾಗಿ ಲಸಿಕಾ ಸ್ಥಳಕ್ಕೆ ಭೇಟಿ ನೀಡಿ ಅವರು ಮಾತನಾಡಿದರು.



# ಪ್ರಸ್ತುತ ಶಿಕ್ಷಣ ವ್ಯವಸ್ಥೆಯಲ್ಲಿ ನೈತಿಕತೆ, ಮಾನವೀಯ ಮೌಲ್ಯಾಧಾರಿತ ಶಿಕ್ಷಣ ಅತ್ಯವಶ್ಯ: ಶಶೀಲ್ ನಮೋಶಿ



**ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಸ್ಯಾಕ್ ಬಿಲ್ಡಿಂಗ್‌ನಲ್ಲಿ ನಡೆದ ಎಐಸಿಟಿಇ ದೇಹಲಿ ಪ್ರಾಯೋಜಿತ 3 ದಿನಗಳ ಮ್ಯಾನೇಜ್ಮೆಂಟ್ ಡೆವಲಪ್ಮೆಂಟ್ ಪ್ರೋಗ್ರಾಂ ಆನ್ ಯುನಿವರ್ಸಲ್ ಹ್ಯೂಮನ್ ವ್ಯಾಲ್ಯೂ ಕಾರ್ಯಕ್ರಮವನ್ನು ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಉದ್ಘಾಟಿಸಿದರು.**

**ಕಲಬುರಗಿ, ಏ.25–** ಪ್ರಸ್ತುತ ಶಿಕ್ಷಣ ವ್ಯವಸ್ಥೆಯು ಹೆಚ್ಚಾಗಿ ಕೌಶಲ್ಯ ಆಧಾರಿತವಾಗಿದೆ. ವಿಜ್ಞಾನ ಮತ್ತು ತಂತ್ರಜ್ಞಾನದ ಮೇಲೆ ಪ್ರಮುಖ ಒತ್ತು ನೀಡಲಾಗಿದೆ. ಆದಾಗ್ಯೂ, ವಿಜ್ಞಾನ ಮತ್ತು ತಂತ್ರಜ್ಞಾನವು ಸೌಲಭ್ಯಗಳ ವಿಷಯದಲ್ಲಿ ಮೌಲ್ಯಯುತವೆಂದು ಪರಿಗಣಿಸಲ್ಪಟ್ಟದ್ದನ್ನು ಸಾಧಿಸಲು ಸಾಧನಗಳನ್ನು ಒದಗಿಸಲು ಮಾತ್ರ ಸಹಾಯ ಮಾಡುತ್ತದೆ. ಮೌಲ್ಯ ಶಿಕ್ಷಣ ಹಾಗೂ ನೈತಿಕ ಶಿಕ್ಷಣ ಪ್ರಸ್ತುತ ಶಿಕ್ಷಣ ವ್ಯವಸ್ಥೆಯಲ್ಲಿ ನಿರ್ಣಾಯಕ ಕಾಣೆಯಾದ ಕೊಂಡಿಯಾಗಿದೆ ಎಂದು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ ನಮೋಶಿ ಹೇಳಿದರು.

ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಸ್ಯಾಕ್ ಬಿಲ್ಡಿಂಗ್‌ನಲ್ಲಿ ನಡೆದ ಎಐಸಿಟಿಇ ದೇಹಲಿ ಪ್ರಾಯೋಜಿತ 3 ದಿನಗಳ ಮ್ಯಾನೇಜ್ಮೆಂಟ್ ಡೆವಲಪ್ಮೆಂಟ್ ಪ್ರೋಗ್ರಾಂ ಆನ್ ಯುನಿವರ್ಸಲ್ ಹ್ಯೂಮನ್ ವ್ಯಾಲ್ಯೂ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಶಿಕ್ಷಕರು ನಿರಂತರ ಅಧ್ಯಯನ ಕೈಗೊಂಡು ಉನ್ನತ ಗುರಿಮುಟ್ಟಲು ಮಕ್ಕಳಿಗೆ ಸಹಾಯ ಮಾಡಬೇಕಾಗಿರುವುದು ಅವರ ಆದ್ಯ ಕರ್ತವ್ಯ ನಿಮ್ಮದಾಗಿದೆ.ಇಂದಿನ ದಿನಗಳಲ್ಲಿ ಶಾಲಾ ಕಾಲೇಜುಗಳ ಮುಖ್ಯಸ್ಥರು ನಿರಂತರವಾಗಿ ನವನವೀನ ಕೌಶಲ್ಯಗಳನ್ನು ಬಳಸಿಕೊಂಡು ತಾವು ಬೆಳೆಯುವದರೊಂದಿಗೆ ಸಮಾಜ ಸೇವೆಯೊಂದಿಗೆ ಸಂಸ್ಥೆಯ ಅಭಿವೃದ್ಧಿಗೆ ಕಾರಣವಾಗಬೇಕು ಎಂದು ಹೇಳಿದರು.

30 ವರ್ಷಗಳ ಹಿಂದೆ ಶಿಕ್ಷಣದಲ್ಲಿ ಮಾನವೀಯ ಮೌಲ್ಯಗಳ ಶಿಕ್ಷಣದ ಅವಶ್ಯಕತೆ ಇರಲಿಲ್ಲ ಏಕೆಂದರೆ ಅಂದಿನ ಶಿಕ್ಷಣ ಹಾಗೂ ಶಿಕ್ಷಕರು ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದರು ಆದರೆ ಇಂದು ಶಿಕ್ಷಣದಲ್ಲಿ ಮಾನವೀಯ ಮೌಲ್ಯಗಳನ್ನು ಬೋಧಿಸುವುದು ಅನಿವಾರ್ಯ ಪರಿಸ್ಥಿತಿ ಬಂದೋದಗಿದೆ.

ಸುಮಾರು 200 ಕ್ಕಿಂತಲೂ ಹೆಚ್ಚು ಈ ವಿಷಯದ ಕುರಿತ ಕೋರ್ಸಗಳಿವೆ ಎಂದು ಹೇಳಿದರು ಈ 3 ದಿನಗಳ ಶಿಬಿರದಲ್ಲಿ ನಮ್ಮ ಸಂಸ್ಥೆಯ ಎಲ್ಲಾ ಮುಖ್ಯಸ್ಥರು ಹಾಗೂ ಸಿಬ್ಬಂದಿ ಸಂಪನ್ಮೂಲ ವ್ಯಕ್ತಿಗಳ ತಿಳಿಸಿದ ವಿಷಯಗಳನ್ನು ಮನನ ಮಾಡಿಕೊಂಡು ಅದರ ಲಾಭ ಪಡೆಯಬೇಕು ಎಂದು ತಿಳಿಸಿದರು.

# ಕುರಿ ಕಾಯುತ್ತಲೇ ಯುಪಿಎಸ್‌ಸಿ ಪರೀಕ್ಷೆ ಪಾಸ್ ಮಾಡಿದ ಬೀರಪ್ಪ–ಹನುಮಂತಪ್ಪ!

**ಬೆಳಗಾವಿ, ಏ.25–** ಬೆಳಗಾವಿ ಜಿಲ್ಲೆಯ ಕಾಗಲ್ ಕುರುಬ ಕುಟುಂಬಗಳ ಇಬ್ಬರು ಯುವಕರು ಕುರಿ ಕಾಯುತ್ತಲೇ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ರ್‍ಯಾಂಕ್‌ಗಳೊಂದಿಗೆ ಉತ್ತೀರ್ಣರಾಗಿದ್ದಾರೆ. ಈ ಮೂಲಕ ತಾವು ಕಲಿತ ಶಾಲೆ, ಊರು ಹಾಗೂ ತಮ್ಮ ಕುಟುಂಬಕ್ಕೆ ಕೀರ್ತಿ ತಂದಿದ್ದಾರೆ.

ಕುರಿ ಮೇಯಿಸುತ್ತಿದ್ದ ಬೆಳಗಾವಿಯ ನಾನಾವಾಡಿಯಲ್ಲಿ ವಾಸವಿರುವ ಮಹಾರಾಷ್ಟ್ರದ ಎಮಗೆ ಗ್ರಾಮದ ಬೀರಪ್ಪ ಸಿದ್ದಪ್ಪ ಡೋಣಿ ದೇಶಕ್ಕೆ 551 ನೇ ರ್‍ಯಾಂಕ್ ಗಳಿಸಿದ್ದರೆ, ಬೆಳಗಾವಿಯ ಯರಗಟ್ಟಿ ತಾಲ್ಲೂಕಿನ ಕೊಡ್ಲಿವಾಡ ಗ್ರಾಮದ ಹನುಮಂತಪ್ಪ ಯಲ್ಲಪ್ಪ ನಂದಿ ಅವರು 910 ನೇ ರ್‍ಯಾಂಕ್ ಗಳಿಸಿದ್ದಾರೆ. ಮಹಾರಾಷ್ಟ್ರದ ಕಾಗಲ್ ತಾಲ್ಲೂಕಿನ ನೆರೆಯ ಎಮಗೆ ಗ್ರಾಮದ ಸಿದ್ದಪ್ಪ ಮತ್ತು ಬಾಲವ್ವ ಡೋಣಿ ಅವರ ಮೂರನೇ ಮಗ ಬೀರಪ್ಪ. ಬೀರಪ್ಪ ತನ್ನ ಕುರಿಗಳನ್ನು ಮೇಯಿಸುತ್ತಿದ್ದಾಗಲೇ ಯುಪಿಎಸ್‌ಸಿ ಪರೀಕ್ಷೆಯ ಫಲಿತಾಂಶ ಬಂದಿದೆ. ತಾವು ಐಎಎಸ್ ಪಾಸ್ ಮಾಡಿರುವ ಸುದ್ದಿ ಕೇಳಿ ಸಂಭ್ರಮಿಸಿದರು.

ಕುರಿಗಳನ್ನು ಮೇಯಿಸುತ್ತಾ ಯುಪಿಎಸ್‌ಸಿ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ ಬೀರಪ್ಪ ಅವರು ಮೂರನೇ ಪ್ರಯತ್ನದಲ್ಲಿ ಯುಪಿಎಸ್ ಸಿ ಪರೀಕ್ಷೆ ಮಾಡಿದ್ದಾರೆ. ಅವರ ಈ ಸಾಧನೆ ಅವರ ಕುಟುಂಬ ಮತ್ತು ಗ್ರಾಮಸ್ಥರಿಗೆ ಬಹಳ ಸಂತೋಷ ತಂದಿದೆ. ಬೆಳಗಾವಿ ಬಳಿಯ ನಾನಾವಾಡಿಯ ಹೊಲದಲ್ಲಿ ಕುರಿ ಮೇಯಿಸುತ್ತಿದ್ದಾಗ ಅವರಿಗೆ ಯುಪಿಎಸ್‌ಸಿ ಪರೀಕ್ಷೆ ಪಾಸ್ ಮಾಡಿರುವ ಸುದ್ದಿ ತಿಳಿದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೀರಪ್ಪ ಅವರ ಸಾಧನೆಗೆ ವೈಯಕ್ತಿಕವಾಗಿ ಕರೆ ಮಾಡಿ ಅಭಿನಂದಿಸಿದ್ದಾರೆ. ಅವರ ಕುಟುಂಬವು ಅವರನ್ನು ಸಾಂಪ್ರದಾಯಿಕವಾಗಿ ಆರತಿ ಮಾಡಿ ಹಾರ ಹಾಕುವ ಮೂಲಕ ಗೌರವಿಸಿತು. ಈ ಸಂದರ್ಭದಲ್ಲಿ ಆತನ ಕುಟುಂಬ ಬೀರಪ್ಪಗೆ ಕುರಿಮರಿಯನ್ನು ಉಡುಗೊರೆಯಾಗಿ ನೀಡಿತು. ಐಪಿಎಸ್ ಅಧಿಕಾರಿಯಾಗುವ ಮಹತ್ವಾಕಾಂಕ್ಷೆಯನ್ನು ಬೀರಪ್ಪ ವ್ಯಕ್ತಪಡಿಸಿದ್ದಾರೆ.

ಇನ್ನು ಯರಗಟ್ಟಿ ತಾಲ್ಲೂಕಿನ ಕೊಡ್ಲಿವಾಡ ಗ್ರಾಮದ ಹನುಮಂತಪ್ಪ ಯಲ್ಲಪ್ಪ ನಂದಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಸುದ್ದಿ ತಿಳಿಯುತ್ತಿದ್ದಂತೆ, ಕೋಳಿವಾಡ ಗ್ರಾಮಸ್ಥರು ಸಂಭ್ರಮಿಸಿದರು. ಅವರ ತಂದೆ ಯಲ್ಲಪ್ಪ, ತಾಯಿ ಕಾಳವ್ವ, ಪತ್ನಿ ಯಶೋಧ, ಸಹೋದರ ಆನಂದ್ ಮತ್ತು ಇತರ ಕುಟುಂಬ ಸದಸ್ಯರು ಹರ್ಷ ವ್ಯಕ್ತಪಡಿಸಿದರು.

ಹನುಮಂತ ಅವರ ಸಾಧನೆಗೆ ಇಡೀ ಗ್ರಾಮವೇ ಹೆಮ್ಮೆ ಪಡುತ್ತಿದೆ. ಹನುಮಂತ ಎಲ್ಲಾ ಅಡೆತಡೆಗಳನ್ನು ಮೀರಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಮೂಲಕ ಹೆತ್ತವರು ಹೆಮ್ಮೆ ಪಡುವಂತೆ ಮಾಡಿದ್ದಾರೆ.

ಹನುಮಂತ ಅವರು ತನ್ನ ಹುಟ್ಟೂರು ಕೊಡ್ಲಿವಾಡದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1 ರಿಂದ 7ನೇ ತರಗತಿಯ ವರೆಗೆ ಅಧ್ಯಯನ ಮಾಡಿದರು. ನಂತರ 8 ರಿಂದ 10 ನೇ ತರಗತಿವರೆಗೆ ಸತ್ತಿಗೇರಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಓದಿದರು. ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಪಿಯುಸಿ ಪಡೆದರು ಮತ್ತು ಬೆಳಗಾವಿಯ ಗೋಗ್ಟೆ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ (ಜಿಐಟಿ) ಯಿಂದ ಮೆಕ್ಯಾನಿಕಲ್ ಎಂಜಿನಿಯರಿಂಗ್ ನಲ್ಲಿ ಬಿಇ ಪದವಿ ಪಡೆದಿದ್ದಾರೆ.



# ಜೋಳ ಖರೀದಿ: ಹೆಚ್ಚುವರಿ ನೋಂದಣಿ ಖರೀದಿ ಕೇಂದ್ರ ಆರಂಭ– ಸಕೀನ

**ಬಳ್ಳಾರಿ,ಏ.25–**ಜಿಲ್ಲೆಯಲ್ಲಿ 2024–25 ನೇ ಸಾಲಿನ ಹಿಂಗಾರು ಋತುವಿನಲ್ಲಿ ಬೆಳೆದ ಜೋಳವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ಖರೀದಿಸಲು ಈಗಾಗಲೇ ತೀರ್ಮಾನಿಸಲಾಗಿದ್ದು, ಪ್ರಸ್ತುತ ಇರುವ 10 ಖರೀದಿ ಕೇಂದ್ರಗಳ ಜೊತೆಗೆ 02 ಹೆಚ್ಚುವರಿ ನೋಂದಣಿ ಮತ್ತು ಖರೀದಿ ಕೇಂದ್ರ ತೆರೆಯಲಾಗಿದೆ.

**ಹೆಚ್ಚುವರಿ ರೈತ ನೋಂದಣಿ ಮತ್ತು ಖರೀದಿ ಕೇಂದ್ರ:–**ಸಿರುಗುಪ್ಪ ತಾಲ್ಲೂಕಿನ ಮುದ್ದಟನೂರು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮತ್ತು ಅರಳಿಗನೂರು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ. ಬೆಂಬಲ ಬೆಲೆ ಯೋಜನೆ ಬಗ್ಗೆ ರೈತರಿಗೆ ಯಾವುದೇ ಸಮಸ್ಯೆಗಳಿದ್ದರೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಹಾಗೂ ತಾಲ್ಲೂಕಿನ ತಹಸಿಲ್ದಾರ್, ಕೃಷಿ ಅಧಿಕಾರಿ, ಎ.ಪಿ.ಎಂ.ಸಿ ಕಾರ್ಯದರ್ಶಿ, ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತದ ಸೈಯದ್ ವಸೀಮ್ ಪಾಷ (ಮೊ.9449864453) ಗೆ ಸಂಪರ್ಕಿಸಬಹುದು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ನಮ್ಮ ಹೋರಾಟ ಮುಸ್ಲಿಮ್‌ರ ವಿರುದ್ಧ ಅಲ್ಲ: ರಕ್ತಪಿಪಾಸು ಭಯೋತ್ಪದಕರು–ವಕ್ಫ್ ವಿರುದ್ಧ: ಈಶ್ವರಸಿಂಗ್ ಠಾಕೂರ

**ಬೀದರ್, ಏ.25–** ಕಾಶ್ಮೀರದ ಪಹಲ್ಗಾಮ್ ನಲ್ಲಿ ಮಂಗಳವಾರ ವಿಶೇಷವಾಗಿ ಹಿಂದು ಪ್ರವಾಸಿಗರ ಮೇಲೆ ನಡೆದ ಕ್ರೂರ ದಾಳಿ ಖಂಡನೀಯ ಹಾಗೂ ನಿಂದನಿಯವಾಗಿದ್ದು, ಇದು ವ್ಯವಸ್ಥಿತವಾದ ದಾಳಿಯಂತಿದೆ. ನಮ್ಮ ಹೋರಾಟ ಮುಸ್ಲಿಮರ ವಿರುದ್ಧ ಅಲ್ಲ. ಭಯೋತ್ಪದಕರು ಮತ್ತು ಮುಸ್ಲಿಮರನ್ನು ಸುಲಿಗೆ ಮಡುವ ವಕ್ಫ್ ವಿರುದ್ಧವಾಗಿದೆ ಎಂದು ಬಿಜೆಪಿ ಸ್ಥಳಿಯ ಹಿರಿಯ ಮುಖಂಡ ಈಶ್ವರಸಿಂಗ್ ಠಾಕೂರ್ ಅವರು ತಿಳಿಸಿದರು.

ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹತ್ಯೆ ಮಾಡುವ ಮುನ್ನ ಅವರ ಐಡಿ ಹಾಗೂ ಧರ್ಮವನ್ನು ತಿಳಿದು ಹತ್ಯೆ ಮಾಡಿದ್ದು ಪೈಶಾಚಿಕ ಕೃತ್ಯ. ದೇಶದ ಏಕತೆ ಹಾಗೂ ಅಖಂಡತೆಗೆ ಧಕ್ಕೆಯುಂಟು ಮಾಡಲು ಇಂಥ ದುಷ್ಕೃತ್ಯ ಎಸಗಲಾಗಿದೆ.

ಜಗತ್ತಿನಲ್ಲಿ ಭಾರತದ ಕೀರ್ತಿ ಹೆಚ್ಚಾಗುತ್ತಿದ್ದು, ಎಲ್ಲ ದೇಶಗಳು ಭಾರತದ ಏಳಿಗೆಯನ್ನು ಮುಕ್ತಕಂಠದಿಂದ ಹೊಗಳುತ್ತಿದ್ದುದು ಈ ರಾಕ್ಷಸರಿಗೆ ಸಹಿಸಲಿಕ್ಕಾಗುತ್ತಿಲ್ಲ. ಈ ನರಭಕ್ಷಕರು ಇಂಥ ಹೇಡಿ ಕೆಲಸ ಮಾಡಿದರೂ ನಮ್ಮ ಕೇಂದ್ರ ಸರ್ಕಾರ ಈ ಹೇಡಿಗಳಿಗೆ ಜಗ್ಗುವುದಿಲ್ಲ, ಬಗ್ಗುವುದಿಲ್ಲ, ಕುಗ್ಗುವುದೂ ಇಲ್ಲ. ಆ ನರರಾಕ್ಷಸರ ಹೆಡೆ ಮುರಿ ಕಟ್ಟಲು ನಮ್ಮ ಸೇನೆ ಸನ್ನದ್ಧವಾಗಿದೆ. ನಮ್ಮ ಯೋಧರ ಮೇಲೆ ನಮಗೆ ನಂಬಿಕೆ ಹಾಗೂ ಆತ್ಮವಿಶ್ವಾಸವಿದೆ ಎಂದರು.

ವಕ್ಫ್ ಕಾಯಿದೆ ತಿದ್ದುಪಡಿ ವಿರೂದ್ಧ ಅಖಿಲ ಭಾರತೀಯ ಮುಸ್ಲಿಮ್ ವಯಕ್ತಿಕ ಕಾನೂನು ಮಂಡಳಿ ಹೋರಾಟ ಮಾಡಲು ಮುಂದಾಗಿರುವುದಕ್ಕೆ ನಮ್ಮ ಆಕ್ಷೇಪವಿಲ್ಲ. ನಮ್ಮ ಸಂವಿಧಾನದ ಪ್ರಕಾರ ಎಲ್ಲರಿಗೂ ಹೋರಾಟ ಮಾಡುವ ಅಧಿಕಾರ ಇದೆ. ಆದರೆ ಹೋರಾಟ ಕಾನೂನಿನ ಚೌಕಟ್ಟಿಲ್ಲಿ ಆಗಬೇಕು. ಈಗಾಗಲೇ ದೇಶದ ವಿವಿಧ ಕಡೆಗಳಲ್ಲಿ ಪರ್ಸನಲ್ ಲಾ ಬೋರ್ಡ ವತಿಯಿಂದ ನಡೆದ ಹೋರಾಟಗಳಲ್ಲಿ ಗಲಾಟೆಗಳು ಆಗಿವೆ. ಎಲ್ಲಲ್ಲಿ ಪ್ರತಿಭಟನೆಗಳು ಆಗಿವೆ ಅಲ್ಲಿ ದೊಂಬಿ, ಗಲಾಟೆಯೊಂದಿಗೆ ಹತ್ಯೆಗಳು ಕೂಡ ನಡೆದಿವೆ. ಪಶ್ಚಿಮ ಬಂಗಾಳದಲ್ಲಿ ಹಿಂದುಗಳ ಮೇಲೆ ದಾಳಿ ನಡೆದಿವೆ ಇದಕ್ಕೆ ಮುರ್ಶಿದಾಬಾದ ಘಟನೆಯೆ ಸಾಕ್ಷಿಯಾಗಿದೆ. ಈಗಾಗಲೆ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿ ಹೋರಾಟಕ್ಕೆ ನಮ್ಮ ಅಭ್ಯಂತರವಿಲ್ಲ. ಆದರೂ ಕೂಡ ಬೀದರ್ ಅತಿ ಸೂಕ್ಷ್ಮವಾದ ಸ್ಥಳವಾಗಿದೆ. ಈ ಹಿಂದೆ ಇಲ್ಲಿ ಅನೇಕ ಘಟನೆಗಳಾಗಿವೆ. ಬೀದರ್ ಶಾಂತಿ ಯುತ ನಗರವಾಗಿದೆ. ಇಲ್ಲಿ ದೊಡ್ಡ ಮಟ್ಟದ ಪ್ರತಿ ಭಟನೆಗೆ ಅವಕಾಶ ನೀಡಬಾರದು ಎಂದು ಮನವಿ ಮಾಡಿದ್ದೇನೆ. ಒಂದು ವೇಳೆ ಸರ್ಕಾರಕ್ಕೆ ಮಣಿದು ಅನುಮತಿ ನೀಡಿದರೆ ಸೂಕ್ಷ್ಮ ಪ್ರದೇಶದಲ್ಲಿ ಜನರ ಸುರಕ್ಷತೆಗೆ ವ್ಯವಸ್ಥೆ ಮಾಡಬೇಕು. ಹೋರಾಟಕ್ಕೆ ಕರೆ ನೀಡಿದವರಿಂದ ಬಾಂಡ್ ಮಾಡಿಸಿ ಅವರನ್ನು ಹೊಣೆಗಾರರಾಗಿ ಮಾಡಬೇಕು. ಯಾವುದೇ ರೀತಿಯ ಅಶಾಂತಿ ಆಗಬಾರದು. ಜಿಲ್ಲಾಡಳಿತ ಗಮನಿಸ ಬೇಕು. ಸಾವಿರಾರು ಸಂಖ್ಯೆಯಲ್ಲಿ ಜನ ಸೇರಿ ಗೊಂದಲ ಸೃಷ್ಟಿಸುವುದು ಸರಿಯಲ್ಲ ಇದಕ್ಕೆ ಜಿಲ್ಲಾಡಳಿತ ಸೂಕ್ತ ವ್ಯವಸ್ಥೆ ಮಾಡಬೇಕೆಂದು ಅವರು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಡಾ. ವಿಶ್ವನಾಥ ಉಪ್ಪೆ, ವೆಂಕಟ ಚಿದ್ರಿ ಮುಂತಾದವರು ಉಪಸ್ಥಿತರಿದ್ದರು.



**ಬಿಜೆಪಿ ಮುಖಂಡ ಈಶ್ವರ ಸಿಂಗ್ ಠಾಕೂರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.**

## ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿ ಸಹಯೋಗ

# ಬಳ್ಳಾರಿಯಲ್ಲಿ ವಿಶ್ವಜಲ–ಭೂ ದಿನಾಚರಣೆ

**ಬಳ್ಳಾರಿ, ಏ.25–** ಬಳ್ಳಾರಿಯ ಬೆಸ್ಟ್ ಕಾಲೇಜಿನಲ್ಲಿ ವಿಶ್ವಜಲ ಮತ್ತು ಭೂ ದಿನಾಚರಣೆಯನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿ, ಬಳ್ಳಾರಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಆಚರಿಸಲಾಯಿತು. ಈ ಕಾರ್ಯಕ್ರಮಕ್ಕೆ ಮುಖ್ಯ ಉದ್ಘಾಟಕರಾಗಿ ಆಗಮಿಸಿದ ರಾಜೇಶ್ ಎನ್. ಹೊಸಮನಿ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಇವರು ಸಸಿಗೆ ನೀರೆರೆಯುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ನೀರು ಅಮೃತಕ್ಕೆ ಸಮಾನ ಅದನ್ನು ಉಳಿಸುವುದು ಗಳಿಸುವುದು ಮಿತವಾಗಿ ಬಳಸುವುದು ಅತ್ಯಗತ್ಯವಾಗಿದೆ. ಇರುವುದೊಂದೇ ಭೂಮಿ ಅದನ್ನು ಸಂರಕ್ಷಿಸಬೇಕಾಗಿದೆ. ಪರಿಸರವನ್ನು ಮಾಲಿನ್ಯವಿಲ್ಲದಂತೆ ನೋಡಿಕೊಳ್ಳಬೇಕಾಗಿದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಟಿ.ಎಮ್. ಸಿದ್ದೇಶ್ವರ ಬಾಬು , ಪರಿಸರ ಅಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ , ಬಳ್ಳಾರಿ ಇವರು ವಿಶ್ವ ಜಲ ಮತ್ತು ಭೂ ದಿನಾಚರಣೆಯ ಮಹತ್ವವನ್ನು ವಿವರಿಸಿದರು. ನಂತರ ಕೆ ಸೋಮಶೇಖರ್, ಕ್ಷೇತ್ರ ಸಹಾಯಕರು, ಕರಾಮಾನಿಮಂ, ಬಳ್ಳಾರಿ ಸ್ವಾಗತ ಭಾಷಣ ಮಾಡಿ “ಮರವನ್ನು ಮಗುವಿನಂತೆ ನೋಡಿಕೊಳ್ಳಬೇಕು, ಭೂಮಿಯನ್ನು ತಾಯಿಯಂತೆ ಗೌರವಿಸಬೇಕು, ಜಲ ಕೇವಲ ಜಲವಾಗಿರದೆ ಎಲ್ಲಾ ಜೀವರಾಶಿಗಳಿಗೆ ಜೀವಜಲವಾಗಿದೆ ಎಂದು ಹೇಳಿದರು. ಜೀವಶಾಸ್ತ್ರದ ಉಪನ್ಯಾಸಕರಾದ ವಿಜಯ್ ಕುಮಾರ್ ಅವರು ಪರಿಸರ ಸಂರಕ್ಷಣೆ ಮಾಡದಿದ್ದರೆ ಭವಿಷ್ಯದಲ್ಲಿ ಘೋರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಕಾಲೇಜಿನ ವಿದ್ಯಾರ್ಥಿನಿ ಕು. ರೂಪಾ ಭಾಷಣ ಮಾಡಿದರು. ವಂದನಾರ್ಪಣೆಯನ್ನು ಉಪಪ್ರಾಂಶುಪಾಲರಾದ ಜಿ. ಶ್ರೀನಿವಾಸ ರೆಡ್ಡಿಯವರು ನೆರವೇರಿಸಿದರು.




DR B.R AMBEDAKAR BAHAVANA
ಭಾರತ ರತ್ನ,
ಸಂವಿಧಾನ ಶಿಲ್ಪಿ
ಡಾ|| ಬಿ.ಆರ್ ಅಂಬೇಡ್ಕರ್
ರವರ 134ನೇ ಹಾಗೂ
ಹಸಿರು ಕ್ರಾಂತಿಯ ಹರಿಕಾರ, ಮಾಜಿ ಉಪಪ್ರಧಾನಿ
ಡಾ. ಬಾಬು ಜಗಜೀವನ್ ರಾಮ್ಅವರ
118ನೇ ಜಯಂತ್ಯೋತ್ಸವ ಮತ್ತು
ನೂತನ ಡಾ. ಬಿ.ಆರ್ ಅಂಬೇಡ್ಕರ್ ಭವನದ
ಶಂಕುಸ್ಥಾಪನಾ ಸಮಾರಂಭಕ್ಕೆ ಆಗಮಿಸಿ
ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ
ಎಲ್ಲ ಅಭಿಮಾನಿಗಳಿಗೆ ಹಾಗೂ ಗಣ್ಯರಿಗೆ
ಅನಂತ ಅನಂತ ಧನ್ಯವಾದಗಳು.
"ಇದು ನಾನು ಕಲಿತ ಮಹತ್ವದ ಪಾಠ.
ನಾವು ಅಲ್ಪಸಂಖ್ಯಾತರ ಭಾಗವಾಗಿದ್ದಾಗ,
ಪ್ರಜಾಪ್ರಭುತ್ವವನ್ನು ನಾಶಗೊಳಿಸುತ್ತಿರುವ ಶಕ್ತಿಗಳ
ವಿರುದ್ಧ ಧೈರ್ಯವಾಗಿ ನಿಲ್ಲುವುದು ನಮ್ಮ ಕರ್ತವ್ಯ.
ಅದಕ್ಕಾಗಿ ನಾನು ಸದಾ ನಂಬುವುದೇನೆಂದರೆ
ಎಷ್ಟು ಅಂಧಕಾರ ಬಂದರೂ,
ಡಾ. ಬಿ.ಆರ್. ಅಂಬೇಡ್ಕರ್ ಅವರ
ಪರಂಪರೆಯ ಬೆಳಕು
ಭಾರತದ ಭವಿಷ್ಯವನ್ನು ಪ್ರಜ್ವಲಿಸುತ್ತಿರುತ್ತದೆ."
- ಡಾ. ಜಿ. ಪರಮೇಶ್ವರ್
ಶ್ರೀ ಬಿ.ವಿ ಜಯರಾಮು
ಕಾಂಗ್ರೆಸ್ ಮುಖಂಡರು
ಶುಭಕೋರುವವರು :
ಮಾಗಡಿ ಜಯರಾಮು ಅಭಿಮಾನಿ ಬಳಗ
ಶ್ರೀ ಕೆಂಪರಾಜು
ಗುತ್ತಿಗೆದಾರರು